ಸಂಪುಟ: 05 ಸಂಚಿಕೆ: 193 ಪುಟಗಳು: 08 ಶುಕ್ರವಾರ 26 ಸೆಪ್ಟೆಂಬರ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5
# ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ



" ಸಿಂಹಾಸನ ಗತ ನಿತ್ಯಂ ಪದ್ಮಾಶ್ರೀ ತಕರದ್ವಯಾ|
ಶುಭದಾಸ್ತು ಸದಾ ದೇವಿ ಸ್ಕಂದಮಾತಾ ಯಶಸ್ವಿನಿ||"

## ಸಮೀಕ್ಷಾ ಕರ್ತವ್ಯದಿಂದ ವಿಮುಕ್ತರಾಗುವ ನೌಕರರ ಮೇಲೆ ಶಿಸ್ತು ಕ್ರಮ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಮೂಲಕ ಕೈಗೊಳ್ಳಲಾಗಿರುವ ಸಾಮಾಜಿಕ, ಶೈಕ್ಷಣಿಕ ಸಮೀಕ್ಷಾ ಕಾರ್ಯದಲ್ಲಿ ನಿಯೋಜಿಸಲ್ಪಡುವ ಅಧಿಕಾರಿ, ನೌಕರರು ಸಮೀಕ್ಷಾ ಕಾರ್ಯಕ್ಕೆ ಹಾಜರಾಗದೇ ಮತ್ತು ಕರ್ತವ್ಯಗಳನ್ನು ನಿರ್ವಹಿಸದೇ ಇರುವಂತಹವರ ವಿರುದ್ಧ ಶಿಸ್ತುಕ್ರಮ ಜರುಗಿಸಲಾಗುವುದು ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ ಹಾಗೂ ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವ ಎಚ್.ಕೆ ಪಾಟೀಲ ತಿಳಿಸಿದರು. ಸಚಿವ ಸಂಪುಟದ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಈ ಸಮೀಕ್ಷಾ ಕಾರ್ಯದಲ್ಲಿ ನಿಯೋಜಿಸಲ್ಪಡುವ ಅಧಿಕಾರಿ, ನೌಕರರು ಸಮೀಕ್ಷಾ ಕಾರ್ಯಕ್ಕೆ ಗೈರುಹಾಜರಾದರೆ ಅಂತಹವರ ವಿರುದ್ಧ ಶಿಸ್ತುಕ್ರಮ ಜರುಗಿಸಲು ಬೆಂಗಳೂರು ವ್ಯಾಪ್ತಿಯಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತರಿಗೆ ಅಧಿಕಾರ ಪ್ರಾಯೋಜಿಸಲಾಗಿದೆ ಎಂದು ಹೇಳಿದರು.

## ಗೃಹಜ್ಯೋತಿ ಫಲಾನುಭವಿಗಳ ಸಂಖ್ಯೆ ಕಡಿತಕ್ಕೆ ಸರ್ಕಾರ ಷಡ್ಯಂತ್ರ

• ಉದಯವಾಹಿನಿ, ಬೆಂಗಳೂರು

ಗೃಹಜ್ಯೋತಿ ಫಲಾನುಭವಿಗಳ ಸಂಖ್ಯೆ ಕಡಿತಕ್ಕೆ ಕಾಂಗ್ರೆಸ್ ಸರ್ಕಾರದ ಷಡ್ಯಂತ್ರ ನಡೆಸಿದೆ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಆರೋಪಿಸಿದ್ದಾರೆ. ಈ ಕುರಿತು ತಮ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಲಕ್ಷಾಂತರ ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡುವ ಮೂಲಕ ಬಡವರ ಅನ್ನಭಾಗ್ಯಕ್ಕೆ ಕತ್ತರಿ ಹಾಕುತ್ತಿರುವ ಕಾಂಗ್ರೆಸ್ ಸರ್ಕಾರ ಈಗ 30 ದಿನಗಳ ಬದಲಾಗಿ, 40 ದಿನಗಳಿಗೆ ವಿದ್ಯುತ್ ಮೀಟರ್ ರೀಡಿಂಗ್ ತೆಗೆದುಕೊಳ್ಳುವ ಮೂಲಕ ಫಲಾನುಭವಿಗಳ ವಿದ್ಯುತ್ ಬಳಕೆಯ ಸರಾಸರಿ ಮಿತಿ ಏರಿಸಿ, ಗೃಹಜ್ಯೋತಿ ಯೋಜನೆಯಿಂದ ಅನರ್ಹಗೊಳಿಸುವ ಹುನ್ನಾರ ಮಾಡುತ್ತಿದೆ ಎಂದು ಕಿಡಿಕಾರಿದ್ದಾರೆ. ಕಾಕಾ ಪಾಟೀಲನಿಗೂ ಫ್ರೀ, ಮಹಾದೇವಪ್ಪನಿಗೂ ಫ್ರೀ ಎಂದು ಬೊಗಳೆ ಬಿಟ್ಟು ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಈಗ ಒಂದೊಂದೇ ಗ್ಯಾರೆಂಟಿ ಯೋಜನೆಯನ್ನು ಹಿಂಬಾಗಿಲ ಮೂಲಕ ಬಂದ್ ಮಾಡಲು ಹೊರಟಿದೆ ಎಂದು ಆರೋಪ ಮಾಡಿದ್ದಾರೆ.

## ವಿಪ್ರೋ ಕ್ಯಾಂಪಸ್‌ನಲ್ಲಿ ವಾಹನ ಸಂಚಾರಕ್ಕೆ ಅನುಮತಿ ನೀಡಲ್ಲ

• ಉದಯವಾಹಿನಿ, ಬೆಂಗಳೂರು

ಕ್ಯಾಂಪಸ್‌ನಲ್ಲಿ ವಾಹನ ಸಂಚಾರಕ್ಕೆ ಅನುವು ಮಾಡಿಕೊಡುವಂತೆ ಸಿಎಂ ಸಿದ್ದರಾಮಯ್ಯನವರ ಮನವಿಯನ್ನು ವಿಪ್ರೋ ಮುಖ್ಯಸ್ಥ ಅಜೀಂ ಪ್ರೇಮ್‌ಜಿ ತಿರಸ್ಕರಿಸಿದ್ದಾರೆ. ಇಬ್ಲೂರು ಜಂಕ್ಷನ್‌ನ ಔಟರ್ ರಿಂಗ್ ರೋಡ್ ಟ್ರಾಫಿಕ್ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ವಿಪ್ರೋ ಕ್ಯಾಂಪಸ್‌ನಲ್ಲಿ ಸೀಮಿತ ವಾಹನಗಳ ಸಂಚಾರಕ್ಕೆ ಸಿಎಂ ಸಿದ್ದರಾಮಯ್ಯ ಪತ್ರ ಬರೆದು ಮನವಿ ಮಾಡಿದ್ದರು. ಈ ಪತ್ರಕ್ಕೆ ಉತ್ತರಿಸಿ ಪತ್ರ ಬರೆದ ವಿಪ್ರೋ ಸಂಸ್ಥಾಪಕ ಅಜೀಂ ಪ್ರೇಮ್‌ಜಿ, ಸರ್ಜಾಪುರ ವಿಪ್ರೋ ಕ್ಯಾಂಪಸ್‌ನಲ್ಲಿ ವಾಹನ ಸಂಚಾರಕ್ಕೆ ಅವಕಾಶ ದೀರ್ಘಕಾಲಿಕ ಪರಿಹಾರ ಅಲ್ಲ. ಸರ್ಜಾಪುರದ ವಿಪ್ರೋ ಕ್ಯಾಂಪಸ್ ಜಾಗತಿಕ ಗ್ರಾಹಕರಿಗೆ ಸೇವೆಗಳನ್ನು ಒದಗಿಸುವ ವಿಶೇಷ ಆರ್ಥಿಕ ವಲಯ. ನಮ್ಮ ಒಪ್ಪಂದದ ನಿಯಮಗಳು ಆಡಳಿತ, ಪ್ರವೇಶ ನಿಯಂತ್ರಣ ಮಾನದಂಡಗಳು ಕಡ್ಡಾಯಗೊಳಿಸಿದೆ.

ಖಾಸಗಿ ಆಸ್ತಿಯ ಮೂಲಕ ಸಾರ್ವಜನಿಕ ವಾಹನ ಸಂಚಾರವು ಸುಸ್ಥಿರ, ದೀರ್ಘಕಾಲೀನ ಪರಿಹಾರವಲ್ಲ ಎಂದು ಅಜೀಂ ಪ್ರೇಮ್‌ಜೀ ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಶಾಶ್ವತ ಪರಿಹಾರಕ್ಕೆ ರಾಜ್ಯ ಸರ್ಕಾರದ ಜೊತೆ ವಿಪ್ರೋ ಮಾತುಕತೆ, ಪಾಲುದಾರಿಕೆಗೆ ಸಿದ್ಧ. ಶೀಘ್ರ ರಾಜ್ಯ ಸರ್ಕಾರದ ಅಧಿಕಾರಿಗಳ ಜೊತೆ ನಮ್ಮ ತಂಡ ಚರ್ಚಿಸಲಿದೆ ಎಂದು ತಿಳಿಸಿದ್ದಾರೆ.

ನಮ್ಮ ಸರ್ಜಾಪುರ ಕ್ಯಾಂಪಸ್ ಸಾರ್ವಜನಿಕ ರಸ್ತೆಗಳಿಗೆ ಉದ್ದೇಶಿಸದ ಪಟ್ಟಿ ಮಾಡಿದ ಕಂಪನಿ. ಅಲ್ಲದೇ ವಿಶೇಷ ಖಾಸಗಿ ಆಸ್ತಿಯಾಗಿದೆ. ಕಾನೂನು, ಆಡಳಿತ ಮತ್ತು ಶಾಸನಬದ್ಧ ಸವಾಲುಗಳನ್ನು ಎದುರಿಸುತ್ತೇವೆ. ಆದರೂ ಶಾಶ್ವತ ಪರಿಹಾರವನ್ನು ಕಂಡುಕೊಳ್ಳಲು ಕರ್ನಾಟಕ ಸರ್ಕಾರದೊಂದಿಗೆ ಕೈ ಜೋಡಿಸುತ್ತೇವೆ ಎಂದಿದ್ದಾರೆ.

## ಮದ್ಯದಂಗಡಿ ಹರಾಜು ಶೀಘ್ರ ಸಚಿವ ತಿಮ್ಮಾಪುರ ಹೇಳಿಕೆ

• ಉದಯವಾಹಿನಿ, ಬೆಂಗಳೂರು

'ಅವಧಿ ಮುಗಿದಿರುವ ಮದ್ಯದಂಗಡಿಗಳನ್ನು ಹರಾಜು ಮೂಲಕ ಹಂಚಿಕೆ ಮಾಡುವ ಪ್ರಕ್ರಿಯೆ ಆರಂಭವಾಗಿದೆ. ಕರಡು ನಿಯಮ ಬಿಡುಗಡೆ ಮಾಡಲಾಗಿದ್ದು, ಶೀಘ್ರದಲ್ಲೇ ಪ್ರಕ್ರಿಯೆ ಆರಂಭಿಸಲಾಗುವುದು' ಎಂದು ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ ತಿಳಿಸಿದರು. ಸುದ್ದಿಗಾರರ ಜೊತೆ ಮಾತನಾಡಿದ ಅವರು, 'ಹರಾಜು ಪ್ರಕ್ರಿಯೆಗೆ ತಯಾರಿ ಆಗುತ್ತಿದೆ. ಹರಾಜು ಪ್ರಕ್ರಿಯೆಯಲ್ಲಿ ಮೀಸಲಾತಿ ಕೊಡಬೇಕೆಂಬ ಚಿಂತನೆಯಿದೆ. ಕರಡು ನಿಯಮ ಈಗಾಗಲೇ ಸಿದ್ಧವಾಗಿದೆ' ಎಂದರು. 'ಸಾಮಾನ್ಯವಾಗಿ ಹರಾಜು ಹಾಕಬೇಕೇ, ಮೀಸಲಾತಿ ನೀಡಬೇಕೇ ಎಂಬ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆ ಶುಕ್ರವಾರ ಚರ್ಚೆ ಮಾಡುತ್ತೇನೆ. ಹರಾಜು ಪ್ರಕ್ರಿಯೆಯಿಂದ 2 ಸಾವಿರ ಕೋಟಿ ವರಮಾನ ಬರಬಹುದೆಂಬ ನಿರೀಕ್ಷೆಯಿದೆ' ಎಂದೂ ಅವರು ಹೇಳಿದರು.

# ದತ್ತಾಂಶದ ಗೌಪ್ಯತೆ ರಕ್ಷಣೆ ತಡೆಯಾಜ್ಞೆಗೆ ನಿರಾಕರಣೆ

ಕರ್ನಾಟಕ ಜಾತಿ ಗಣತಿ

ಪ್ರಮಾಣಪತ್ರ ಸಲ್ಲಿಸಲು ಸೂಚನೆ



ಸಮೀಕ್ಷೆಗೆ ಹೈಕೋರ್ಟ್ ಗ್ರೀನ್ ಸಿಗ್ನಲ್

1 ಕರ್ನಾಟಕ ಸರ್ಕಾರ ನಡೆಸುತ್ತಿರುವ ಜಾತಿ ಗಣತಿಗೆ ಕರ್ನಾಟಕ ಹೈಕೋರ್ಟ್ ತಡೆ ನೀಡಲು ನಿರಾಕರಣೆ.

2 ಸಮೀಕ್ಷೆಯಲ್ಲಿ ಭಾಗವಹಿಸುವುದು ಸ್ವಯಂಪ್ರೇರಿತ ಎಂದ ಹೈಕೋರ್ಟ್.

3 ಜನರು ಮಾಹಿತಿ ನೀಡಬೇಕು ಎಂದು ಸಮೀಕ್ಷೆ ನಡೆಸುವವರು ಒತ್ತಾಯ ಮಾಡುವಂತಿಲ್ಲ.

### ಸರ್ಕಾರಕ್ಕೆ ಬಿಗ್ ರಿಲೀಫ್

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಪ್ರಾರಂಭವಾಗಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಗ್ರೀನ್ ಸಿಗ್ನಲ್ ನೀಡಿರುವ ಹೈಕೋರ್ಟ್, ಎಲ್ಲಾ ದತ್ತಾಂಶವನ್ನು ಸೋರಿಕೆಯಾಗದಂತೆ ಸಂರಕ್ಷಣೆ ಮಾಡಬೇಕು ಎಂಬುದಾಗಿ ಷರತ್ತು ವಿಧಿಸಿದೆ. ರಾಜ್ಯದಲ್ಲಿ ನಾಗರಿಕರು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗಾಗಿ ಆಗಸ್ಟ್ 13ರಂದು ಸರ್ಕಾರ ಹೊರಡಿಸಿರುವ ಆದೇಶ ಪ್ರಶ್ನಿಸಿ ರಾಜ್ಯ ಒಕ್ಕಲಿಗರ ಸಂಘ, ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ, ಮಾಜಿ ಶಾಸಕರೂ ಆದ ಹಿರಿಯ ವಕೀಲ ಕೆಎನ್ ಸುಬ್ಬಾರೆಡ್ಡಿ ಮತ್ತಿತರರು ಸಲ್ಲಿಸಿರುವ ಪ್ರತ್ಯೇಕ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳ ವಿಚಾರಣೆಯನ್ನು ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಮತ್ತು ನ್ಯಾಯಮೂರ್ತಿ ಸಿಎಂ ಜೋಶಿ ಅವರ ನೇತೃತ್ವದ ವಿಭಾಗೀಯ ಪೀಠ ಗುರುವಾರ ಮುಂದುವರಿಸಿತು. ಅಲ್ಲದೆ, ಸಮೀಕ್ಷೆಯ ದತ್ತಾಂಶವನ್ನು ಸರ್ಕಾರ ಯಾರಿಗೂ ಬಹಿರಂಗಪಡಿಸಬಾರದು.

ದತ್ತಾಂಶದ ಸಂರಕ್ಷಣೆ ಸಂಬಂಧದ ಗೌಪ್ಯತೆಯನ್ನು ಆಯೋಗವೇ ರಕ್ಷಣೆ ಮಾಡಬೇಕು. ಜನರು ಸ್ವಯಂಪ್ರೇರಣೆಯಿಂದ ನೀಡಿದರಷ್ಟೇ ಮಾಹಿತಿ ಪಡೆಯಬೇಕು. ಮಾಹಿತಿ ನೀಡುವಂತೆ ಯಾವುದೇ ಒತ್ತಡ ಹಾಕಬಾರದು. ಈ ಕುರಿತಂತೆ ಸಾರ್ವಜನಿಕರಿಗೆ ಅರಿವು ಮೂಡಿಸಬೇಕು ಎಂದು ನ್ಯಾಯಪೀಠ ಷರತ್ತುಗಳನ್ನು ವಿಧಿಸಿದೆ. ಇದೇ ವೇಳೆ ದತ್ತಾಂಶದ ಗೌಪ್ಯತೆ ಸಂಬಂಧ ಪ್ರಮಾಣಪತ್ರ ಸಲ್ಲಿಸುವಂತೆ ಹಿಂದುಳಿದ ವರ್ಗಗಳ ಆಯೋಗಕ್ಕೆ ಸೂಚನೆ ನೀಡಿದ ಪೀಠ, ವಿಚಾರಣೆಯನ್ನು ಡಿಸೆಂಬರ್ 2ಕ್ಕೆ ಮುಂದೂಡಿತು. ವಾದ ಮುಂದುವರೆಸಿದ ಹಿಂದುಳಿದ ವರ್ಗಗಳ ಪರ ಹಿರಿಯ ವಕೀಲ ಪ್ರೊ. ರವಿವರ್ಮ ಕುಮಾರ್, ಸಮೀಕ್ಷೆಯಲ್ಲಿ ಭಾಗವಹಿಸುವುದು ಕಡ್ಡಾಯವಲ್ಲ ಎಂದು ದತ್ತಾಂಶ ಸಂಗ್ರಹಿಸಿರುವ ಸಿಬ್ಬಂದಿಗೆ ಮಾಹಿತಿ ನೀಡಲಾಗಿದೆಯೇ ಎಂದು ನ್ಯಾಯಾಲಯ ಕೇಳಿತ್ತು. ಹೈಕೋರ್ಟ್ ಕಳವಳದ ಹಿನ್ನೆಲೆ ಆಯೋಗದ ಸರ್ವೆಯ ವಿಧಾನವನ್ನು ಮರುಪರಿಶೀಲಿಸಿದ್ದೇವೆ. ಈ ಸಂಬಂಧ ಸಮೀಕ್ಷೆ ಮಾಡುವವರಿಗೆ ಮಾಹಿತಿ ನೀಡಲಾಗಿದೆ. ಲಿಂಗಾಯತ ಸಮುದಾಯವು ಹೊಸ ಸಮೀಕ್ಷೆ ನಡೆಸಬೇಕೆಂದು ಕೋರಿದ್ದರು. ಅಲ್ಲದೇ, ಒಕ್ಕಲಿಗರ ಸಂಘವು ಹಿಂದಿನ ಸಮೀಕ್ಷೆಯನ್ನು ತಿರಸ್ಕರಿಸಬೇಕೆಂದು ಸರ್ಕಾರಕ್ಕೆ ಮನವಿ ನೀಡಿತ್ತು. ಈ ದಾಖಲೆಯನ್ನೂ ಪೀಠದ ಗಮನಕ್ಕೆ ತರಲಾಗುತ್ತಿದೆ ಎಂದು ತಿಳಿಸಿದರು. ಸರ್ಕಾರದ ಪರ ವಾದಕ್ಕೆ ಪ್ರತಿಕ್ರಿಯೆಯಾಗಿ ವಾದ ಮಂಡಿಸಿದ ಅರ್ಜಿದಾರರ ಪರ ವಕೀಲರು, ಆಧಾರ್ ಕಾಯ್ದೆಯ ನಿಬಂಧನೆಗಳನ್ನು ಸರ್ಕಾರ ಪಾಲಿಸಬೇಕು. 2023ರ ಜಯಪ್ರಕಾಶ್ ಹೆಗ್ಡೆ ವರದಿಯ ಬಗ್ಗೆ ಹೇಳಲಾಗಿದೆ. ಆಯೋಗವು ಆ ವರದಿಯನ್ನು ಕೈಬಿಡಲಾಗಿದೆ. ಹೀಗಾಗಿ, ಇದನ್ನು ಕೈಬಿಡಲಾಗಿದೆ ಎನ್ನಲಾಗದು. ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರವು ಪರ್ಯಾಯವಾಗಿ ಗಣತಿ ಮಾಡಲಾಗದು. ಸಮೀಕ್ಷೆಯ ಹೆಸರಿನಲ್ಲಿ ಪ್ರಾಯೋಗಿಕವಾಗಿ ಗಣತಿ ಮಾಡಲಾಗುತ್ತಿದೆ ಎಂದು ಪೀಠಕ್ಕೆ ತಿಳಿಸಿದರು.

### ಸಮೀಕ್ಷೆಗೆ ತಡೆ ನೀಡಬೇಕು

ವಕೀಲ ಕೆ.ಎನ್ ಸುಬ್ಬಾರೆಡ್ಡಿ ಪರ ವಕೀಲ, ವಿವೇಕ್ ಸುಬ್ಬಾರೆಡ್ಡಿ, ಆಧಾರ್ ಮಾಹಿತಿಯನ್ನು ರಕ್ಷಿಸಲು 2016ರಲ್ಲಿ ಕಾನೂನು ಜಾರಿಗೊಳಿಸಲಾಗಿದೆ. ಇಲ್ಲಿ ನೀಡಲಾಗುವ ಮಾಹಿತಿಯನ್ನು ಸಂಗ್ರಹಿಸಿಡಲು ವ್ಯವಸ್ಥೆ ಎಲ್ಲಿದೆ? ಆಧಾರ್‌ನಲ್ಲಿ ಬಯೋಮೆಟ್ರಿಕ್ ಮಾಹಿತಿ ನೀಡಲಾಗಿತ್ತು. ಆದರೆ, ಆ ಎಲ್ಲಾ ಅಂಶಗಳನ್ನು ಡಿಜಿಟಲ್ ಪ್ರೊಟೆಕ್ಷನ್ ಕಾಯ್ದೆಯಡಿಲ್ಲಿ ರಕ್ಷಣೆ ನೀಡಲಾಗಿಲ್ಲ. ರಾಜ್ಯ ಸರ್ಕಾರ ಮಾಹಿತಿ ನೀಡುವವರಿಗೆ ಸರಿಯಾದ ರಕ್ಷಣೆ ನೀಡಲು ಸೂಕ್ತ ಕ್ರಮ ಕೈಗೊಂಡಿಲ್ಲ ಎಂದು ಪೀಠಕ್ಕೆ ವಿವರಿಸಿದರು. ಒಕ್ಕಲಿಗರ ಸಂಘದ ಪರ ಹಿರಿಯ ವಕೀಲ ಅಶೋಕ್ ಹಾರನಹಳ್ಳಿ, ಮಾಹಿತಿ ತಂತ್ರಜ್ಞಾನ ಕಾಯ್ದೆಯಡಿ ಮಾಹಿತಿ ರಕ್ಷಣೆ ಕಡ್ಡಾಯವಾಗಿದೆ. ಸೂಕ್ಷ್ಮ ವೈಯಕ್ತಿಕ ದತ್ತಾಂಶ ರಕ್ಷಣೆಗೆ ನೀತಿ ರೂಪಿಸಬೇಕಾಗಿದೆ. ಸಂಗ್ರಹಿಸಿದ ದತ್ತಾಂಶ ಎಲ್ಲಿ ಸಂಗ್ರಹಿಸುತ್ತಾರೆ. ಹ್ಯಾಕಿಂಗ್‌ನಿಂದ ದತ್ತಾಂಶ ರಕ್ಷಣೆಗೆ ಯಾವ ಕ್ರಮ ಕೈಗೊಂಡಿದ್ದಾರೆ. ಈ ಕುರಿತು ಯಾವುದೇ ಮಾಹಿತಿಯನ್ನು ಸರ್ಕಾರ ನೀಡಿಲ್ಲ. ಆದ್ದರಿಂದ ಸಮೀಕ್ಷೆಗೆ ತಡೆ ನೀಡಬೇಕು ಎಂದು ಕೋರಿದರು. ಅಖಿಲ ಕರ್ನಾಟಕದ ಬ್ರಾಹ್ಮಣ ಸಭಾದ ಪರ ಹಿರಿಯ ವಕೀಲ ಶ್ರೀರಂಗ, ಸಮೀಕ್ಷೆ ನಡೆದರೂ ಎಲ್ಲವೂ ಪಾರದರ್ಶಕವಾಗಿರಬೇಕು ಎಂದು ವಾದ ಮಂಡಿಸಿದರು.

### ಮಾಹಿತಿ ನೀಡುವಂತೆ ಒತ್ತಡ ಹೇರುವಂತಿಲ್ಲ

ಸಮೀಕ್ಷೆ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಬೇಕು ಅಂತ ನ್ಯಾಯಪೀಠ ಹೇಳಿದೆ. ಜನರು ಸ್ವಯಂಪ್ರೇರಣೆಯಿಂದ ಮಾಹಿತಿ ನೀಡಿದರಷ್ಟೇ ಅವರಿಂದ ಮಾಹಿತಿ ಪಡೆಯಬೇಕು ಅಂತ ಖಡಕ್ ಆಗಿ ಹೇಳಿದೆ. ಮಾಹಿತಿ ನೀಡುವಂತೆ ಜನರ ಮೇಲೆ ಯಾವುದೇ ಒತ್ತಡ ಹಾಕಬಾರದು ಎಂದು ಸ್ಪಷ್ಟವಾಗಿ ಸೂಚಿಸಿದೆ.



### ವಿಚಾರಣೆ ಮುಂದೂಡಿದ ಹೈಕೋರ್ಟ್ ನ್ಯಾಯಪೀಠ

ಇನ್ನು ಹಿಂದುಳಿದ ವರ್ಗಗಳ ಆಯೋಗ ಒಂದು ದಿನದ ಒಳಗೆ ದತ್ತಾಂಶ ಸಂಗ್ರಹ, ರಕ್ಷಣೆ ಬಗ್ಗೆ ಅಫಿಡವಿಟ್ ಸಲ್ಲಿಕೆಗೆ ಹೈಕೋರ್ಟ್ ಸೂಚನೆ ನೀಡಿದೆ. ಸಮೀಕ್ಷೆ ಬಗ್ಗೆ ಆಯೋಗ ಸಾರ್ವಜನಿಕ ಪ್ರಕಟಣೆ ಹೊರಡಿಸಬೇಕು. ಸ್ವಯಂ ಪ್ರೇರಿತವಾಗಿ ಸಮೀಕ್ಷೆಯಲ್ಲಿ ಭಾಗವಹಿಸಬಹುದು. ಮಾಹಿತಿ ನೀಡುವುದು ವ್ಯಕ್ತಿಯ ಸ್ವಯಂ ಪ್ರೇರಿತ ನಿರ್ಧಾರ ಅಂತ ಹೈಕೋರ್ಟ್ ಅಭಿಪ್ರಾಯಪಟ್ಟಿದೆ. ಇನ್ನು ಮುಂದಿನ ವಿಚಾರಣೆಯನ್ನು ಡಿಸೆಂಬರ್ ಮೊದಲ ವಾರಕ್ಕೆ ಹೈಕೋರ್ಟ್ ಮುಂದೂಡಿದೆ.

### ವಿಚಾರಣೆ ಏನಾಯ್ತು?

ಸರ್ಕಾರದ ಪರವಾಗಿ ವಾದ ಮಂಡಿಸಿದ ಪ್ರೊ. ರವಿಕುಮಾರ್, ಸಮೀಕ್ಷೆಯಲ್ಲಿ ಭಾಗವಹಿಸುವುದು ಕಡ್ಡಾಯವಲ್ಲ ಎಂದು ದತ್ತಾಂಶ ಸಂಗ್ರಹಿಸಿರುವವರಿಗೆ ಮಾಹಿತಿ ನೀಡಲಾಗಿ ದೆಯೇ ಎಂದು ನ್ಯಾಯಾಲಯ ಕೇಳಿತ್ತು. ಈ ಸಂಬಂಧ ದಾಖಲೆಯನ್ನು ಪೀಠಕ್ಕೆ ಸಲ್ಲಿಸಲಾಗುತ್ತಿದೆ. ಸಮೀಕ್ಷೆ ಮಾಡುವವರಿಗೆ ಮಾಹಿತಿ ನೀಡಲಾಗಿದೆ. ಲಿಂಗಾಯತ ಸಮುದಾಯವು ಹೊಸ ಸಮೀಕ್ಷೆ ನಡೆಸಬೇಕು ಎಂದು ಕೋರಿದ್ದರು. ಒಕ್ಕಲಿಗರ ಸಂಘವು ಹಿಂದಿನ ಸಮೀಕ್ಷೆಯನ್ನು ತಿರಸ್ಕರಿಸಬೇಕು ಎಂದು ಸರ್ಕಾರಕ್ಕೆ ಮನವಿ ನೀಡಿತ್ತು ಎಂದು ಕೋರ್ಟ್‌ನ ಗಮನಕ್ಕೆ ತಂದು ಅಗತ್ಯ ದಾಖಲೆಗಳನ್ನು ಸಲ್ಲಿಸಿದರು. ದತ್ತಾಂಶವನ್ನು ಹೇಗೆ ರಕ್ಷಿಸುತ್ತೀರಿ..? ಎಂದು ಹೈಕೋರ್ಟ್ ಸರ್ಕಾರಕ್ಕೆ ಪ್ರಶ್ನೆ ಮಾಡಿತು. ಇದಕ್ಕೆ ಇ-ಆಡಳಿತ ಇಲಾಖೆಯು ಅದನ್ನು ರಕ್ಷಿಸಲಿದೆ. ಅದಕ್ಕೆ ಪೂರಕವಾಗಿ ಅಫಿಡವಿಟ್ ಸಲ್ಲಿಸಲಾಗುವುದು ಎಂದು ಸರ್ಕಾರಿ ವಕೀಲರು ತಿಳಿಸಿದರು.

# ಬಿಎಸ್ ಯಡಿಯೂರಪ್ಪ ವಿರುದ್ಧ ಪ್ರಾಸಿಕ್ಯೂಶನ್ ಮಹತ್ವದ ಹೇಳಿಕೆ!

• ಉದಯವಾಹಿನಿ, ಬೆಂಗಳೂರು


ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಮೇಲಿನ ಪೋಕ್ಸೋ ಕೇಸ್‌ನಲ್ಲಿ ಕರ್ನಾಟಕ ಹೈಕೋರ್ಟ್‌ಗೆ ವಿಶೇಷ ಸರ್ಕಾರಿ ಅಭಿಯೋಜಕರು (ಪ್ರಾಸಿಕ್ಯೂಟರ್) ಮಹತ್ವದ ಹೇಳಿಕೆ ನೀಡಿದ್ದಾರೆ. ಬಿಎಸ್ ಯಡಿಯೂರಪ್ಪ ಅವರೇ ಒಪ್ಪಿಕೊಂಡಿದ್ದಾರೆ ಎಂದು ಪೀಠದ ಮುಂದೆ ಪ್ರಸ್ತಾಪಿಸಿದರು. ಇದಕ್ಕೆ ಕೋರ್ಟ್ ಸಾಕ್ಷಿ ಕೇಳಿತು.

### ಸಾಕ್ಷಿ ಕೇಳಿದ ಹೈಕೋರ್ಟ್

ಪೋಕ್ಸೊ ಪ್ರಕರಣದಲ್ಲಿ ವಿಚಾರಣಾ ನ್ಯಾಯಾಲಯ ಸಂಜ್ಞೇ ಪರಿಗಣಿಸಿರುವುದನ್ನು ಪ್ರಶ್ನಿಸಿ ಮಾಜಿ ಸಿಎಂ ಬಿ ಎಸ್ ಯಡಿಯೂರಪ್ಪ ಮತ್ತು ಇತರರು ಸಲ್ಲಿಸಿರುವ ಅರ್ಜಿ ವಿಚಾರಣೆಯನ್ನು ಕರ್ನಾಟಕ ಹೈಕೋರ್ಟ್‌ನ ನ್ಯಾಯಮೂರ್ತಿ ಎಂ ಐ ಅರುಣ್ ಅವರ ಏಕಸದಸ್ಯ ಪೀಠವು ಗುರುವಾರ ವಿಚಾರಣೆ ನಡೆಸಿತು.

ಯಡಿಯೂರಪ್ಪ ಪರವಾಗಿ ಹಿರಿಯ ವಕೀಲ ಸಿ.ವಿ.ನಾಗೇಶ್ ವಾದ ಮಂಡಿಸಿದರು. ಸರ್ಕಾರದ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕ ಪ್ರೊ.ರವಿವರ್ಮಕುಮಾರ್ ಹಾಜರಿದ್ದರು.

ಎಷ್ಟು ಮಂದಿ ಸಾಕ್ಷಿ ಹೇಳಿಕೆ ಪಡೆಯಲಾಗಿದೆ ಎಂದ ಕೋರ್ಟ್ ಗುರುವಾರ ವಿಚಾರಣೆ ಆರಂಭವಾಗುತ್ತಿದ್ದಂತೆ, ಪ್ರಕರಣದಲ್ಲಿ ಎಷ್ಟು ಮಂದಿಯ ಸಾಕ್ಷಿಯ ಹೇಳಿಕೆ ಪಡೆಯಲಾಗಿದೆ. ಅದರಲ್ಲಿ ಯಾರೆಲ್ಲಾ ಅದನ್ನು ಯಾರು ಒಪ್ಪುತ್ತಾರೆ? ಯಾರು ಒಪ್ಪುವುದಿಲ್ಲ? ಎಂದು ಹೈಕೋರ್ಟ್ ಪ್ರಶ್ನೆ ಮಾಡಿತು. ಹಿರಿಯ ವಕೀಲ ನಾಗೇಶ್ ಅವರು, ಸಂತ್ರಸ್ತೆ ಮಾತ್ರ ಆರೋಪ ಮಾಡುತ್ತಿರುವುದು. ಉಳಿದವರಾರು ಇಲ್ಲ ಎಂದು ಪೀಠದ ಗಮನಕ್ಕೆ ತಂದರು. ಮಧ್ಯ ಪ್ರವೇಶಿಸಿದ ವಿಶೇಷ ಸರ್ಕಾರಿ ಅಭಿಯೋಜಕ ಪ್ರೊ. ರವಿವರ್ಮಕುಮಾರ್ ಅವರು, ಬಿಎಸ್ ಯಡಿಯೂರಪ್ಪ ಅವರೇ ಒಪ್ಪಿಕೊಂಡಿದ್ದಾರೆ ಎಂದು ಹೇಳಿಕೆ ನೀಡಿದರು. ಕೂಡಲೇ ನಾಗೇಶ್ ಅವರು, ಏನು ಒಪ್ಪಿಕೊಂಡಿದ್ದಾರೆ ಎಂಬುದನ್ನು ತೋರಿಸುತ್ತೇನೆ. ಸ್ವಲ್ಪ ತಾಳ್ಮೆಯಿಂದ ಕಾಯಿರಿ ಎಂದರು.



### ಏನಿದು ಕೇಸ್?

ಮಹಿಳೆಯೊಬ್ಬರು ತನ್ನ 17 ವರ್ಷದ ಮಗಳ ಮೇಲೆ ಅತ್ಯಾಚಾರ ನಡೆದಿತ್ತು. ಆದರೆ, ಯಾವುದೇ ಕ್ರಮ ಜರುಗಿರಲಿಲ್ಲ. ಹೀಗಾಗಿ, ಬೆಂಗಳೂರಿನ ಡಾಲರ್ಸ್ ಕಾಲೋನಿಯಲ್ಲಿರುವ ಯಡಿಯೂರಪ್ಪ ಅವರ ಮನೆಗೆ ತನ್ನ ಮಗಳ ಜತೆ ಹೋಗಿದ್ದೆ. ಆ ಸಂದರ್ಭದಲ್ಲಿ ಬಾಲಕಿ ಜತೆ ಯಡಿಯೂರಪ್ಪ ಅವರು ಅನುಚಿತವಾಗಿ ವರ್ತಿಸಿದ್ದಾರೆ ಎಂದು ಆರೋಪ ಮಾಡಿದ್ದಾರೆ. ಈ ಸಂಬಂಧ ಸದಾಶಿವ ನಗರ ಠಾಣೆಗೆ ಆ ಮಹಿಳೆ ದೂರು ನೀಡಿದ್ದರು. ಈ ಹಿನ್ನೆಲೆ, ಯಡಿಯೂರಪ್ಪನವರ ವಿರುದ್ಧ ಪೋಕ್ಸೋ ಕಾಯ್ದೆಯಡಿ ಎಫ್‌ಐಆರ್ ದಾಖಲು ಮಾಡಲಾಗಿತ್ತು.

**ವಿಚಾರಣೆ ಮುಂದೂಡಿಕೆ:** ಮುಂದುವರೆದು, ಸಮಯ ವ್ಯರ್ಥ ಮಾಡಬೇಡಿ. ಏನಿದೆ ಎಂಬುದನ್ನು ಸಂಕ್ಷಿಪ್ತವಾಗಿ ಹೇಳಿ ಎಂದು ಕೋರ್ಟ್ ಕೆಲ ಕಾಲ ವಾದ - ಪ್ರತಿವಾದ ಆಲಿಸಿ, ವಿಚಾರಣೆಯನ್ನು ಅಕ್ಟೋಬರ್ 9 ಕ್ಕೆ ಮುಂದೂಡಿತು ಎಂದು ಬಾರ್ ಅಂಡ್ ಬೆಂಚ್ ವರದಿ ಮಾಡಿದೆ.

# ಬೆಂಗಳೂರಿನ ರಸ್ತೆಗುಂಡಿಗಳು ಬಿಜೆಪಿ ದುರಾಡಳಿತದ ಫಲ: ಡಿಕೆಶಿ

■ ರಸ್ತೆಗುಂಡಿ ಮುಚ್ಚುವ ಕೆಲಸಕ್ಕೆ 750 ಕೋಟಿ ಅನುದಾನ ಕೊಟ್ಟಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ

• ಉದಯವಾಹಿನಿ, ಬೆಂಗಳೂರು:

ನಗರದ ರಸ್ತೆ ಗುಂಡಿಗಳು ಬಿಜೆಪಿ ಸರ್ಕಾರದ ದುರಾಡಳಿತದ ಫಲ, ರಸ್ತೆಗುಂಡಿಗಳನ್ನು ಮುಚ್ಚಲು ನಾವು ಬದ್ಧರಾಗಿದ್ದೇವೆ. ಇದಕ್ಕಾಗಿಯೇ ಮುಖ್ಯಮಂತ್ರಿಗಳು 750 ಕೋಟಿ ರೂ. ಅನುದಾನ ನೀಡಿದ್ದಾರೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು. ರವೀಂದ್ರ ಕಲಾಕ್ಷೇತ್ರ ಆವರಣದಲ್ಲಿ ಖ್ಯಾತ ಸಾಹಿತಿ ಎಸ್.ಎಲ್ ಭೈರಪ್ಪನವರ ಪಾರ್ಥಿವ ಶರೀರಕ್ಕೆ ಅಂತಿಮ ನಮನ ಸಲ್ಲಿಸಿದ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಗರದಲ್ಲಿ ರಸ್ತೆಗುಂಡಿಗಳಿರುವುದು ನಿಜ. ಅವುಗಳನ್ನು ಮುಚ್ಚಲು ನಾವು ಕಾರ್ಯಪ್ರವೃತ್ತರಾಗಿದ್ದೇವೆ. ಎಲ್ಲೆಲ್ಲಿ ರಸ್ತೆಗುಂಡಿಗಳಿವೆ ಎಂದು ಮಾಹಿತಿ ನೀಡಿ ಎಂದು ಸಾರ್ವಜನಿಕರು, ಪೊಲೀಸರಿಗೆ ನಾನೇ ಮನವಿ ಮಾಡಿದ್ದೇನೆ. ಬಿಜೆಪಿ ಸರ್ಕಾರದ ದುರಾಡಳಿತದ ಪರಿಣಾಮವಾಗಿ ಈ ಪರಿಸ್ಥಿತಿ ಬಂದಿದೆ. ನಾವು ಈ ಸಮಸ್ಯೆಯನ್ನು ಬಗೆಹರಿಸುತ್ತೇವೆ. ಬೆಂಗಳೂರಿನ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಯಾವುದೇ ಅನುದಾನ ಕೊಟ್ಟಿಲ್ಲ ಎಂಬುದನ್ನು ಪ್ರತಿಭಟನೆ ಮಾಡುತ್ತಿರುವ ಬಿಜೆಪಿಗರು ಅರ್ಥಮಾಡಿಕೊಳ್ಳಬೇಕು. ನಾವು ಕೇಂದ್ರಕ್ಕೆ ಹೆಚ್ಚಿನ ತೆರಿಗೆ ಪಾವತಿ ಮಾಡುತ್ತಿದ್ದರೂ ಅವರು ಅನುದಾನ ನೀಡಿಲ್ಲ. ಬೊಮ್ಮಾಯಿ ಅವರ ಸರ್ಕಾರದ ಅವಧಿಯಲ್ಲೂ ಕೇಂದ್ರ ಸರ್ಕಾರದಿಂದ ಬೆಂಗಳೂರಿಗೆ ಸೂಕ್ತ ಅನುದಾನ ಸಿಕ್ಕಿಲ್ಲ. ಆದರೂ ನಾವು ಬೆಂಗಳೂರಿನ ಹಿತ ಕಾಪಾಡುತ್ತೇವೆ. ಬಿಜೆಪಿಗರು ಪ್ರತಿಭಟನೆ ಮಾಡಲಿ, ನಮ್ಮ ಕಾರ್ಯಕರ್ತರು ಬಿಜೆಪಿ ಆಡಳಿತದಲ್ಲಿರುವ ಹುಬ್ಬಳ್ಳಿ-ಧಾರವಾಡ ಸೇರಿದಂತೆ ಇತರೆ ಪಾಲಿಕೆಗಳಲ್ಲಿರುವ ರಸ್ತೆಗುಂಡಿ ಸಮಸ್ಯೆ ಬಗ್ಗೆ ಪ್ರತಿಭಟಿಸಲಿದ್ದಾರೆ ಎಂದರು. ಬಹಳ ಚಿಕ್ಕ ವಯಸ್ಸಿಗೆ ಸಾಹಿತ್ಯಲೋಕಕ್ಕೆ ಹೆಜ್ಜೆ ಇಟ್ಟು ತಮ್ಮ ಹೋರಾಟ ಆರಂಭಿಸಿದ್ದರು. ಅವರದು ಬಹಳ ಗಟ್ಟಿ ವ್ಯಕ್ತಿತ್ವ. ಮುಖ್ಯಮಂತ್ರಿಗಳು ಕೂಡ ಇವರ ಅಂತಿಮ ದರ್ಶನ ಪಡೆಯಲಿದ್ದು, ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತಿಮ ಸಂಸ್ಕಾರ ಮಾಡಲಾಗುವುದು. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ವೈಯಕ್ತಿಕವಾಗಿ, ಸರ್ಕಾರ ಪಕ್ಷದ ಪರವಾಗಿ ಪ್ರಾರ್ಥಿಸುತ್ತೇನೆ ಎಂದು ಹೇಳಿದರು. ಸ್ಮಾರಕ ನಿರ್ಮಾಣ ಮಾಡಬೇಕು ಎಂಬ ಮನವಿ ಬಗ್ಗೆ ಕೇಳಿದಾಗ, ಮನವಿಗಳು ಬಂದಿವೆ, ಈ ವಿಚಾರದಲ್ಲಿ ವೈಯಕ್ತಿಕವಾಗಿ ನಾನು ತೀರ್ಮಾನ ಮಾಡಲು ಆಗುವುದಿಲ್ಲ. ಈ ವಿಚಾರವನ್ನು ಮುಖ್ಯಮಂತ್ರಿಯವರು ಎಲ್ಲರ ಜೊತೆ ಚರ್ಚೆ ಮಾಡಿ ತೀರ್ಮಾನ ಮಾಡುತ್ತಾರೆ. ಇತ್ತೀಚೆಗೆ ಚಿತ್ರರಂಗಕ್ಕೆ ಸಂಬಂಧಿಸಿದ ಕೆಲವು ತೀರ್ಮಾನವನ್ನು ಸಚಿವ ಸಂಪುಟದಲ್ಲಿ ಚರ್ಚಿಸಿ ತೀರ್ಮಾನ ಮಾಡಿದ್ದೇವೆ ಎಂದು ತಿಳಿಸಿದರು. ಬಿಹಾರದ ಪಾಟ್ನಾದಲ್ಲಿ ನಡೆದ ಸಿಡಬ್ಲ್ಯೂಸಿ ಸಭೆಯ ನಿರ್ಣಯಗಳ ಕುರಿತು ಕೇಳಿದಾಗ, ಈ ವಿಚಾರವಾಗಿ ನಾನು ಇಂದು ಮಾತನಾಡುವುದಿಲ್ಲ. ನಾವು ಸಂವಿಧಾನಬದ್ಧವಾಗಿ ಸಿಕ್ಕಿರುವ ಒಬ್ಬ ವ್ಯಕ್ತಿಗೆ ಒಂದು ಮತ ಎಂಬ ಹಕ್ಕಿನ ರಕ್ಷಣೆಗೆ ನಾವು ಬದ್ಧವಾಗಿದ್ದೇವೆ ಎಂದರು.

### ಕೇಂದ್ರ ಯಾವುದೇ ಅನುದಾನ ಕೊಟ್ಟಿಲ್ಲ



### ಭೈರಪ್ಪ ಅವರದ್ದು ನೇರ ನುಡಿ, ಗಟ್ಟಿ ವ್ಯಕ್ತಿತ್ವ

1994ರಲ್ಲಿ ಕನಕಪುರದಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನವನ್ನು ನಡೆಸಲಾಗಿತ್ತು. ಆ ಸಾಹಿತ್ಯ ಸಮ್ಮೇಳನದ ಅಧ್ಯಕ್ಷತೆಯನ್ನು ಭೈರಪ್ಪ ಅವರು ವಹಿಸಿಕೊಂಡಿದ್ದರು. ಅವರ ಮಾತು, ಬರವಣಿಗೆ ಸದಾ ನೇರನುಡಿಯಿಂದ ಕೂಡಿತ್ತು. ಅಂದು ಬನಶಂಕರಿಯಿಂದ ಮೆರವಣಿಗೆ ಮೂಲಕ ಅವರನ್ನು ಕರೆದೊಯ್ಯಲಾಗಿತ್ತು ಎಂದು ಹೇಳಿದರು. ಅವರ ಕಾದಂಬರಿಗಳು ವಿದೇಶಿ ಭಾಷೆಗಳಿಗೆ ಭಾಷಾಂತರವಾಗಿದ್ದು, ಚಲನಚಿತ್ರಗಳಾಗಿಯೂ ಮೂಡಿಬಂದಿವೆ. ಭೈರಪ್ಪ ಅವರಿಗೆ ಮಾಧ್ಯಮಗಳು ಕೂಡ ಅತ್ಯುತ್ತಮ ಗೌರವ ಸಲ್ಲಿಸುತ್ತಿದ್ದು, ಎಲ್ಲಾ ಮಾಧ್ಯಮಗಳಿಗೆ ಅಭಿನಂದನೆ ಸಲ್ಲಿಸುತ್ತೇನೆ. ಭೈರಪ್ಪ ಅವರು ತಮ್ಮ ಬರವಣಿಗೆಯಲ್ಲಿ ನಮ್ಮ ಸಂಸ್ಕೃತಿಯನ್ನು ಎತ್ತಿ ಹಿಡಿದಿದ್ದಾರೆ. ಅವರಿಗೆ ರಾಷ್ಟ್ರಪ್ರಶಸ್ತಿ ಸೇರಿದಂತೆ ಪದ್ಮ ಪ್ರಶಸ್ತಿಗಳು ಲಭಿಸಿದೆ. ಇಡೀ ದೇಶದ ಗಣ್ಯರು ಭೈರಪ್ಪ ಅವರ ನಿಧನಕ್ಕೆ ಕಂಬನಿ ಮಿಡಿದಿದ್ದಾರೆ. ಅವರ ಸಿದ್ಧಾಂತ, ನಿಲುವು, ನಡೆ ಕೇವಲ ಸಾಹಿತ್ಯ ಲೋಕಕ್ಕೆ ಮಾತ್ರವಲ್ಲ, ಸಮಾಜದ ಎಲ್ಲಾ ವರ್ಗಕ್ಕೆ ಮಾರ್ಗದರ್ಶನವಾಗಿದೆ ಎಂದರು.

ಈ ದಿನದ ದರ | ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹11,444/Gram24ct ₹10,490/Gram22ct | ಬೆಳ್ಳಿ: ₹142.60/Gram

# ಪಾಲಿಕೆಯಲ್ಲಿ ಅವ್ಯವಹಾರ : ಆರೋಗ್ಯಧಿಕಾರಿ ಅಮಾನತ್ತಿಗೆ ಒತ್ತಾಯ

• ಉದಯವಾಹಿನಿ, ಬೆಂಗಳೂರು

ಪೌರ ಕಾರ್ಮಿಕರ ಅವಲಂಬಿತರ ಒಕ್ಕೂಟದ ವತಿಯಿಂದ ಹಿಂದಿನ ಪಾಲಿಕೆಯಲ್ಲಿ ಕೊಟ್ಯಂತರ ರೂಪಾಯಿ ಅವ್ಯವಹಾರ ಮಾಡಿರುವ ಡಾ||ಸವಿತಾರವರನ್ನು ಕೊಡಲೆ ಅಮಾನತ್ತು ಮಾಡಬೇಕು ಎಂದು ಅಧ್ಯಕ್ಷರಾದ ಕೆ.ಮೋಹನ್ ರವರು ಮುಖ್ಯ ಆಯುಕ್ತರು ಗ್ರೇಟರ್ ಬೆಂಗಳೂರು ಪ್ರಾಧಿಕಾರರವರಿಗೆ ದೂರು ಸಲ್ಲಿಸಿದರು.

ಆರೋಗ್ಯಧಿಕಾರಿ ಡಾ||ಸವಿತಾ ಎಸ್.ಕೆ.ರವರು ಈ ಹಿಂದೆ ಆರೋಗ್ಯಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಹಿಂದೆ ಆರ್.ಆರ್.ನಗರ ವಲಯ ಮತ್ತು ಬೊಮ್ಮನಹಳ್ಳಿ ವಲಯದಲ್ಲಿ ಕೋವಿಡ್-19ಸಂದರ್ಭದಲ್ಲಿ ಡಾ.ಸವಿತಾ ಎಸ್.ಕೆ.ರವರ ಪುತ್ರ ಎಸ್.ಚಿರಾಗ್ ರವರ ಒಡೆತನದ ಮೆ.ಎ.ವಿಎಸ್ ಎಂಟರ್ ಪ್ರೈಸಸ್ ಸಂಸ್ಥೆಗೆ ಕಾನೂನು ಬಾಹಿರವಾಗಿ ಗುತ್ತಿಗೆ ನೀಡಿರುತ್ತಾರೆ.


ಉದಯವಾಹಿನಿ ಚಿತ್ರ

**ಪುತ್ರನ ಸಂಸ್ಥೆಗೆ ಕಾನೂನು ಬಾಹಿರವಾಗಿ ಗುತ್ತಿಗೆ**

ಆರ್.ಆರ್.ನಗರ ವಲಯ ಮತ್ತು ಬೊಮ್ಮನಹಳ್ಳಿ ಪ್ರಕರಣದಲ್ಲಿ ಟಿ.ವಿ.ಸಿ.ಸಿ. ತನಿಖಾ ವರದಿಯಲ್ಲಿ ಅರೋಪ ಸಾಬಿತರಾಗಿರುತ್ತದೆ. ಪೂರ್ವ ವಲಯ ಪ್ರಕರಣದಲ್ಲಿ ಇಲಾಖೆ ವಿಚಾರಣೆ ಜರುಗಿಸಲು ಮುಖ್ಯ ಆಯುಕ್ತರು ಕ್ರಮ ಕೈಗೊಂಡಿರುತ್ತಾರೆ.

ಅಧಿಕಾರ ಮತ್ತು ಹಣ ದುರುಪಯೋಗ ಮಾಡಿದ ಇಲಾಖೆ ವಿಚಾರಣೆ ಎದುರಿಸುತ್ತಿರುವ ಅಧಿಕಾರಿಗಳಿಗೆ ನಾನ್ ಏಕ್ಸಿಕುಟೇವ್ ಹುದ್ದೆ ನೀಡಬೇಕೆಂದು ಆದೇಶ ಇದ್ದರು. ಕಾನೂನು ಬಾಹಿರವಾಗಿ ಡಾ.ಸವಿತಾ ಎಸ್.ಕೆ.ರವರನ್ನು ಮಹದೇವಪುರ ವಲಯಕ್ಕೆ ನಿಯೋಜನೆ ಮಾಡಿರುತ್ತಾರೆ.

ಡಾ||ಸವಿತಾ ಎಸ್.ಕೆ.ರವರ ಮೇಲೆ ಗಂಭೀರ ಪ್ರಕರಣ ಸಾಭಿತುರಾಗಿವುದರಿಂದ ಕೊಡಲೇ ಅಮಾನತ್ತು ಮಾಡಬೇಕು ಎಂದು ದೂರು ಸಲ್ಲಿಸಲಾಗಿದೆ ಎಂದು ಮೋಹನ್ ರವರು ಹೇಳಿದರು.

# ಟ್ರಿನಿಟಿ ವೃತ್ತದಲ್ಲಿದೆ ಎಐ ಡಿಜಿಟಲ್ ಬಿಲ್‌ಬೋರ್ಡ್

## ಸಂಚಾರ ನಿಯಮ ಉಲ್ಲಂಘಿಸುವುದನ್ನು ತಡೆಯಲು ಪೊಲೀಸರ ಹೊಸ ಕ್ರಮ

• ಉದಯವಾಹಿನಿ, ಬೆಂಗಳೂರು

ಟ್ರಾಫಿಕ್ ಸಿಗ್ನಲ್ ಜಂಪ್ ಮಾಡೋದು, ಹೆಲ್ಮೆಟ್ ಧರಿಸದೆ ಇರೋದು, ಹೈ ಸ್ಪೀಡ್‌ನಲ್ಲಿ ಗಾಡಿ ಓಡಿಸೋ ಮುನ್ನ ಹುಷಾರು. ಟ್ರಿನಿಟಿ ಸರ್ಕಲ್ ಬಳಿ ನಿಯಮ ಉಲ್ಲಂಘಿಸುವ ವಾಹನಗಳ ನಂಬರ್ ಪ್ಲೇಟ್, ದಂಡ ಎಲ್ಲಾ ಡಿಟೇಲ್ಸ್‌ನ ಡಿಸ್‌ಪ್ಲೇ ಮಾಡುವ ಎಐ ಬಿಲ್‌ಬೋರ್ಡ್ ಅಳವಡಿಕೆ ಮಾಡಲಾಗಿದೆ. ಇದರ ವಿಶೇಷತೆ ಏನು. ಯಾರ ಸಹಯೋಗದಿಂದ ಅಳವಡಿಸಲಾಗಿದೆ ಎಂಬೆಲ್ಲ ಮಾಹತಿ ಈ ಲೇಖನದಲ್ಲಿ ಇದೆ.

ಬೆಂಗಳೂರು ಟ್ರಾಫಿಕ್ ಪೊಲೀಸರು ವಾಹನಗಳ ಸಂಚಾರ ನಿಯಮ ಉಲ್ಲಂಘನೆ ಮಾಡುವವರಿಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಟ್ರಿನಿಟಿ ಸರ್ಕಲ್ ರಸ್ತೆಯಲ್ಲಿ, ಕಾರ್ಸ್24 ರ ರಸ್ತೆ ಸುರಕ್ಷತಾ ಉಪಕ್ರಮವಾದ ಕ್ರಾಶ್ ಫ್ರೀ ಇಂಡಿಯಾ ಎಂಬ ಸಂಸ್ಥೆಯ ಸಹಯೋಗದೊಂದಿಗೆ ಬಿಲ್ ಡಿಸ್‌ಪ್ಲೇ ಆಗುವ ಎಐ ಬೋರ್ಡ್ ಹಾಕಲಾಗಿದೆ.

ಈ ಬಿಲ್‌ಬೋರ್ಡ್ ನಿಯಮ ಉಲ್ಲಂಘನೆ ಮಾಡುವ ವಾಹನಗಳ ನೋಂದಣಿ ಸಂಖ್ಯೆಯನ್ನು ಪರಿಶೀಲಿಸಿ, ನೀವು ಎಲ್ಲಿಂದ ದಿನದ ಪ್ರಯಾಣ ಶುರುಮಾಡುತ್ತಿರೋ ಅಲ್ಲಿಂದ ರಿಯಲ್ ಟೈಮ್‌ನಲ್ಲಿ ನಿಮ್ಮ ವಾಹನದ ನಿಯಮ ಉಲ್ಲಂಘನೆ, ಬಾಕಿ ದಂಡ, ಪಿಯುಸಿ ಮಾಹಿತಿಯನ್ನು ಡಿಸ್‌ಪ್ಲೇ ಮಾಡುತ್ತದೆ. ಆದರೆ, ಇದು ದಂಡ ಕಟ್ಟಲು ಇದು ಒತ್ತಾಯಿಸುವುದಿಲ್ಲ. ಬದಲಿಗೆ, ಜಾಗೃತಿ ಮೂಡಿಸಿ ದಂಡ ಕಟ್ಟುವಂತೆ ಪ್ರೇರೇಪಿಸುತ್ತದೆ.



ಉದಯವಾಹಿನಿ ಚಿತ್ರ

ಇಲ್ಲಿಯವರೆಗೂ ನಗರದ ಪ್ರಮುಖ ರಸ್ತೆಗಳಲ್ಲಿ ಆರ್ಟಿಫಿಶಿಯಲ್ ಇಂಟಲಿಜೆನ್ಸ್ ಸಿಸಿಕ್ಯಾಮೇರಾದಿಂದ ಸಂಚಾರ ನಿಯಮ ಉಲ್ಲಂಘಿಸುವ ಮಾಲೀಕರ ಗಾಡಿ ಸಂಖ್ಯೆಯನ್ನು ದಂಡದ ಪಟ್ಟಿಗೆ ಫೋಟೋ ಕ್ಲಿಕ್ಕಿಸಿ ಸೇರಿಸುತ್ತಿತ್ತು. ಇನ್ಮುಂದೆ ನೀವು ಎಲ್ಲೆಲ್ಲಿ ನಿಯಮ ಉಲ್ಲಂಘಿಸಿದ್ದೀರಿ, ಎಷ್ಟು ಬಾರಿ ನಿಯಮ ಉಲ್ಲಂಘನೆ ಮಾಡಿದ್ದೀರಿ, ಎಷ್ಟು ದಂಡ ಕಟ್ಟಬೇಕು ಎಂಬುದು ರಸ್ತೆಯಲ್ಲಿಯೇ ಟಿವಿಗಳಲ್ಲಿ ಬಿಲ್ ಕಾಣಿಸುತ್ತದೆ. ಟ್ರಿನಿಟಿ ಸರ್ಕಲ್ ಬಳಿ ಈ ಬೋರ್ಡ್ ಅಳವಡಿಕೆ ಮಾಡಿದ್ದು, ಈ ರಸ್ತೆಯನ್ನು ದಾಟುವ ಪ್ರತಿ ಸವಾರನ ರೂಲ್ಸ್ ಬ್ರೇಕ್ ವಿವರ ಕಾಣಿಸಲಿದೆ.

> **ಕಾರ್ಸ್24 ಪ್ರತಿನಿಧಿಯೊಬ್ಬರು ಮಾತನಾಡಿ, ತರಗತಿಯಲ್ಲಿ ಗಲಾಟೆ ಮಾಡುವ ಮಕ್ಕಳ ಹೆಸರನ್ನು ಬೋರ್ಡ್ ಮೇಲೆ ಬರೆಯುತ್ತಿದ್ದ ರೀತಿ, ಸಂಚಾರ ನಿಯಮ ಉಲ್ಲಂಘಿಸುವವರ ಬಿಲ್ ಬೋರ್ಡ್ ಅಳವಡಿಸುವ ಬಗ್ಗೆ ಐಡಿಯಾ ಕೊಟ್ಟಿದ್ದರು. ಆ ಬಳಿಕ ಅದನ್ನೇ ಕಾರ್ಯರೂಪಕ್ಕೆ ತರಲಾಗಿದೆ ಎನ್ನಲಾಗುತ್ತಿದೆ**

**ಈ ಬಿಲ್‌ಬೋರ್ಡ್ ಹೇಗೆ ಕೆಲಸ ಮಾಡತ್ತೆ?:** ಬೆಂಗಳೂರಿನ ಟ್ರಿನಿಟಿ ಬಳಿಯಿರುವ ಸಿಗ್ನಲ್ ಬಳಿ ಎಐ ಸ್ಕ್ಯಾನರ್ ಅಳವಡಿಸಲಾಗಿದೆ. ಈ ಕ್ಯಾಮೆರಾಗಳು 100 ಮೀ. ದೂರದಿಂದಲೇ ವಾಹನ ಸ್ಕ್ಯಾನ್ ಮಾಡಿ. ರಿಯಲ್ ಟೈಮ್‌ನಲ್ಲೇ ಸಿಗ್ನಲ್ ಜಂಪ್ ಮಾಡುವುದು, ಸೀಟ್ ಬೆಲ್ಟ್ ಹಾಕದೇ ಇರುವುದು ಮುಂತಾದ ಉಲ್ಲಂಘನೆಗಳನ್ನು ರಾಷ್ಟ್ರೀಯ ವಾಹನ್ ಡೇಟಾಬೇಸ್‌ನಿಂದ ಮಾಹಿತಿ ಸಂಗ್ರಹಿಸಿ ತೋರಿಸುತ್ತದೆ.

### ಸಾರ್ವಜನಿಕರು ಹೇಳಿದ್ದೇನು?

**ಟ್ರಾಫಿಕ್ ಪೊಲೀಸರ ಈ ಹೊಸ ಪ್ರಯತ್ನಕ್ಕೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ಕೆಲವರು ಇದನ್ನು ಸ್ವಾಗತಿಸಿದ್ದಾರೆ. ಆದರೆ, ಇನ್ನೂ ಕೆಲವರು ಇದು ಖಾಸಗಿತನದ ಉಲ್ಲಂಘನೆ ಎಂದು ಟೀಕಿಸಿದ್ದಾರೆ. ಇನ್ನು ಕೆಲವರು ಈ ಬೋರ್ಡ್ ಹಾಕಿದ ನಂತರ ಅನೇಕ ಚಲನ್‌ಗಳು ಕ್ಲಿಯರ್ ಆಗಿವೆ ಎಂದು ಹೇಳಿದ್ದಾರೆ.**

ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರ ಅವರ ಕಾರಿನ 10 ಟ್ರಾಫಿಕ್ ನಿಯಮ ಉಲ್ಲಂಘನೆಗಳನ್ನೂ ಇದು ತೋರಿಸಿದೆ.

**ಬಿಲ್‌ಬೋರ್ಡ್ ಹಾಕೋಕೆ ಕಾರಣ ಏನು?:** ಅನೇಕ ವಾಹನ ಸವಾರರಿಗೆ ತಾವು ಸಂಚಾರ ನಿಯಮ ಉಲ್ಲಂಘಿಸಿದ ನಂತರ, ಬರುವ ದಂಡದ ಚಲನ್‌ಗಳ ಬಗ್ಗೆ ತಿಳಿದಿರುವುದಿಲ್ಲ. ಹೀಗಾಗಿ, ಅವರು ನಿರ್ಲಕ್ಷ್ಯ ವಹಿಸುತ್ತಾರೆ. ಆ ನಂತರ ಒಂದೇ ಸಲ ದಂಡ ಕಟ್ಟುವುದು ಅವರಿಗೆ ಹೊರೆಯಾಗುತ್ತಿದೆ ಎಂದು ಕಾರ್ಸ್ 24 ಪ್ರತಿನಿಧಿಗಳು ಮತ್ತು ಜಂಟಿ ಪೊಲೀಸ್ ಆಯುಕ್ತರಾದ ಕಾರ್ತಿಕ್ ರೆಡ್ಡಿ ಅವರು ಮಾತನಾಡಿಕೊಳ್ಳುತ್ತಿದ್ದರು.

# ಯಶವಂತಪುರ: ಮಂಗಳೂರು ನಡುವೆ ವಿಶೇಷ ರೈಲು



• ಉದಯವಾಹಿನಿ, ಬೆಂಗಳೂರು

ದಸರಾ ಹಬ್ಬದ ಸಮಯದಲ್ಲಿ ಪ್ರಯಾಣಿಕರ ಹೆಚ್ಚುವರಿ ದಟ್ಟಣೆಯನ್ನು ನಿಭಾಯಿಸಲು, ನೈಋತ್ಯ ರೈಲ್ವೆಯು ಯಶವಂತಪುರ ಮತ್ತು ಮಂಗಳೂರು ಜಂಕ್ಷನ್ ನಡುವೆ ಒಂದು ಟ್ರಿಪ್‌ಗೆ ವಿಶೇಷ ಎಕ್ಸ್‌ಪ್ರೆಸ್ ರೈಲನ್ನು ಓಡಿಸಲಿದೆ.

ರೈಲು ಸಂಖ್ಯೆ 06257 ಯಶವಂತಪುರ-ಮಂಗಳೂರು ಜಂಕ್ಷನ್ ವಿಶೇಷ ಎಕ್ಸ್‌ಪ್ರೆಸ್ ರೈಲು ಸೆ.30ರ ರಾತ್ರಿ 11:55ಕ್ಕೆ ಯಶವಂತಪುರದಿಂದ ಹೊರಟು, ಮರುದಿನ ಬೆಳಗ್ಗೆ 11:15ಕ್ಕೆ ಮಂಗಳೂರು ಜಂಕ್ಷನ್ ತಲುಪಲಿದೆ. ವಾಪಸಾತಿ ಪ್ರಯಾಣದಲ್ಲಿ, ರೈಲು ಸಂಖ್ಯೆ 06258 ಮಂಗಳೂರು ಜಂಕ್ಷನ್ ಯಶವಂತಪುರ ವಿಶೇಷ ಎಕ್ಸ್‌ಪ್ರೆಸ್ ರೈಲು ಅ.1 ರಂದು ಮಧ್ಯಾಹ್ನ 2:35ಕ್ಕೆ ಮಂಗಳೂರು ಜಂಕ್ಷನ್‌ನಿಂದ ಹೊರಟು, ಅದೇ ದಿನ ರಾತ್ರಿ 11:30 ಕ್ಕೆ ಯಶವಂತಪುರ ತಲುಪಲಿದೆ. ಈ ರೈಲು ಕುಣಿಗಲ್, ಚನ್ನರಾಯಪಟ್ಟಣ, ಹಾಸನ, ಸಕಲೇಶಪುರ, ಸುಬ್ರಹ್ಮಣ್ಯ ರೋಡ್, ಕಬಕ ಪುತ್ತೂರು ಮತ್ತು ಬಂಟ್ವಾಳ ನಿಲ್ದಾಣಗಳಲ್ಲಿ ನಿಲುಗಡೆ ಮಾಡಲಿದೆ. ಈ ರೈಲು 22 ಬೋಗಿಗಳನ್ನು ಒಳಗೊಂಡಿದ್ದು, ಇದರಲ್ಲಿ ಎರಡು ಎಸಿ 2-ಟೈರ್, ಮೂರು ಎಸಿ 3-ಟೈರ್, ಹನ್ನೊಂದು ಸ್ಲೀಪರ್ ಕ್ಲಾಸ್, ನಾಲ್ಕು ಸಾಮಾನ್ಯ ಎರಡನೇ ದರ್ಜೆ ಮತ್ತು ಎರಡು ಎಸ್ ಎಲ್‌ಆರ್/ಡಿ ಬೋಗಿಗಳು ಇರಲಿವೆ.

# ಕಾವೇರಿ ಆರತಿಗೆ ಪ್ರತಿ ದಿನ ಒಂದೊಂದು ತಾಲ್ಲೂಕಿನ ಜನರಿಗೆ ಆಹ್ವಾನ

• ಉದಯವಾಹಿನಿ, ಬೆಂಗಳೂರು

ಶುಕ್ರವಾರದಿಂದ ಕೆಆರ್‌ಎಸ್‌ನಲ್ಲಿ ಕಾವೇರಿ ಆರತಿ ಪ್ರಾರಂಭ ಆಗಲಿದ್ದು, ಎಲ್ಲಾ ಸಿದ್ದತೆಗಳು ಮುಗಿದಿವೆ. 5 ದಿನಗಳ ಕಾಲ ಕಾವೇರಿ ಅರತಿ ನಡೆಯಲಿದೆ ಎಂದು ಸಚಿವ ಚೆಲುವರಾಯಸ್ವಾಮಿ ತಿಳಿಸಿದ್ದಾರೆ. ವಿಧಾನಸೌಧದಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಅವರು, ಕಾವೇರಿ ಆರತಿಗೆ ಸದ್ಯ ಶಾಶ್ವತ ವ್ಯವಸ್ಥೆ ಮಾಡಿಲ್ಲ. ಇರೋ ಜಾಗದಲ್ಲಿ ಕಾವೇರಿ ಆರತಿ ನಾಳೆಯಿಂದ (ಸೆ.26) ಪ್ರಾರಂಭ ಮಾಡ್ತಿದ್ದೇವೆ. ನಾಳೆ ಡಿಸಿಎಂ ಚಾಲನೆ ಕೊಡ್ತಾರೆ. ಶಾಶ್ವತವಾಗಿ ಜಾಗ ಗುರುತು ಮಾಡಿಲ್ಲ. ಕೋರ್ಟ್‌ನಲ್ಲಿ ಕೇಸ್ ಇದೆ. ಅದು ಮುಗಿದ ಮೇಲೆ ಶಾಶ್ವತ ವ್ಯವಸ್ಥೆ ಮಾಡುತ್ತೇವೆ. ಈಗ ಇರುವ ಉತ್ತಮ ಜಾಗದಲ್ಲಿ ಮಾಡಿದ್ದೇವೆ ಎಂದರು. ನಿತ್ಯ ಒಂದೊಂದು ತಾಲ್ಲೂಕು ಜನರಿಗೆ ಬರೋದಕ್ಕೆ ಹೇಳಿದ್ದೇವೆ. 3 ತಾಲ್ಲೂಕು ಜನರಿಗೆ ಆಹ್ವಾನ ನೀಡಲಾಗಿದೆ. ನಾವು ಹಿಂದುತ್ವ ವಿರೋಧ ಅಲ್ಲ. ಧಾರ್ಮಿಕ ವಿಚಾರಕ್ಕೂ ನಾವು ವಿರೋಧ ಮಾಡಿಲ್ಲ. ಚಪಲಕ್ಕೆ ಕೆಲವರು ಮಾತಾಡ್ತಾರೆ ಮಾತಾಡಲಿ ಎಂದು ಇದೇ ವೇಳೆ ಬಿಜೆಪಿ ವಿರುದ್ಧ ಕಿಡಿಕಾರಿದರು.

# ಗ್ಯಾಸ್ ಸಿಲಿಂಡರ್, ದ್ವಿಚಕ್ರ ವಾಹನ ಕಳ್ಳತನ

• ಉದಯವಾಹಿನಿ, ಬೆಂಗಳೂರು

ದ್ವಿಚಕ್ರ ವಾಹನ, ಗ್ಯಾಸ್ ಸಿಲಿಂಡರ್‌ಗಳನ್ನು ಕಳವು ಮಾಡುತ್ತಿದ್ದ ಆರೋಪಿಯನ್ನು ವರ್ತೂರು ಠಾಣೆ ಪೊಲೀಸರು ಬಂಧಿಸಿದ್ದಾರೆ. ಕೋರಮಂಗಲದ ವೆಂಕಟಾಪುರ ನಿವಾಸಿ ಟಿ.ಮುನಿರಾಜು(33) ಬಂಧಿತ ಆರೋಪಿ. ಬಂಧಿತನಿಂದ ರೂ.8.5 ಲಕ್ಷ ಮೌಲ್ಯದ 20 ಗ್ಯಾಸ್ ಸಿಲಿಂಡರ್ ಮತ್ತು 11 ದ್ವಿಚಕ್ರ ವಾಹನ ವಶಕ್ಕೆ ಪಡೆಯಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದರು. ಗುಂಜೂರು ಗ್ರಾಮದ ಹೊಸಹಳ್ಳಿ ರಸ್ತೆಯ ಶ್ರೀರಾಮ ದೇವಸ್ಥಾನದ ಬಳಿ ಸುರೇಶ್ ಅವರು ನಿಲುಗಡೆ ಮಾಡಿದ್ದ ಬೈಕ್ ಕಳವು ಮಾಡಿದ್ದ, ಕದ್ದ ಬೈಕ್‌ನಲ್ಲಿ ಕಮರ್ಷಿಯಲ್ ಸಿಲಿಂಡರ್ ಕಳವು ಮಾಡುತ್ತಿದ್ದ. ಆರೋಪಿಯ ಬಂಧನದಿಂದ ನಗರದ ವಿವಿಧ ಠಾಣೆಗಳಲ್ಲಿ ದಾಖಲಾಗಿದ್ದ ಕಳವು ಪ್ರಕರಣಗಳು ಪತ್ತೆಯಾಗಿವೆ ಎಂದು ಪೊಲೀಸರು ಹೇಳಿದರು. ವರ್ತೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸಮೀಕ್ಷೆ ಕಾರ್ಯದಿಂದ ವ್ಯತ್ಯಯವಾಗದು ವಿದ್ಯುತ್ ಬಿಲ್: ಬೆಸ್ಕಾಂ ಸ್ಪಷ್ಟನೆ

• ಉದಯವಾಹಿನಿ, ಬೆಂಗಳೂರು

ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಮನೆಗಳನ್ನು ಗುರುತಿಸಿ ಪಟ್ಟಿ ಮಾಡುವ ಕಾರ್ಯಕ್ಕೆ ಬೆಸ್ಕಾಂ ಮೀಟರ್ ರೀಡರ್‌ಗಳು ನಿಯೋಜನೆಗೊಂಡಿದ್ದರಿಂದ ಕೆಲ ಗೃಹ ಜ್ಯೋತಿ ಗ್ರಾಹಕರ ಬಿಲ್‌ನಲ್ಲಿ ಆಗಿದ್ದ ವ್ಯತ್ಯಯವನ್ನು ಸರಿಪಡಿಸಿ ಪರಿಷ್ಕೃತ ಬಿಲ್ ವಿತರಿಸಲಾಗುವುದು ಎಂದು ಬೆಸ್ಕಾಂ ಸ್ಪಷ್ಟಪಡಿಸಿದೆ.

ಸೆಪ್ಟೆಂಬರ್ ತಿಂಗಳಲ್ಲಿ ಮೀಟರ್ ರೀಡರ್‌ಗಳು ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಭಾಗವಾಗಿ ಮನೆಗಳನ್ನು ಪಟ್ಟಿ ಮಾಡುವ ಕಾರ್ಯ ಹಾಗೂ ಮೀಟರ್ ರೀಡಿಂಗ್‌ಅನ್ನು ಪ್ರೋಬ್‌ಗಳ ಮೂಲಕ ಮೊದಲ ಬಾರಿಗೆ ನಡೆಸುತ್ತಿರುವುದರಿಂದ ವಿದ್ಯುತ್ ಬಿಲ್ ವಿತರಣೆಯ ದಿನಾಂಕವನ್ನು ಸೆ.15ನೇ ತಾರಿಕಿನಿಂದ 25ನೇ ತಾರೀಕಿನವರೆಗೆ ವಿಸ್ತರಿಸಲಾಗಿದೆ. ಈ ಪ್ರಕ್ರಿಯೆಯಿಂದ ಕೆಲ ಪ್ರಕರಣಗಳಲ್ಲಿ ಗೃಹಜ್ಯೋತಿ ಗ್ರಾಹಕರಿಗೆ ಭಾಗಶಃ ಬಿಲ್ ಬಂದಿರುವುದು ಬೆಸ್ಕಾಂ ಗಮನಕ್ಕೆ ಬಂದಿದೆ. ಅವುಗಳನ್ನು ಕಳೆದ ತಿಂಗಳುಗಳ ಸರಾಸರಿಯಂತೆ ಲೆಕ್ಕ ಹಾಕಿ, ಪರಿಷ್ಕೃತ ಬಿಲ್ ನೀಡಲಾಗುತ್ತದೆ.

ಈ ಮೂಲಕ ಗೃಹಜ್ಯೋತಿ ಫಲಾನುಭವಿಗಳಿಗೆ ಯೋಜನೆಯ ಲಾಭ ಪಡೆಯುವಲ್ಲಿ ಯಾವುದೇ ವ್ಯತ್ಯಯವಾಗದಂತೆ ಕ್ರಮವಹಿಸಲಾಗುವುದು ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

# ಆನೇಪಾಳ್ಯ ರಸ್ತೆ ಡಾಂಬರೀಕರಣ ಮಾಡಿ: ಆಯುಕ್ತ ರಾಜೇಂದ್ರ, ಚೋಳನ್ ಸೂಚನೆ

• ಉದಯವಾಹಿನಿ, ಬೆಂಗಳೂರು

ಕೇಂದ್ರ, ನಗರ ಪಾಲಿಕೆ ವ್ಯಾಪ್ತಿಯ ಆನೇಪಾಳ್ಯ ಮುಖ್ಯರಸ್ತೆ ಹದಗೆಟ್ಟಿದ್ದು, ವಾಹನ ಸಂಚಾರಕ್ಕೆ ಸಮಸ್ಯೆ ಆಗುತ್ತಿದೆ. ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಈ ರಸ್ತೆಗೆ ವೆಟ್‌ಮಿಕ್ ಹಾಕಿ. ಡಾಂಬರೀಕರಣ ಮಾಡಬೇಕು ಎಂದು ಆಯುಕ್ತ ರಾಜೇಂದ್ರ, ಚೋಳನ್ ಸೂಚಿಸಿದರು.

ವೈಟ್ ಟಾಪಿಂಗ್ ಕಾಮಗಾರಿ ನಡೆಯುವ ರಸ್ತೆಗಳಿಗೆ ಭೇಟಿ ನೀಡಿ, ಪರಿಶೀಲಿಸಿದ ಅವರು, ಪಾಲ್ಮ್ ಗ್ರೂವ್ ಪ್ರದೇಶದಲ್ಲಿ 1 ಕಿ.ಮೀ ಉದ್ದದ ರಸ್ತೆಗೆ ವೈಟ್ ಟಾಪಿಂಗ್ ಕಾಮಗಾರಿ ಕೈಗೊಳ್ಳಲಾಗಿದೆ. ಈಗಾಗಲೇ 450 ಮೀ. ಉದ್ದದ ರಸ್ತೆಗೆ ಕಾಂಕ್ರೀಟ್ ಹಾಕಲಾಗಿದೆ. ಪಾದಚಾರಿ ಮಾರ್ಗ, ರಸ್ತೆ ಅಂಚಿನ ಕಾಮಗಾರಿ ಬಾಕಿ ಇದ್ದು, ತ್ವರಿತವಾಗಿ ಪೂರ್ಣಗೊಳಿಸಬೇಕು. ರೆಸಿಡೆನ್ಸಿ ರಸ್ತೆ ಗುಂಡಿಗಳನ್ನು ಆದ್ಯತೆ ಮೇರೆಗೆ ಮುಚ್ಚಬೇಕು' ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಕೇಂದ್ರ, ನಗರ ಪಾಲಿಕೆ ವ್ಯಾಪ್ತಿಯಲ್ಲಿ ಮೂರು ದಿನಗಳಲ್ಲಿ 28 ರಸ್ತೆಗಳ 445 ಗುಂಡಿಗಳು, 24,905 ಚದರ ಮೀ. ವಿಸ್ತೀರ್ಣದ ಪ್ಯಾಚ್‌ವರ್ಕ್ ಕಾರ್ಯ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

**ಸಾರ್ವಜನಿಕರಿಗೆ ತೊಂದರೆಯಾಗದಂತೆ ಗುಂಡಿ ಮುಚ್ಚಿ:** ರಸ್ತೆ ಗುಂಡಿ ಮುಚ್ಚುವಾಗ ಸಾರ್ವಜನಿಕರಿಗೆ ತೊಂದರೆ ಆಗದಂತೆ ವ್ಯವಸ್ಥಿತವಾಗಿ ನಿರ್ವಹಿಸಬೇಕು ಎಂದು ಪಶ್ಚಿಮ ನಗರ ಪಾಲಿಕೆ ಆಯುಕ್ತ ಕೆ.ವಿ. ರಾಜೇಂದ್ರ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಉದಯವಾಹಿನಿ ಚಿತ್ರ


> **ಪಾಲಿಕೆ ವ್ಯಾಪ್ತಿಯ ವಾರ್ಡ್ ಸಂಖ್ಯೆ 35ರ ಅರನೇ ಹಾಗೂ ಏಳನೇ ಮುಖ್ಯ ರಸ್ತೆ ಎಂಎಸ್‌ಆರ್ ನಗರ ಮತ್ತಿಕೆರೆ ಉಪವಿಭಾಗದ ಸ್ಥಳಕ್ಕೆ ಭೇಟಿ ನೀಡಿ, ರಸ್ತೆ ಗುಂಡಿ ಮುಚ್ಚುವ ಕಾರ್ಯವನ್ನು ಪರಿಶೀಲಿಸಿದ ನಂತರ ಅವರು ಮಾತನಾಡಿದರು. ಜಲಮಂಡಳಿಯೊಂದಿಗೆ ಸಮನ್ವಯದಿಂದ ಕಾರ್ಯ ನಿರ್ವಹಿಸಬೇಕು. ಒಂದು ರಸ್ತೆ ಗುಂಡಿ ಮುಚ್ಚುವ ಕಾರ್ಯವನ್ನು ತೆಗೆದುಕೊಂಡಾಗ, ಆ ರಸ್ತೆಯಲ್ಲಿ ಇರುವ ಎಲ್ಲಾ ಗುಂಡಿಗಳನ್ನು ಮುಚ್ಚಬೇಕು' ಎಂದು ಹೇಳಿದರು.**

# ಗಿಗ್ ಕಾರ್ಮಿಕರ ಕಾನೂನಿನ ಬಗ್ಗೆ ಸ್ಪಷ್ಟತೆ ಕೇಳಿದ ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ಬೈಕ್ ಟ್ಯಾಕ್ಸಿ ನಿಷೇಧಕ್ಕೆ ಸಂಬಂಧಿಸಿದಂತೆ ಕರ್ನಾಟಕ ಹೈಕೋರ್ಟ್ ರಾಜ್ಯ ಸರ್ಕಾರದ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದು, ಗಿಗ್ ಕಾರ್ಮಿಕರಾಗಿ ರೂಪಿಸಿದ ಹೊಸ ಕಾನೂನು ಬೈಕ್ ಟ್ಯಾಕ್ಸಿ ಸೇವೆಗಳನ್ನು ಸಮರ್ಪಕವಾಗಿ ಒಳಗೊಳ್ಳುತ್ತದೆಯೇ ಎಂದು ಪ್ರಶ್ನಿಸಿದೆ. ರಾಜ್ಯ ಸರ್ಕಾರ ನಿರ್ದಿಷ್ಟ ನಿಯಮಗಳನ್ನು ರೂಪಿಸುವವರೆಗೆ ಬೈಕ್ ಟ್ಯಾಕ್ಸಿ ಸೇವೆ ಸ್ಥಗಿತಗೊಳಿಸುವ ಹೈಕೋರ್ಟ್ ಏಕ ಸದ್ಯಸ ಪೀಠದ ಆದೇಶ ಪ್ರಶ್ನಿಸಿ ಓಲಾ ಎಎನ್‌ಐ ಟೆಕ್ನಾಲಜೀಸ್, ಉಬರ್, ರಾಪಿಡೊ, ವೈಯಕ್ತಿಕ ಸವಾರರು ಬೈಕ್ ಟ್ಯಾಕ್ಸಿ ವೆಲ್‌ಫೇರ್ ಅಸೋಸಿಯೇಷನ್ ಸಲ್ಲಿಸಿದ ಮೇಲ್ಮನವಿಗಳನ್ನು ನ್ಯಾಯಮೂರ್ತಿ ವಿಭು ಬಖ್ರು. ನ್ಯಾಯಮೂರ್ತಿ ಸಿಎಂ ಜೋಶಿ ಅವರ ವಿಭಾಗೀಯ ಪೀಠ ವಿಚಾರಣೆ ನಡೆಸುತ್ತಿದೆ.

ವಿಚಾರಣೆ ವೇಳೆ ಅಡ್ವೊಕೇಟ್ ಜನರಲ್ ಶಶಿ ಕಿರಣ್ ಶೆಟ್ಟಿ ಅವರು, ಸರ್ಕಾರ ಇತ್ತೀಚೆಗೆ ಕರ್ನಾಟಕ ಆ್ಯಪ್ ಆಧಾರಿತ ಗಿಗ್ ವರ್ಕರ್ಸ್ ಸಾಮಾಜಿಕ ಭದ್ರತೆ ಮತ್ತು ಕಲ್ಯಾಣ ಕಾಯ್ದೆ, 2025 ಅನ್ನು ಜಾರಿಗೊಳಿಸಿದೆ ಎಂದು ಪೀಠಕ್ಕೆ ತಿಳಿಸಿದರು. ಇದು ಡೆಲಿವರಿ ಕೆಲಸಗಾರರು, ರೈಡ್-ಶೇರಿಂಗ್ ಪ್ಲಾಟ್ ಫಾರ್ಮ್‌ಗಳಲ್ಲಿ ತೊಡಗಿರುವವರಿಗೆ ಸಾಮಾಜಿಕ ಭದ್ರತೆಯನ್ನು ಒದಗಿಸುತ್ತದೆ.

ಸೆಪ್ಟೆಂಬರ್ 12 ರಂದು ಜಾರಿಗೆ ಬಂದ ಈ ಕಾನೂನು ಉಬರ್, ಓಲಾ ಮತ್ತು ಜೆಪ್ಟೊದಂತಹ ಅಪ್ಲಿಕೇಶನ್‌ಗಳ ಮೂಲಕ ಕೆಲಸ ಮಾಡುವ ಕಾರ್ಮಿಕರನ್ನು ಒಳಗೊಳ್ಳುವ ಗುರಿ ಹೊಂದಿದೆ.



ಉದಯವಾಹಿನಿ ಚಿತ್ರ

ಆದಾಗ್ಯೂ, ನ್ಯಾಯಾಧೀಶರು, ಈ ಕಾನೂನು ಬೈಕ್ ಟ್ಯಾಕ್ಸಿ ಸವಾರರ ಕಳವಳಗಳನ್ನು ಸ್ಪಷ್ಟವಾಗಿ ಪರಿಹರಿಸುತ್ತದೆಯೇ ಎಂದು ಪ್ರಶ್ನಿಸಿದರು.

ಅಲ್ಲದೆ ಬೈಕ್ ಟ್ಯಾಕ್ಸಿ ಬದಲು ಗಿಗ್ ಕಾರ್ಮಿಕರ ಬಗ್ಗೆ ಹೇಳುತ್ತಿದ್ದೀರಿ. ಒಂದು ತಿಂಗಳು ಸಮಯ ನೀಡಿದ್ದರೂ ಈ ಬಗ್ಗೆ ಸರ್ಕಾರ ನೀತಿ ರೂಪಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿತು. ಬೈಕ್ ಟ್ಯಾಕ್ಸಿ ಸಂಬಂಧ ನೀತಿ ಚೌಕಟ್ಟು ನಿಗದಿಪಡಿಸಲು ಒಂದು ತಿಂಗಳು ಸಮಯ ನೀಡಿದ್ದರೂ ಸರ್ಕಾರ ಈವರೆಗೆ ನೀತಿ ರೂಪಿಸಿಲ್ಲ. ಹೀಗಾಗಿ ಸರ್ಕಾರದ ನಿರ್ಬಂಧಕ್ಕೆ ತಡೆ ನೀಡುವ ಬಗ್ಗೆ ಪರಿಶೀಲನೆ ನಡೆಸುತ್ತಿದ್ದೇವೆ ಎಂದು ಹೈಕೋರ್ಟ್ ಹೇಳಿದೆ.

> **ವಿಚಾರಣೆಯ ವೇಳೆ ಕ್ಯಾಬ್ ಅಗ್ರಿಗೇಟರ್‌ಗಳು ನಿಷೇಧದ ಹೊರತಾಗಿಯೂ ಬೈಕ್ ಟ್ಯಾಕ್ಸಿಗಳನ್ನು ನಿರ್ವಹಿಸುತ್ತಿದ್ದಾರೆ. ಇದು ನ್ಯಾಯಾಂಗ ನಿಂದನೆಯಾಗುತ್ತದೆ. ಹೀಗಾಗಿ ಬೈಕ್ ಟ್ಯಾಕ್ಸಿ ಕಂಪನಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಹೈಕೋರ್ಟ್‌ಗೆ ರಾಜ್ಯ ಸರ್ಕಾರದ ಪರ ವಕೀಲ ಎ.ಜಿ. ಶಶಿಕಿರಣ್ ಶೆಟ್ಟಿ ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿರುವ ಕೋರ್ಟ್, ಬೈಕ್ ಟ್ಯಾಕ್ಸಿ ಬದಲು ಗಿಗ್ ಕಾರ್ಮಿಕರ ಬಗ್ಗೆ ಹೇಳುತ್ತಿದ್ದೀರಿ. ಒಂದು ತಿಂಗಳು ಸಮಯ ನೀಡಿದ್ದರೂ ಈ ಬಗ್ಗೆ ಸರ್ಕಾರ ನೀತಿ ರೂಪಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿತು.**


ಬೈಕ್ ಟ್ಯಾಕ್ಸಿ ಬಗ್ಗೆ ನಿಮ್ಮ ವಾದ ಮಂಡಿಸಿ. ಆ ಬಳಿಕ ಸೂಕ್ತ ಆದೇಶ ಹೊರಡಿಸುವುದಾಗಿ ತಿಳಿಸಿರುವ ಕೋರ್ಟ್, ಮುಂದಿನ ವಿಚಾರಣೆಯನ್ನ ಅ. 15ಕ್ಕೆ ಮುಂದೂಡಿದೆ. ಆದಾಗ್ಯೂ, ಈಗ ವೈಯಕ್ತಿಕ ಸವಾರರ ವಿರುದ್ಧ ಯಾವುದೇ ಬಲವಂತದ ಕ್ರಮ ಕೈಗೊಳ್ಳದಂತೆ ಹೈಕೋರ್ಟ್, ರಾಜ್ಯಕ್ಕೆ ನಿರ್ದೇಶನ ನೀಡಿದೆ.

# ರಾಜ್ಯದ ಅಭಿವೃದ್ಧಿ ಕಡೆ ಗಮನಹರಿಸಲಿ: ಬಿವೈವಿ ಆಗ್ರಹ

• ಉದಯವಾಹಿನಿ, ಬೆಂಗಳೂರು

ರಾಜ್ಯ ಕಾಂಗ್ರೆಸ್ ಸರ್ಕಾರವು ಹಳೆ ಕಥೆ ಹೇಳುವುದನ್ನು ಬಿಟ್ಟು ರಾಜ್ಯದ ಅಭಿವೃದ್ಧಿ ಕಡೆ ಗಮನ ಹರಿಸಬೇಕೆಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಆಗ್ರಹಿಸಿದರು.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಬಿಜೆಪಿ ನಿನ್ನೆ ರಾಜ್ಯಾದ್ಯಂತ ಒಂದು ಗಂಟೆ ರಸ್ತೆ ತಡೆ ಮಾಡಿದೆ. ಗುಂಡಿಗಳನ್ನೂ ಮುಚ್ಚಿ ರಾಜ್ಯ ಸರ್ಕಾರಕ್ಕೆ ಈ ರಾಜ್ಯದ ಪರಿಸ್ಥಿತಿ ಬಗ್ಗೆ ತಿಳಿಸುವ ಪ್ರಯತ್ನ ಮಾಡಿದ್ದೇವೆ. ಈಗಲಾದರೂ ರಾಜ್ಯ ಸರ್ಕಾರ ಎಚ್ಚೆತ್ತುಕೊಂಡು, ಪುಗ್ಸಟ್ಟೆ ಭಾಷಣ ಮಾಡುವುದನ್ನು ಬಿಟ್ಟು ರಾಜ್ಯದ ಅಭಿವೃದ್ಧಿ ಕೆಲಸಗಳ ಕಡೆ ಗಮನ ಹರಿಸಬೇಕು. ಬೆಂಗಳೂರಿನ ಗೌರವ, ಮರ್ಯಾದೆ ತೆಗೆಯುವ ಕೆಲಸವನ್ನು ಕಾಂಗ್ರೆಸ್ ಸರ್ಕಾರ ಮಾಡುತ್ತಿದೆ. ಅತೀ ಶೀಘ್ರವೇ ಗುಂಡಿಗಳನ್ನು ಮುಚ್ಚಿ ಬೆಂಗಳೂರಿನ ಗೌರವ ಉಳಿಸಬೇಕು ಎಂದು ಒತ್ತಾಯಿಸಿದರು.



ಬೆಂಗಳೂರು ಮಹಾನಗರ ಮಾತ್ರವಲ್ಲದೇ ರಾಜ್ಯದ ಯಾವುದೇ ಜಿಲ್ಲೆಗಳಲ್ಲಿ ರಸ್ತೆಗಳಲ್ಲಿರುವ ಗುಂಡಿಗಳಿಗೆ ಮುಕ್ತಿ ಕೊಡುವ ಕೆಲಸವನ್ನು ಮಾಡಲು ರಾಜ್ಯ ಸರ್ಕಾರಕ್ಕೆ ಸಾಧ್ಯವಾಗಿಲ್ಲ. ಅಧಿಕಾರಿಗಳು ಹೋಗಿ ಎಷ್ಟು ರಸ್ತೆ ಗುಂಡಿಗಳಿವೆ ಎಂದು ಲೆಕ್ಕ ಹಾಕಿ ಬಂದಿದ್ದಾರೋ ಗೊತ್ತಿಲ್ಲ. ಹಲವಾರು ಬಾರಿ ಡೆಡ್‌ಲೈನ್ ಕೊಟ್ಟರೂ ಇವತ್ತಿಗೂ ಗುಂಡಿಗಳನ್ನು ಮುಚ್ಚಲು ಈ ಸರ್ಕಾರದ ಕಡೆಯಿಂದ ಸಾಧ್ಯವಾಗಿಲ್ಲ ಎಂದು ಆಕ್ಷೇಪಿಸಿದರು.

> **ಕಾಂಗ್ರೆಸ್ ಸರ್ಕಾರವು ಯಾವುದೇ ಆಯೋಗಗಳಿಗೆ ಕವಡೆ ಕಾಸಿನ ಕಿಮ್ಮತ್ತನ್ನೂ ನೀಡಿಲ್ಲ. ಕಾಂತರಾಜು ಆಯೋಗಕ್ಕೆ 150 ಕೋಟಿ ರೂ., 160 ಕೋಟಿ ರೂ. ಖರ್ಚು ಮಾಡಿ, ವರದಿಯನ್ನು ಕಸದ ಬುಟ್ಟಿಗೆ ಹಾಕಿದ್ದಾಗಿದೆ. ಈಗ 500- 600 ಕೋಟಿ ರೂ. ಖರ್ಚು ಮಾಡಿ ರಾಜ್ಯದಲ್ಲಿ ಗೊಂದಲ ಸೃಷ್ಟಿಸಲು ಹೊರಟಿದ್ದಾರೆ. ನಾಗಮೋಹನ್ ದಾಸ್ ಅವರ ವಿಚಾರದಲ್ಲೂ ಅಷ್ಟೇ ಮಾಡಿದ್ದಾರೆ. ಕಾಂಗ್ರೆಸ್ಸಿನವರು ಬಿಜೆಪಿ ಹಿಂದಿನ ಸರ್ಕಾರದ ಬಗ್ಗೆ ಅಪಪ್ರಚಾರ ಮಾಡಿ, ಅಧಿಕಾರಕ್ಕೆ ಬಂದಿದ್ದಾರೆ ಎಂದರು.**

# ಹಿಂದಿ ಹೇರಿಕೆ ವಿರೋಧಿಸಿ ಕನ್ನಡ ಪರ ಸಂಘಟನೆಗಳ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ರಾಜಭಾಷಾ ಹೆಸರಿನಲ್ಲಿ ಹಿಂದಿ ಹೇರಿಕೆಯನ್ನು ವಿರೋಧಿಸಿ ಕನ್ನಡ ಪರ ಸಂಘಟನೆಯ ಸದಸ್ಯರು ಇಲ್ಲಿನ ಪಂಚತಾರಾ ಹೋಟೆಲ್‌ಗೆ ನುಗ್ಗಿ ಪ್ರತಿಭಟಿಸಿದರು. ಗೃಹ ಸಚಿವಾಲಯದ ರಾಜಭಾಷಾ ಸಮಿತಿಯು ಪಂಚತಾರಾ ಹೋಟೆಲ್‌ನಲ್ಲಿ ಹಿಂದಿ ಪ್ರಚಾರ ಸಭೆಯನ್ನು ಆಯೋಜಿಸಿತ್ತು. ಸ್ಥಳಕ್ಕೆ ಪ್ರತಿಭಟನಾಕಾರರು ಪ್ರವೇಶಿಸಿದಾಗ ಆರು ಸಂಸದರು ಹಾಜರಿದ್ದರು ಎಂದು ಮೂಲಗಳು ತಿಳಿಸಿವೆ. ಕಾರ್ಯಕ್ರಮದ ವಿರುದ್ಧ ಘೋಷಣೆಗಳನ್ನು ಕೂಗುತ್ತಾ, ಕಾರ್ಯಕರ್ತರು ಈ ಸಭೆಯು ಹಿಂದಿಯೇತರ ಮಾತನಾಡುವ ರಾಜ್ಯಗಳ ಮೇಲೆ ಹಿಂದಿ ಹೇರುವ ಪ್ರಯತ್ನವಾಗಿದೆ ಎಂದು ಆರೋಪಿಸಿದರು. ಹಠಾತ್ ಪ್ರತಿಭಟನೆಯು ಸ್ಥಳದಲ್ಲಿ ಉದ್ವಿಗ್ನ ಪರಿಸ್ಥಿತಿಯನ್ನು ನಿರ್ಮಾಣ ಮಾಡಿತು. ಆದರೆ, ತಕ್ಷಣವೇ ಪೊಲೀಸರು ಮಧ್ಯಪ್ರವೇಶಿಸಿದರು. ಹೈಗ್ರೌಂಡ್ಸ್ ಠಾಣೆಯ ಪೊಲೀಸರು ಸ್ಥಳಕ್ಕೆ ಧಾವಿಸಿ, ಯಾವುದೇ ಮುನ್ಸೂಚನೆ ನೀಡದೆಯೇ ಸ್ಥಳಕ್ಕೆ ಪ್ರವೇಶಿಸಿದ್ದಕ್ಕಾಗಿ ಹಲವಾರು ಕಾರ್ಯಕರ್ತರನ್ನು ವಶಕ್ಕೆ ಪಡೆದರು.

# ಗ್ರಾಮ ಸಹಾಯಕರಿಗೆ 5 ಲಕ್ಷ ರೂ. ಇಡುಗಂಟು ಸೌಲಭ್ಯ

## ಕಂದಾಯ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ 10,450 ಗ್ರಾಮ ಸಹಾಯಕರು

• ಉದಯವಾಹಿನಿ, ಬೆಂಗಳೂರು

ಕಂದಾಯ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ 10,450 ಗ್ರಾಮ ಸಹಾಯಕರು ಸೇವೆಯಿಂದ ನಿವೃತ್ತಿ ಹೊಂದಿದಾಗ ಇಲ್ಲವೇ ಸೇವೆಯಲ್ಲಿರುವಾಗಲೇ ಮೃತಪಟ್ಟರೆ 5 ಲಕ್ಷ ರೂ. ಇಡುಗಂಟು ನೀಡುವ ಮಹತ್ವ ನಿರ್ಧಾರವನ್ನು ಗುರುವಾರ ನಡೆದ ಕರ್ನಾಟಕ ಸಚಿವ ಸಂಪುಟ ಸಭೆ ತೆಗೆದುಕೊಂಡಿದೆ.

ಗ್ರಾಮ ಸಹಾಯಕರ ಸೇವೆಯನ್ನು ಗ್ರೂಪ್ - ಡಿ ಹುದ್ದೆಯಲ್ಲಿ ಸಕ್ರಮಗೊಳಿಸುವ ಇಲ್ಲವೇ ಸದ್ಯ ನೀಡುತ್ತಿರುವ ಗೌರವ ಧನವನ್ನು 15000 ರೂ.ನಿಂದ 27,000 ರೂ.ಗೆ ಹೆಚ್ಚಿಸುವ ಪ್ರಸ್ತಾವವೂ ಸರಕಾರದ ಮುಂದಿದೆ.

**ಮೃತಪಟ್ಟರೆ 5 ಲಕ್ಷ ರೂ. ಇಡುಗಂಟು:** ಸಂಪುಟ ಸಭೆ ಬಳಿಕ ಮಾಹಿತಿ ನೀಡಿದ ಸಚಿವ ಎಚ್.ಕೆ.ಪಾಟೀಲ್, '' ಕಂದಾಯ ಇಲಾಖೆಯಲ್ಲಿನ 10,450 ಗ್ರಾಮ ಸಹಾಯಕರು ನಿವೃತ್ತಿಯಾದಾಗ ಇಲ್ಲವೇ ಸೇವೆಯಲ್ಲಿದ್ದಾಗಲೇ ಮೃತಪಟ್ಟರೆ 5 ಲಕ್ಷ ರೂ. ಇಡುಗಂಟು ನೀಡಲು ತೀರ್ಮಾನಿಸಲಾಗಿದೆ,'' ಎಂದು ಹೇಳಿದರು.

**ಸಂಪುಟ ಸಭೆ ಒಪ್ಪಿಗೆ:** ''ಕೇಂದ್ರ ಸರಕಾರ ಜಾರಿಗೊಳಿಸಿರುವ 'ಜನವಿಶ್ವಾಸ' ಕಾಯಿದೆಯನ್ನು ರಾಜ್ಯದಲ್ಲೂ ಜಾರಿಗೊಳಿಸುವ ಸಂಬಂಧ 'ಕರ್ನಾಟಕ ಬಾಡಿಗೆ ಕಾಯಿದೆ- 1999'ರ ನಾನಾ ಕಲಂಗಳ ಅಡಿಯಲ್ಲಿದಂಡ ಹಾಗೂ ಅಪರಾಧ ನಿಬಂಧನೆಗಳನ್ನು ತಿದ್ದುಪಡಿ ತಂದು ವಿಧೇಯಕ ಮಂಡಿಸಲು ಸಂಪುಟ ಸಭೆ ಒಪ್ಪಿಗೆ ನೀಡಿದೆ,'' ಎಂದು ತಿಳಿಸಿದರು.

**ರಾಜ್ಯ ವಿಪತ್ತು ಉಪಶಮನ ನಿಧಿ:** ರಾಜ್ಯದ 7 ಜಿಲ್ಲೆಗಳಲ್ಲಿಆಗಾಗ್ಗೆ ಕಾಣಿಸಿಕೊಳ್ಳುತ್ತಿರುವ ಭೂಕುಸಿತ ತಡೆಗಾಗಿ ರಾಜ್ಯ ವಿಪತ್ತು ಉಪಶಮನ ನಿಧಿಯಡಿ 720 ಕಾಮಗಾರಿಗಳನ್ನು 466.93 ಕೋಟಿ ರೂ. ವೆಚ್ಚದಲ್ಲಿ ಪೂರಕ ಕಾಮಗಾರಿ, ಕ್ರಮ ಕೈಗೊಳ್ಳಲು ಗುರುವಾರ ನಡೆದ ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ.



ಚಿಕ್ಕಮಗಳೂರು, ದಕ್ಷಿಣ ಕನ್ನಡ, ಕೊಡಗು, ಶಿವಮೊಗ್ಗ, ಉಡುಪಿ, ಉತ್ತರ ಕನ್ನಡ ಹಾಗೂ ಹಾಸನ ಜಿಲ್ಲೆಗಳಲ್ಲಿಪುನರಾವರ್ತನೆ ಆಗುತ್ತಿರುವ ಭೂಕುಸಿತ ವಿಚಾರ ಸಂಪುಟದಲ್ಲಿಚರ್ಚೆ ನಡೆಯಿತು. ಹಾಗೆಯೇ ಕೃಷಿ ಭಾಗ್ಯದಡಿ ರೈತರು ತಮ್ಮ ಜಮೀನಿನಲ್ಲಿಮಳೆ ನೀರನ್ನು ಸಂರಕ್ಷಿಸಿಕೊಂಡು ಬೆಳೆಗಳಿಗೆ ಸಂದಿಗ್ಧ ಪರಿಸ್ಥಿತಿಯಲ್ಲಿ ರಕ್ಷಣಾತ್ಮಕ ನೀರಾವರಿಯಾಗಿ ಬಳಸುವಂತೆ ಉತ್ತೇಜಿಸಲು 200 ಕೋಟಿ ರೂ. ಬಿಡುಗಡೆಗೆ ಅನುಮೋದನೆ ಕೊಟ್ಟಿದೆ.

ಸಣ್ಣ ನೀರಾವರಿ ಇಲಾಖೆಯಿಂದ ವಿಶ್ವಬ್ಯಾಂಕ್‌ನ ಆರ್ಥಿಕ ನೆರವಿನೊಂದಿಗೆ 550 ಕೋಟಿ ರೂ. ವೆಚ್ಚದಲ್ಲಿ ಬೆಂಗಳೂರು ನಗರದ ದ್ವಿತೀಯ ಹಂತದಲ್ಲಿಸಂಸ್ಕರಿಸಿದ ನೀರನ್ನು ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳ ಕೆರೆಗಳಿಗೆ 'ಲಿಫ್ಟ್- 4 ವೃಷಭಾವತಿ ವ್ಯಾಲಿ ಯೋಜನೆ- ಹಂತ 2'ರ ಮೂಲಕ ತುಂಬಿಸುವ ಸಲುವಾಗಿ 300 ಕೋಟಿ ರೂ.ಗಳನ್ನು ಸಣ್ಣ ನೀರಾವರಿ ಇಲಾಖೆಗೆ ಬಿಡುಗಡೆ ಮಾಡಲು ಸಂಪುಟ ಸಭೆ ಸಮ್ಮತಿ ನೀಡಿದೆ. ಕಳೆದ ಏ.7ರಂದು ನಾನಾ ಜಿಲ್ಲೆಗಳಲ್ಲಿಕೈಗೊಳ್ಳಲಾದ ವಿಪತ್ತು ಪರಿಹಾರ ಕಾಮಗಾರಿಗಳ ವೆಚ್ಚ ಭರಿಸಲು ಬಾಕಿ ಉಳಿದ 39.31 ಕೋಟಿ ರೂ. ಬಳಸಿಕೊಳ್ಳುವುದನ್ನು ಸಂಪುಟ ಸಭೆ ಅನುಮೋದಿಸಿದೆ.

### ಮುಂಬಡ್ತಿಗೆ ತರಬೇತಿ ಕಡ್ಡಾಯ

**ಆಯ್ದ ಶ್ರೇಣಿಯ ರಾಜ್ಯ ಸರಕಾರಿ ನೌಕರರ ಮುಂಬಡ್ತಿಗೆ ತರಬೇತಿ ಕಡ್ಡಾಯ ಸಂಬಂಧ ರೂಪಿಸಿರುವ 'ರಾಜ್ಯ ನಾಗರಿಕ ಸೇವಾ (ಮುಂಬಡ್ತಿಗಾಗಿ ತರಬೇತಿ ಕಡ್ಡಾಯ) ನಿಯಮಗಳು-2025ರ' ಕರಡು ನಿಯಮಗಳಿಗೆ ಅಧಿಸೂಚನೆ ಹೊರಡಿಸಿ ಆಕ್ಷೇಪಣೆ ಸ್ವೀಕೃತಿಗೆ 15 ದಿನ ಕಾಲಾವಕಾಶ ನೀಡುವ ಪ್ರಸ್ತಾವಕ್ಕೆ ಸಂಪುಟ ಸಭೆ ಅನುಮೋದನೆ ನೀಡಿದೆ.**

# ಹರಾಜು ಮೂಲಕ ಮದ್ಯದ ಅಂಗಡಿಗಳ ಹಂಚಿಕೆ ಪ್ರಕ್ರಿಯೆಗೆ ಶೀಘ್ರವೇ ಚಾಲನೆ

• ಉದಯವಾಹಿನಿ, ಬೆಂಗಳೂರು

ಅವಧಿ ಮುಗಿದಿರೋ ಮದ್ಯದ ಅಂಗಡಿಗಳನ್ನ ಹರಾಜು ಮೂಲಕ ಹಂಚಿಕೆ ಮಾಡೋ ಪ್ರಕ್ರಿಯೆ ಶುರುವಾಗಿದೆ. ಕರಡು ನಿಯಮ ಬಿಡುಗಡೆ ಮಾಡಲಾಗಿದ್ದು, ಆದಷ್ಟು ಬೇಗ ಪ್ರಕ್ರಿಯೆ ಶುರು ಮಾಡೋದಾಗಿ ಅಬಕಾರಿ ಸಚಿವ ತಿಮ್ಮಾಪುರ್ ತಿಳಿಸಿದ್ದಾರೆ.



ವಿಧಾನಸೌಧದಲ್ಲಿ ಮಾತನಾಡಿದ ಅವರು, ಹರಾಜು ಪ್ರಕ್ರಿಯೆಗೆ ತಯಾರಿ ಆಗ್ತಿದೆ. ಹರಾಜು ಪ್ರಕ್ರಿಯೆಯಲ್ಲಿ ಮೀಸಲಾತಿ ಕೊಡಬೇಕು ಎಂದು ಅಂದುಕೊಳ್ಳಲಾಗಿದೆ. ಈಗಾಗಲೇ ಹರಾಜು ಪ್ರಕ್ರಿಯೆಯ ಡ್ರಾಫ್ಟ್ ರೆಡಿ ಆಗಿ ಸಹಿ ಆಗಿದೆ. ಆದಷ್ಟು ಬೇಗ ಹರಾಜು ಪ್ರಕ್ರಿಯೆ ಆಗಲಿದೆ ಎಂದಿದ್ದಾರೆ. ಜನರಲ್ ಆಗಿ ಹರಾಜು ಹಾಕಬೇಕಾ? ಮೀಸಲಾತಿ ಕೊಡಬೇಕು ಅಂತ ಸಿಎಂ ಜೊತೆ ನಾಳೆ ಚರ್ಚೆ ಮಾಡ್ತೀನಿ. ಹರಾಜು ಪ್ರಕ್ರಿಯೆಯಿಂದ 2 ಸಾವಿರ ಕೋಟಿ ರೂ. ಲಾಭ ಬರಬಹುದು ಅಂತ ನಿರೀಕ್ಷೆ ಇದೆ. ಮೀಸಲಾತಿ ಕೊಟ್ಟರೆ ಸಹಾಯ ಅಗುತ್ತದೆ ಅಂತ ಚರ್ಚೆ ಇದೆ. ಚರ್ಚೆ ಮಾಡಿ ನಿರ್ಧಾರ ಮಾಡ್ತೀವಿ ಎಂದು ಹೇಳಿದ್ದಾರೆ. ಹೊಸ ಲೈಸೆನ್ಸ್ ಕೊಡ್ತಿಲ್ಲ. ಕೊಡೋದು ಇಲ್ಲ. ಈಗ ಯಾವುದು ಇದೆಯೋ ಅದಕ್ಕೆ ಮಾತ್ರ ಹರಾಜು ಮೂಲಕ ಲೈಸೆನ್ಸ್ ಕೊಡ್ತೀವಿ ಎಂದು ಸ್ಪಷ್ಟಪಡಿಸಿದ್ದಾರೆ.

# ಮೈತ್ರಿ ಅಭ್ಯರ್ಥಿಗಳನ್ನು ಗೆಲ್ಲಿಸುವ ಮೂಲಕ ಶಕ್ತಿ ಹೆಚ್ಚಿಸಿ

## ತಾಲ್ಲೂಕು ಟಿಎಪಿಸಿಎಂಎಸ್ ಸಂಸ್ಥೆಯ ಚುನಾವಣೆಯಲ್ಲಿ ಜೆಡಿಎಸ್ ಮತ್ತು ಬಿಜೆಪಿ ಮೈತ್ರಿ ಪಕ್ಷದ ಅಭ್ಯರ್ಥಿಗಳಾಗಿ ಸ್ಪರ್ಧೆ

• ಉದಯವಾಹಿನಿ, ಕೆ.ಆರ್.ಪೇಟೆ.

ತಾಲ್ಲೂಕಿನಲ್ಲಿ ಜೆಡಿಎಸ್ ಪಕ್ಷವು ಗಟ್ಟಿಯಾಗಿದೆ. ಪಕ್ಷದ ಕಾರ್ಯಕರ್ತರು ಶಿಸ್ತಿನ ಸಿಪಾಯಿಗಳಂತೆ ಕೆಲಸ ಮಾಡುತ್ತಿದ್ದಾರೆ. ಹಾಗಾಗಿ ಇದೇ ಸೆ.28ರಂದು ನಡೆಯುವ ತಾಲ್ಲೂಕು ಟಿಎಪಿಸಿಎಂಎಸ್ ಸಂಸ್ಥೆಯ ಚುನಾವಣೆಯಲ್ಲಿ ಜೆಡಿಎಸ್ ಮತ್ತು ಬಿಜೆಪಿ ಮೈತ್ರಿ ಪಕ್ಷದ ಅಭ್ಯರ್ಥಿಗಳಾಗಿ ಸ್ಪರ್ಧೆ ಮಾಡಿರುವ ಎಲ್ಲಾ ಅಭ್ಯರ್ಥಿಗಳನ್ನು ಗೆಲ್ಲಿಸುವ ಮೂಲಕ ಪಕ್ಷದ ಶಕ್ತಿಯನ್ನು ಹೆಚ್ಚಿಸಬೇಕು ಎಂದು ಶಾಸಕ ಹೆಚ್.ಟಿ.ಮಂಜು ಟಿಎಪಿಸಿಎಂಎಸ್ ಶೇರುದಾರ ಮತದಾರರು ಹಾಗೂ ಸೊಸೈಟಿಗಳ ಪ್ರತಿನಿಧಿ ಮತದಾರರಲ್ಲಿ ಮನವಿ ಮಾಡಿದರು. ಅವರು ಕೆ.ಆರ್.ಪೇಟೆ ಪಟ್ಟಣದ ಯಶಸ್ವಿನಿ ಕಲ್ಯಾಣ ಮಂಟಪ ಹಾಗೂ ಬಿಲ್ಲೇನಹಳ್ಳಿ ಶ್ರೀ ಗವಿರಂಗನಾಥಸ್ವಾಮಿ ಸಮುದಾಯ ಭವನದಲ್ಲಿ ಟಿಎಪಿಸಿಎಂಎಸ್ ಚುನಾವಣೆಯ ಹಿನ್ನೆಲೆಯಲ್ಲಿ ಆಯೋಜಿಸಿದ್ದ ಜೆಡಿಎಸ್ ಕಾರ್ಯಕರ್ತರ ಸಭೆಯಲ್ಲಿ ಭಾಗವಹಿಸಿ, ಟಿಎಪಿಸಿಎಂಎಸ್ ಸಂಸ್ಥೆಯ ಚುನಾವಣೆಗೆ ಸ್ಪರ್ಧೆ ಮಾಡಿರುವ ಮೈತ್ರಿ ಪಕ್ಷದ ಅಭ್ಯರ್ಥಿಗಳ ಪರವಾಗಿ ಮತಯಾಚನೆ ಮಾಡಿ ಮಾತನಾಡಿದರು. ಟಿಎಪಿಸಿಎಂಎಸ್ ಚುನಾವಣೆಯು ಮಿನಿ ವಿಧಾನಸಭಾ ಚುನಾವಣೆಯಂತೆ ನಡೆಯುತ್ತಿದೆ. ತಾಲ್ಲೂಕಿನ ಎಲ್ಲಾ ಗ್ರಾಮಗಳಲ್ಲಿಯೂ ಮತದಾರರು ಇದ್ದಾರೆ. ತಾಲ್ಲೂಕಿನ 4888 ಶೇರುದಾರ ಮತದಾರರಿಂದ ಆಯ್ಕೆಯಾಗಬೇಕಾದ 8 ಮಂದಿ


ಉದಯವಾಹಿನಿ ಚಿತ್ರ

ಅಭ್ಯರ್ಥಿಗಳಿಗೆ ಸೂಕ್ತ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗಿದೆ. ಹಿರಿಯ ಸಹಕಾರಿ ಧುರೀಣರು, ರಾಜ್ಯ ಸಹಕಾರ ಮಹಾಮಂಡಳದ ಪ್ರಾದೇಶಿಕ ನಿರ್ದೇಶಕರು ಸಹ ಆಗಿರುವ ಎಲ್.ಎಲ್.ಮೋಹನ್ ನೇತೃತ್ವದಲ್ಲಿ ತಂಡವು ಬಲಿಷ್ಠ ತಂಡವಾಗಿದೆ. ಟಿಎಪಿಸಿಎಂಎಸ್ ಸಂಸ್ಥೆಯನ್ನು ಸಮರ್ಥವಾಗಿ ಮುನ್ನಡೆಸಲು ನಮ್ಮ ಜೆಡಿಎಸ್ ಅಭ್ಯರ್ಥಿಗಳಿಗೆ ಮತದಾರರು ಅತಿ ಹೆಚ್ಚು ಬಹುಮತದಿಂದ ಗೆಲುವು ನೀಡುವ ಮೂಲಕ ಶಕ್ತಿ ತುಂಬಬೇಕು. ಒಬ್ಬ ಅಭ್ಯರ್ಥಿಯೂ ಸೋಲಬಾರದು ಅಂತಹ ವ್ಯವಸ್ಥಿತ ಚುನಾವಣೆಯನ್ನು ಎದುರಿಸಲು ಕಾರ್ಯಕರ್ತರು ಸಿದ್ದರಾಗಬೇಕು. ಪ್ರಚಾರಕ್ಕೆ ಕಾಲಾವಕಾಶ ಕಡಿಮೆ ಇರುವ ಕಾರಣ ಪಂಚಾಯತ್ ಮಟ್ಟದ ಮುಖಂಡರು ಚುನಾವಣೆಯ ಸಂಪೂರ್ಣ ಜವಾಬ್ದಾರಿ ತೆಗೆದುಕೊಳ್ಳಬೇಕು. ಬಿ.ವರ್ಗದಲ್ಲಿ ಒಂದು ಮತವೂ ವ್ಯರ್ಥವಾಗದಂತೆ 8ಕ್ಕೆ 8 ಅಭ್ಯರ್ಥಿಗಳಿಗೂ ಮತದಾನ ಆಗುವಂತೆ ನೋಡಿಕೊಳ್ಳಬೇಕು. ಅದೇ ರೀತಿ ಎ.ವರ್ಗದಲ್ಲಿ 6ಕ್ಕೆ 6 ಮತಗಳು ನಮ್ಮ ಜೆಡಿಎಸ್-ಬಿಜೆಪಿ ಮೈತ್ರಿ ಅಭ್ಯರ್ಥಿಗಳಿಗೆ ಹಾಕುವಂತೆ ಮತದಾರರನ್ನು ಮನವೊಲಿಸಬೇಕು ಎಂದು ಮುಖಂಡರು, ಕಾರ್ಯಕರ್ತರಲ್ಲಿ ಮನವಿ ಮಾಡಿದರು. ಕರ್ನಾಟಕ ಸಹಕಾರ ಮಹಾಮಂಡಳದ ಪ್ರಾದೇಶಿಕ ನಿರ್ದೇಶಕ ಎಸ್.ಎಲ್.ಮೋಹನ್ ಮಾತನಾಡಿ ಕಳೆದ ಭಾರಿ ಟಿಎಪಿಸಿಎಂಎಸ್ ನಲ್ಲಿ ಜೆಡಿಎಸ್ ಬೆಂಬಲಿತ ಅಭ್ಯರ್ಥಿಗಳು ಬಹುಮತ ಪಡೆದು ಹಿರಿಯರಾದ ಬಿ.ಎಲ್.ದೇವರಾಜು ಅವರನ್ನು 2 ವರ್ಷದ ಅವಧಿಗೆ ಒಂಡಂಬಡಿಕೆ ಮಾಡಿಕೊಂಡು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿದ್ದೆವು. ಆದರೆ ದೇವರಾಜು ಅವರು 2023ರಲ್ಲಿ ಜೆಡಿಎಸ್ ಪಕ್ಷ ಬಿಟ್ಟು ಕಾಂಗ್ರೆಸ್ ಸೇರಿ ವಿಧಾನಸಭೆಗೆ ಸ್ಪರ್ಧೆ ಮಾಡಿದ್ದರು. ಆಗಲಾದರೂ ರಾಜೀನಾಮೆ ನೀಡಿ ತಮ್ಮ ನೈತಿಕ ರಾಜಕಾರಣವನ್ನು ಪ್ರದರ್ಶನ ಮಾಡಬಹುದಿತ್ತು. ಆದರೆ 5 ವರ್ಷಗಳ ಕಾಲ ಅಧಿಕಾರಿ ನಡೆಸಿ, ತಮಗೆ ಅಧಿಕಾರದ ದುರಾಸೆ ಇದೆ ಎಂಬುದನ್ನು ತಾಲ್ಲೂಕಿನ ಜನತೆಗೆ ತೋರಿಸಿದ್ದಾರೆ. ಈಗ ಮತ್ತೊಮ್ಮೆ ಚುನಾವಣೆಗೆ ಸ್ಪರ್ಧೆ ಮಾಡಿದ್ದಾರೆ ಹಾಗಾಗಿ ಬಿ.ಎಲ್. ದೇವರಾಜು ಅವರ ಅಧಿಕಾರದ ದುರಾಸೆಯಿಂದಾಗಿ ಜೆಡಿಎಸ್ ಪಕ್ಷದ ಯಾರೊಬ್ಬರೂ ಟಿಎಪಿಸಿಎಂಎಸ್ ಸಂಸ್ಥೆಯ ಅಧ್ಯಕ್ಷ ಸ್ಥಾನಕ್ಕೆ ಏರಲು ಸಾಧ್ಯವಾಗಲಿಲ್ಲ. ಆದ್ದರಿಂದ ಮಾನ್ಯ ಮತದಾರರು ಇದೇ ಸೆ.28ರಂದು ನಡೆಯುವ ಚುನಾವಣೆಯಲ್ಲಿ ನಮ್ಮ ಜೆಡಿಎಸ್ ಪಕ್ಷದ ಎಲ್ಲಾ 14 ಅಭ್ಯರ್ಥಿಗಳನ್ನು ಗೆಲ್ಲಿಸುವ ಮೂಲಕ ನಮಗೆ ಅಧಿಕಾರ ನಡೆಸಲು ಅವಕಾಶ ನೀಡಬೇಕು. ಪ್ರಾಮಾಣಿಕವಾಗಿ ಅಧಿಕಾರ ಹಂಚಿಕೆ ಮಾಡಿಕೊಂಡು ಒಳ್ಳೆಯ ಆಡಳಿತ ನೀಡುತ್ತೇವೆ ಎಂದು ಎಲ್.ಎಲ್.ಮೋಹನ್ ಭರವಸೆ ನೀಡಿದರು.

> ನಾವೂ ಯಾರನ್ನೂ ಟೀಕಿಸಿ ಮತ ಕೇಳುವ ಅಗತ್ಯವಿಲ್ಲ. ಟಿಎಪಿಸಿಎಂಎಸ್ ಸಂಸ್ಥೆಯು ಸ್ಥಾಪನೆಯಾದ ದಿನದಿಂದಲೂ ಜೆಡಿಎಸ್ ಪಕ್ಷದ ಅಭ್ಯರ್ಥಿಗಳೇ ಬಹುಮತ ಪಡೆದು ಅಧಿಕಾರಕ್ಕೆ ಬಂದಿದ್ದಾರೆ ಅದೇ ಈ ಭಾರಿಯೂ ಜೆಡಿಎಸ್ ಪಕ್ಷವು ಅಧಿಕಾರಕ್ಕೆ ಬರುವುದು ಖಚಿತವಾಗಿದೆ ಹಾಗಾಗಿ ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರು ಹೆಚ್ಚಿನ ಅಂತರದಿಂದ ನಮ್ಮ 14 ಮಂದಿ ಅಭ್ಯರ್ಥಿಗಳೂ ಗೆಲ್ಲುವಂತಹ ವಾತಾವರಣವನ್ನು ಸೃಷ್ಠಿಸುವ ಗುರುತರವಾದ ಜವಾಬ್ದಾರಿ ತಮ್ಮ ಮೇಲಿದೆ ಎಂದು ಶಾಸಕರು ತಿಳಿಸಿದರು.

## ದಸರಾ ಬಹುಭಾಷಾ ಕವಿಗೋಷ್ಠಿ

• ಉದಯವಾಹಿನಿ, ಗೋಣಿಕೊಪ್ಪಲು

ಇಲ್ಲಿನ ದಸರಾ ಬಹುಭಾಷಾ ಕವಿಗೋಷ್ಠಿ ಸೆ.26ರಂದು ಬೆಳಿಗ್ಗೆ 10 ಗಂಟೆಗೆ ಸರ್ಕಾರಿ ಹಿರಿಯ ಮಾದರಿ ಪ್ರಾಥಮಿಕ ಶಾಲೆಯ ಮೈದಾನದ ದಸರಾ ಸಭಾಂಗಣದಲ್ಲಿ ನಡೆಯಲಿದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಂ.ಪಿ.ಕೇಶವ ಕಾಮತ್ ಹೇಳಿದರು. ಕಾವೇರಿ ದಸರಾ ಸಮಿತಿ ಮತ್ತು ಪೊನ್ನಂಪೇಟೆ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ತ ಆಶ್ರಯದಲ್ಲಿ ನಡೆಯಲಿರುವ ರಾಜ್ಯ ಮಟ್ಟದ ಬಹುಭಾಷಾ ಕವಿಗೋಷ್ಠಿಯಲ್ಲಿ ಕನ್ನಡ, ಕೊಡವ, ಅರೆಭಾಷೆ, ತುಳು, ಕೊಂಕಣಿ, ಹವ್ಯಕ, ಯರವ, ಕುಂಬಾರ, ಹಿಂದಿ, ತಮಿಳು, ಮಲೆಯಾಳಂ, ಮರಾಠಿ, ಕುಂದಾಪುರ ಕನ್ನಡ, ಇಂಗ್ಲಿಷ್ 14 ಭಾಷೆಯ 103 ಕವಿಗಳು ಕವಿತೆವಾಚಿಸಲಿದ್ದಾರೆ ಎಂದು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. ಇವುಗಳ ಜತೆಗೆ ಕನ್ನಡ ಭಾಷೆಯ 4 ಚುಟುಕು ಕವಿಗಳು ಚುಟುಕು ಕವನ ವಾಚಿಸಲಿದ್ದಾರೆ. ಮಕ್ಕಳ ಪ್ರತಿಭೆಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲೂ ಜತೆಗೆ ಅವರಲ್ಲಿ ಸಾಹಿತ್ಯಾಸಕ್ತಿ ಮೂಡಿಸುವ ಸಲುವಾಗಿ ಈ ಬಾರಿ ವಿಶೇಷವಾಗಿ 11 ಮಕ್ಕಳ ಕವಿತೆ ವಾಚನಕ್ಕೂ ಅವಕಾಶ ನೀಡಲಾಗಿದೆ. 6ರಿಂದ 13 ವರ್ಷದೊಳಗಿನ ಮಕ್ಕಳಲ್ಲಿ 6 ಜನ ಕನ್ನಡದಲ್ಲಿ 5 ಜನ ಇಂಗ್ಲಿಷ್ ನಲ್ಲಿ ಕವಿತೆ ವಾಚಿಸಲಿದ್ದಾರೆ ಎಂದು ಹೇಳಿದರು.




ಕವಿಗೋಷ್ಠಿಗೆ ಆಗಮಿಸುವ ಎಲ್ಲಾ ಕವಿಗಳಿಗೂ ಗೌರವ ಸಂಭಾವನೆ ಮತ್ತು ಕೊಡಗಿನ ಲೇಖಕರ ಒಂದು ಪುಸ್ತಕವನ್ನು ಕೊಡುಗೆಯಾಗಿ ನೀಡಲಾಗುವುದು. ಬೆಂಗಳೂರು, ಬಳ್ಳಾರಿ, ಚಿಕ್ಕಮಗಳೂರು, ಸುಳ್ಯ, ಬೆಳಗಾವಿ, ಮೈಸೂರು, ಕುಂದಾಪುರ ಹೀಗೆ ರಾಜ್ಯದ ವಿವಿಧ ಜಿಲ್ಲೆಗಳಿಂದ ಕವಿಗಳು ಆಗಮಿಸಲಿದ್ದಾರೆ. ಪೊನ್ನಂಪೇಟೆ ಕಿಗ್ಗಟ್ಟು ನಾಡು ಹಿರಿಯ ನಾಗರಿಕ ವೇದಿಕೆ ಸ್ಥಾಪಕ ಅಧ್ಯಕ್ಷ ಕಾಟಿಮಾಡ ಜಿಮ್ಮಿ ಅಣ್ಣಯ್ಯ ಗೋಷ್ಠಿ ಉದ್ಘಾಟಿಸಲಿದ್ದಾರೆ. ಸಾಹಿತಿ ಸುಬ್ರಾಯ ಸಂಪಾಜೆ ಅಧ್ಯಕ್ಷತೆ ವಹಿಸಲಿದ್ದಾರೆ. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಂ.ಪಿ ಕೇಶವ ಕಾಮತ್, ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಮುಲ್ಲೇಂಗಡ ಮಧೋಷ್ ಪೂವಯ್ಯ ಮುಖ್ಯ ಅತಿಥಿಗಳಾಗಿರುವರು ಎಂದು ಹೇಳಿದರು.

## ಬಿಡದಿ ಟೌನ್‌ಶಿಪ್ ಭೂ ಸ್ವಾಧೀನಕ್ಕೆ ವಿರೋಧ

• ಉದಯವಾಹಿನಿ, ಬಿಡದಿ

ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಹೋಬಳಿಯ ಭೈರಮಂಗಲ ಮತ್ತು ಕಂಚುಗಾರನಹಳ್ಳಿ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ನಿರ್ಮಾಣವಾಗಲಿರುವ ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ ಯೋಜನೆಯ ಭೂ ಸ್ವಾಧೀನಕ್ಕೆ ಸಂಬಂಧಿಸಿದ ಜಂಟಿ ಅಳತೆ ಪ್ರಮಾಣೀಕರಣ ಕೆಲಸಕ್ಕೆ ಬುಧವಾರ ಕರಿಕಲ್‌ದೊಡ್ಡಿ ಗ್ರಾಮದಲ್ಲಿ ರೈತರ ತಡೆಯೊಡ್ಡಿದರು.


ಉದಯವಾಹಿನಿ ಚಿತ್ರ

ಅಧಿಕಾರಿಗಳ ತಂಡ ಜೆಎಂಸಿ ಕೆಲಸಕ್ಕೆ ಬರಲಿದೆ ಎಂದು ಗೊತ್ತಾಗುತ್ತಿದ್ದಂತೆ, ರೈತರ ಗುಂಪು ಸ್ಥಳದಲ್ಲಿ ಜಮಾಯಿಸಿ ವಿರೋಧ ವ್ಯಕ್ತಪಡಿಸಿದರು. ಯಾವುದೇ ಕಾರಣಕ್ಕೂ ನಮ್ಮ ಭೂಮಿಯನ್ನು ಯೋಜನೆಗೆ ಕೊಡುವುದಿಲ್ಲ ಎಂದು ಘೋಷಣೆಗಳನ್ನು ಕೂಗಿದರು. ನಮಗೆ ಈ ಯೋಜನೆ ಬೇಡ. ಹಾಗಾಗಿ, ಅಧಿಕಾರಿಗಳು ನಮ್ಮ ಜಮೀನಿಗೆ ಕಾಲಿಡಬಾರದು ಎಂದು ತಡೆಯೊಡ್ಡಿದರು.

ವಿಷಯ ತಿಳಿದು ಪೊಲೀಸರ ದಂಡು ಸ್ಥಳಕ್ಕೆ ಬಂದಿತು. ಆಗ ಅಧಿಕಾರಿಗಳು ಪೊಲೀಸರ ನೆರವಿನೊಂದಿಗೆ ರೈತರ ಮನವೊಲಿಸಲು ಯತ್ನಿಸಿದರು. ಆದರೂ, ರೈತರು ಪಟ್ಟು ಬಿಡದೆ ಸ್ಥಳದಿಂದ ಹೊರಡುವಂತೆ ಅಧಿಕಾರಿಗಳಿಗೆ ಆಗ್ರಹಿಸಿದರು. ಈ ವೇಳೆ, ಪೊಲೀಸರು ಮಧ್ಯ ಪ್ರವೇಶಿಸಿ ಸಮಾಧಾನಪಡಿಸಲು ಯತ್ನಿಸಿದರೂ ಆಗಲಿಲ್ಲ. ಪರಸ್ಪರ ಮಾತಿನ ಚಕಮಕಿ ಜೊತೆಗೆ ತಳ್ಳಾಟ ಸಹ ಶುರುವಾಯಿತು.

ಕಡೆಗೆ ಕೆಲ ಅಧಿಕಾರಿಗಳು ಸ್ಥಳದಿಂದ ಹೊರಟರು. ಪರಿಸ್ಥಿತಿ ಸ್ವಲ್ಪ ಮಟ್ಟಿಗೆ ತಣ್ಣಾಗುತ್ತಿದ್ದಂತೆ ಯೋಜನೆಗೆ ಒಪ್ಪಿರುವ ರೈತರಿಗೆ ಸೇರಿದ ಜಮೀನುಗಳಲ್ಲಿ ಅಧಿಕಾರಿಗಳ ತಂಡವು ಪೊಲೀಸ್ ಸರ್ಪಗಾವಲಿನಲ್ಲಿ ಜೆಎಂಸಿ ಕಾರ್ಯ ಮುಗಿಸಿತು. ಬಿಡದಿ ಪೊಲೀಸ್ ಠಾಣೆ ಇನ್‌ಸ್ಪೆಕ್ಟರ್ ಶಂಕರ್ ನಾಯಕ್, ಇತರ ಸಿಬ್ಬಂದಿ, ಕೆಎಸ್‌ಆರ್‌ಪಿ ತುಕಡಿ ಸ್ಥಳದಲ್ಲಿ ಮೊಕ್ಕಾಂ ಹೂಡಿತ್ತು.

**ಸಭೆ ನಡೆಸಿಲ್ಲ:** ಯೋಜನೆಗೆ ಸಂಬಂಧಿಸಿದಂತೆ ಭೂ ಸ್ವಾಧೀನ ಪ್ರಕ್ರಿಯೆ ನಡೆಸುತ್ತಿರುವ ಜಿಬಿಡಿಎ ಇದುವರೆಗೆ ಭೂಮಿ ಕಳೆದುಕೊಳ್ಳುವ ರೈತರ ಜೊತೆ ಸಭೆ ನಡೆಸಿಲ್ಲ. ಸ್ಥಳೀಯ ಜನಪ್ರತಿನಿಧಿಗಳು ಸಹ ರೈತರಿಗೆ ಯೋಜನೆ ಬೇಕೇ ಬೇಡವೇ ಎಂಬುದನ್ನು ಆಲಿಸಿಲ್ಲ. ಇವರ ಇಷ್ಟಕ್ಕೆ ತಕ್ಕಂತೆ, ಫಲವತ್ತಾದ ಭೂಮಿಯಲ್ಲಿ ಉಪನಗರ ನಿರ್ಮಾಣಕ್ಕೆ ಮುಂದಾಗಿದ್ದಾರೆ ಎಂದು ರೈತರು ಆಕ್ರೋಶ ವ್ಯಕ್ತಪಡಿಸಿದರು.

ಫಲವತ್ತಾದ ಭೂಮಿಯಲ್ಲೇ ಉಪನಗರ ನಿರ್ಮಾಣ ಮಾಡಬೇಕೇ? ನಾವು ಇಲ್ಲಿ ತಲೆಮಾರುಗಳಿಂದ ಕೃಷಿ ಮತ್ತು ಹೈನುಗಾರಿಕೆ ಮಾಡಿ ಬದುಕು ಕಟ್ಟಿಕೊಂಡಿದ್ದೇವೆ. ಯೋಜನೆಯಿಂದ ಎಲ್ಲವನ್ನೂ ಕಳೆದುಕೊಳ್ಳಲಿದ್ದೇವೆ. ಇವರು ಕೊಡುವ ಪರಿಹಾರ ಎಷ್ಟು ದಿನ ತಾನೇ ಇರಲು ಸಾಧ್ಯ, ಕಡೆಗೆ ನಾವು ಬೀದಿಗೆ ಬೀಳುತ್ತೇವೆ. ಹಾಗಾಗಿ, ಯಾವ ಉಪನಗರವೂ ಬೇಡ. ನಮ್ಮ ಜಮೀನನ್ನು ನಮಗೆ ಬಿಟ್ಟು ಬಿಡಿ ಎಂದು ಆಗ್ರಹಿಸಿದರು.


> **ಹೋರಾಟಕ್ಕೆ ದೇವೇಗೌಡರ ಬೆಂಬಲ**
> 28ಕ್ಕೆ ಧರಣಿ ಸ್ಥಳಕ್ಕೆ ಭೇಟಿ ಉಪನಗರದ ವಿರುದ್ಧ ರೈತರು ನಡೆಸುತ್ತಿರುವ ಹೋರಾಟಕ್ಕೆ ಜೆಡಿಎಸ್ ಸಂಪೂರ್ಣ ಬೆಂಬಲ ನೀಡಲಿದೆ. ರಾಜ್ಯ ಸರ್ಕಾರದ ವಿರುದ್ಧ ರೈತರು ನಡೆಸುತ್ತಿರುವ ಧರಣಿ ಸ್ಥಳಕ್ಕೆ ಮಾಜಿ ಪ್ರಧಾನಿ ಹಾಗೂ ಸಂಸದರಾದ ಎಚ್.ಡಿ. ದೇವೇಗೌಡ ಅವರು ಸೆ. 28ರಂದು ಭೇಟಿ ನೀಡಲಿದ್ದಾರೆ. ಯಾವುದೇ ಕಾರಣಕ್ಕೂ ಈ ಭಾಗದ ರೈತರ ಭೂಮಿಯನ್ನು ಕಸಿದುಕೊಳ್ಳಲು ಬಿಡುವುದಿಲ್ಲ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಎ. ಮಂಜುನಾಥ್ ಹೇಳಿದರು. ಯೋಜನೆ ವಿರೋಧಿಸಿ ಭೈರಮಂಗಲದಲ್ಲಿ ನಡೆಯುತ್ತಿರುವ ರೈತರ ಅನಿರ್ದಿಷ್ಟಾವಧಿ ಧರಣಿಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು 'ನಮ್ಮ ಪಕ್ಷವು ರೈತರ ಜೊತೆಗೆ ನಿಲ್ಲಲಿದೆ. 28ರಂದು ದೇವೇಗೌಡರು ನಿಖಿಲ್ ಕುಮಾರಸ್ವಾಮಿ ಸೇರಿದಂತೆ ಹಲವು ನಾಯಕರು ಧರಣಿಯಲ್ಲಿ ಪಾಲ್ಗೊಳ್ಳಲಿದ್ದಾರೆ. ಯೋಜನೆ ರೂಪಿಸಿದ್ದೇ ಎಚ್.ಡಿ. ಕುಮಾರಸ್ವಾಮಿ ಅವರು ಎಂದು ಕಾಂಗ್ರೆಸ್ ನಾಯಕರು ಅಪಪ್ರಚಾರ ಮಾಡುತ್ತಿದ್ದಾರೆ. ಅದಕ್ಕೆ ಸ್ವತಃ ಕುಮಾರಸ್ವಾಮಿ ಅವರೇ ಉತ್ತರ ನೀಡಲಿದ್ದಾರೆ. ಅನಾರೋಗ್ಯದಿಂದಾಗಿ ಅವರು ಸ್ಥಳಕ್ಕೆ ಬರುವುದಿಲ್ಲ. ಆದರೆ ಆನ್‌ಲೈನ್ ಮೂಲಕ ರೈತರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ' ಎಂದರು.

> **ಪೊಲೀಸ್ ಬಂದೋಬಸ್ತನಲ್ಲಿ ನಡೆದ ಜೆಎಂಸಿ**

## ಜಿಎಸ್‌ಟಿ ಹೆಚ್ಚಿಸಿದ್ದು ಅವರೇ, ಕಡಿಮೆ ಮಾಡಿದ್ದೂ ಅವರೇ: ನಾರಾಯಣಸ್ವಾಮಿ

• ಉದಯವಾಹಿನಿ, ಬಂಗಾರಪೇಟೆ

ದೇಶದಾದ್ಯಂತ ಜಾರಿಗೊಂಡ ಜಿಎಸ್‌ಟಿಯನ್ನು ಈ ಹಿಂದೆ ಹೆಚ್ಚಳ ಮಾಡಿದ್ದು ಬಿಜೆಪಿಯವರೇ, ಇದೀಗ ಜಿಎಸ್‌ಟಿ ಇಳಿಕೆ ಮಾಡಿದ್ದೇವೆ ಎಂಬುದಾಗಿ ಅವರೇ ಸಂಭ್ರಮಾಚರಣೆ ಮಾಡುತ್ತಿರುವುದು ಹಾಸ್ಯಾಸ್ಪದ ಎಂದು ಶಾಸಕ ಎಸ್.ಎನ್. ನಾರಾಯಣಸ್ವಾಮಿ ಹೇಳಿದರು. ಪಟ್ಟಣದಲ್ಲಿ ಅಮೃತ್ 2.0 ಯೋಜನೆಯಡಿ ಕುಡಿಯುವ ನೀರಿನ ಸರಬರಾಜು ಮಾಡುವ 14.5 ಕೋಟಿ ವೆಚ್ಚದ ಕಾಮಗಾರಿಗಳಿಗೆ ಚಾಲನೆ ನೀಡಿದ ಬಳಿಕ ಮಾತನಾಡಿದರು. ಪ್ರಧಾನಿ ನರೇಂದ್ರ ಮೋದಿ ಜಿಎಸ್‌ಟಿ ಇಳಿಕೆ ಮಾಡಿದ್ದಾರೆ ಎಂದು ಬಿಜೆಪಿ ಕಾರ್ಯಕರ್ತರು ಸಂಭ್ರಮಾಚರಣೆ ಮಾಡುತ್ತಿದ್ದಾರೆ. ಮೋದಿ ಮತ್ತು ನಿರ್ಮಲಾ ಸೀತಾರಾಮನ್ ಅವರು ದಿನಬಳಕೆ ಅಗತ್ಯ ವಸ್ತುಗಳಿಗೆ ಜಿಎಸ್‌ಟಿಯನ್ನು ವಿಧಿಸಿ, ಜನಸಾಮಾನ್ಯರು ತೊಂದರೆ ಅನುಭವಿಸುವಂತೆ ಮಾಡಿದ್ದರು. ಮನಮೋಹನ್ ಸಿಂಗ್ ಸರ್ಕಾರ ಜಿಎಸ್‌ಟಿ ಹಾಕಿರಲಿಲ್ಲ. ಜಿಎಸ್‌ಟಿ ಹಾಕಿದ್ದು, ನೋಟ್ ಅಮಾನೀಕರಣ, ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡಿದ್ದು ಮೋದಿ ಸರ್ಕಾರ. ಈಗ ಜಿಎಸ್‌ಟಿ ಕಡಿತ ಮಾಡಿರುವುದು ಸ್ವಾಗತ. ಆದರೆ, ಇದನ್ನು ಸಂಭ್ರಮಿಸುವ ಅಗತ್ಯವಿಲ್ಲ. ಇದು ಅಂಥ ಸಾಧನೆಯೇನಲ್ಲ ಎಂದರು.


ಉದಯವಾಹಿನಿ ಚಿತ್ರ

ಕೈಗಾರಿಕೆಗಳನ್ನು ಆರಂಭಿಸಿ ಯುವಕರಿಗೆ ಉದ್ಯೋಗ ಕಲ್ಪಿಸಲಿಲ್ಲ. ಅಗತ್ಯ ವಸ್ತುಗಳ ಬೆಲೆ ಇಳಿಕೆ ಮಾಡಲಿಲ್ಲ. ಇದ್ಯಾವುದನ್ನೂ ಮಾಡದೆ ಸಂಭ್ರಮಾಚರಣೆ ಮಾಡಿ ಜನರ ದಿಕ್ಕು ತಪ್ಪಿಸಬಾರದು. ಜಿಎಸ್‌ಟಿಯಿಂದ ಈವರೆಗೆ ಎಷ್ಟು ಕೋಟಿ ಹಣವನ್ನು ಜನರಿಂದ ಪಡೆದಿದ್ದಾರೆ ಎಂಬುದಕ್ಕೆ ಲೆಕ್ಕ ನೀಡಬೇಕು. ಇಡೀ ದೇಶದಲ್ಲಿ ಮಹಾರಾಷ್ಟ್ರ ನಂತರ ಹೆಚ್ಚು ಜಿಎಸ್‌ಟಿ ಕಟ್ಟುತ್ತಿರುವುದು ಕರ್ನಾಟಕ. ಇದುವರೆಗೆ ವಸೂಲಿ ಮಾಡಿರುವ ಲಕ್ಷಾಂತರ ಕೋಟಿ ಹಣದಲ್ಲಿ ರಾಜ್ಯದ ಅಭಿವೃದ್ಧಿ ಕಾರ್ಯಗಳಿಗೆ ಅನುದಾನ ನೀಡುವಂತೆ ಸಂಸದ ಮಲ್ಲೇಶ ಬಾಬು ಸೇರಿದಂತೆ ಎಲ್ಲಾ ಸಂಸದರು ಒಟ್ಟಾಗಿ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಬೇಕು ಎಂದರು.

## ವರ್ತಕರಿಂದ ಹಣ ಸುಲಿಗೆ: ನಕಲಿ ಅಧಿಕಾರಿಗಳ ಬಂಧನ

• ಉದಯವಾಹಿನಿ, ಚನ್ನಪಟ್ಟಣ

ತಾಲ್ಲೂಕಿನ ಸಿಂಗರಾಜಪುರ ಗ್ರಾಮದ ಎರಡು ಮೆಡಿಕಲ್ ಸ್ಟೋರ್‌ಗಳಲ್ಲಿ ಮಂಗಳವಾರ ಅಧಿಕಾರಿಗಳು ಎಂದು ಹೇಳಿಕೊಂಡು ಹಣ ವಸೂಲಿ ಮಾಡುತ್ತಿದ್ದ ಮಹಿಳೆ ಸೇರಿ ನಾಲ್ವರನ್ನು ಗ್ರಾಮಸ್ಥರು ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ. ಬೆಂಗಳೂರಿನ ತುಂಗಾನಗರದ ಅಪ್ಪಣ್ಣಪ್ಪ ಬಡಾವಣೆಯ ಅರ್ಚನಾ (39), ಬೆಂಗಳೂರಿನ ಶಿವನಗರದ ನಿವಾಸಿ, ಚನ್ನಪಟ್ಟಣ ತಾಲ್ಲೂಕಿನ ನೀಲಕಂಠನಹಳ್ಳಿಯ ರವಿಶಂಕರ್ (45), ಹೊಸಗುಡ್ಡದಹಳ್ಳಿಯ ವಿಶ್ವನಾಥ್ ರಾಜೇ ಅರಸ್ (42), ಕಾರು ಚಾಲಕ ರೋಹಿತ್ (22) ಬಂಧಿತ ಆರೋಪಿಗಳು.

ತಮ್ಮನ್ನು ಭ್ರಷ್ಟಾಚಾರ ವಿರೋಧಿ ಹಾಗೂ ಮಾನವ ಹಕ್ಕುಗಳ ಪ್ರತಿಷ್ಠಾನ ಇಲಾಖೆಯ ಅಧಿಕಾರಿಗಳು ಎಂದು ನಕಲಿ ಗುರುತಿನ ಪತ್ರಗಳನ್ನು ತೋರಿಸಿ ಹಣ ವಸೂಲಿ ಮಾಡುತ್ತಿದ್ದರು. ಈ ನಾಲ್ವರು ಕಾರಿನಲ್ಲಿ ಸಿಂಗರಾಜಪುರಕ್ಕೆ ತೆರಳಿ ಸಂಜು ಮೆಡಿಕಲ್ ಸ್ಟೋರ್ ಮಾಲೀಕರಿಗೆ ತಾವು ಭ್ರಷ್ಟಾಚಾರ ವಿರೋಧಿ ಹಾಗೂ ಮಾನವ ಹಕ್ಕುಗಳ ಪ್ರತಿಷ್ಠಾನ ಇಲಾಖೆ ಅಧಿಕಾರಿಗಳು ಎಂದು ಗುರುತು ಪತ್ರ ತೋರಿಸಿದ್ದಾರೆ. ನಂತರ ಅಂಗಡಿಯ ಅನುಮತಿ ಪತ್ರ ಸೇರಿದಂತೆ ವಿವಿಧ ದಾಖಲೆ ತೋರಿಸಲು ಹೇಳಿದ್ದಾರೆ. ಸೂಕ್ತ ದಾಖಲೆ ಇಲ್ಲ ಎಂದು 15 ಸಾವಿರ ದಂಡ ವಿಧಿಸಿದ್ದಾರೆ. ಕೊಡದಿದ್ದರೆ ಪ್ರಕರಣ ದಾಖಲಿಸುವ ಬೆದರಿಕೆ ಹಾಕಿದ್ದಾರೆ. ಮೆಡಿಕಲ್ ಸ್ಟೋರ್ ಮಾಲೀಕ ಸಂಜಯ್ ಅವರು ಅಷ್ಟು ಹಣ ತಮ್ಮ ಬಳಿ ಇಲ್ಲ ಎಂದಾಗ ಸದ್ಯಕ್ಕೆ 2,500 ಕೊಡಿ. ಸಂಜೆ 10 ಸಾವಿರ ಫೋನ್ ಪೇ ಮಾಡು ಎಂದು ನಂಬರ್ ನೀಡಿದ್ದರು.

ನಂತರ ಸುಬ್ಬಣ್ಣ ಮೆಡಿಕಲ್ ಸ್ಟೋರ್‌ಗೆ ತೆರಳಿ ಅಲ್ಲಿಯೂ ಲೈಸನ್ಸ್ ಕೇಳಿದ್ದಾರೆ. ಅಲ್ಲಿಯೂ ಸೂಕ್ತ ದಾಖಲೆಗಳು ಇಲ್ಲ ಎಂದು ಬೆದರಿಸಿ 5 ಸಾವಿರ ಹಣ ಸುಲಿಗೆ ಮಾಡಲು ಮುಂದಾಗಿದ್ದಾರೆ. ಆಗ ಅಲ್ಲಿದ್ದ ಗ್ರಾಮಸ್ಥರು ಅನುಮಾನಗೊಂಡು ಪ್ರಶ್ನಿಸಲು ತೊಡಗಿದಾಗ ಉತ್ತರ ನೀಡಲು ತಡವರಿಸಿದ್ದಾರೆ. ಕಾರಿನಲ್ಲಿ ಪರಾರಿಯಾಗಲು ಯತ್ನಿಸಿದ್ದಾರೆ. ಆಗ ಗ್ರಾಮಸ್ಥರು ಅವರನ್ನು ಹಿಡಿದು ಅಕ್ಕೂರು ಪೊಲೀಸರಿಗೆ ಒಪ್ಪಿಸಿದ್ದಾರೆ. ಸಂಜು ಮೆಡಿಕಲ್ ಸ್ಟೋರಿನ ಮಾಲೀಕ ಸಂಜಯ್ ಅವರು ಅಕ್ಕೂರು ಪೊಲೀಸ್ ಠಾಣೆಯಲ್ಲಿ ಈ ಬಗ್ಗೆ ದೂರು ದಾಖಲಿಸಿದ್ದಾರೆ. ನಾಲ್ವರನ್ನೂ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಹೆಚ್ಚಿನ ವಿಚಾರಣೆಗೆ ನ್ಯಾಯಾಲಯ ಅವರನ್ನು ಪೊಲೀಸರ ವಶಕ್ಕೆ ನೀಡಿದೆ ಎಂದು ಅಕ್ಕೂರು ಪೊಲೀಸರು ತಿಳಿಸಿದ್ದಾರೆ.

## ಗೊಂದಲದಗೂಡಾದ ಪರಿಶಿಷ್ಟರ ಕುಂದುಕೊರತೆ ಸಭೆ

• ಉದಯವಾಹಿನಿ, ಚಿಕ್ಕಬಳ್ಳಾಪುರ

ನಗರದ ಅಂಬೇಡ್ಕರ್ ಭವನದಲ್ಲಿ ನಡೆದ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಕುಂದು ಕೊರತೆ ಸಭೆಯು ಗೊಂದಲದ ಗೂಡಾಯಿತು. ಸಭೆಗೆ ಕೆಲ ದಲಿತ ಮುಖಂಡರು ಬಹಿಷ್ಕಾರ ಹಾಕಿ ಹೊರ ನಡೆದರೆ, ಸಭೆಯಲ್ಲಿ ಹಾಜರಿದ್ದವರ ಸಮಸ್ಯೆಯನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಾಲ್ ಚೌಕ್ಸೆ ಆಲಿಸಿದರು. ಪರಿಹಾರ ನೀಡುವ ಭರವಸೆ ನೀಡಿದರು. ಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ದಲಿತ ಮುಖಂಡರು ಬಹಿಷ್ಕಾರ ಹಾಕಿದ ಪರಿಣಾಮ ಬೆರಳೆಣಿಕೆಯಷ್ಟು ಮಂದಿ ಮಾತ್ರ ಭಾಗವಹಿಸಿದ್ದರು. ಸಭೆಯಲ್ಲಿದ್ದವರ ಸಮಸ್ಯೆ ಆಲಿಸಿದ ಜಿಲ್ಲಾ ಪೊಲೀಸ್ ಇಲಾಖೆ, ಅವರ ಸಮಸ್ಯೆ ಬಗೆಹರಿಸುವ ಭರವಸೆ ನೀಡಿತು.

ನಂತರ ಮಾತನಾಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಾಲ್ ಚೌಕ್ಸೆ, ಸಭೆಯಿಂದ ವಾಪಸ್ ಹೋದವರು ನಮ್ಮನ್ನು ಸಂಪರ್ಕಿಸಿ, ಅವರ ಸಮಸ್ಯೆ ಏನು ಎಂದು ಹೇಳಿಲ್ಲ. ಬಂದವರ ಸಮಸ್ಯೆ ಆಲಿಸಿದ್ದೇವೆ. ವಾಪಸ್ ಹೋದವರು ಸಮಸ್ಯೆ ಹೇಳಿದರೆ ಅವರ ಸಮಸ್ಯೆಯನ್ನೂ ಬಗೆಹರಿಸಲು ಶ್ರಮಿಸಲಾಗುವುದು ಎಂದರು. ಈ ಸಭೆ ಇಂದಿಗೆ ಮಾತ್ರ ಸೀಮಿತವಲ್ಲ. ನಿರಂತರವಾಗಿ


ಉದಯವಾಹಿನಿ ಚಿತ್ರ

ನಡೆಯಲಿದೆ. ಯಾರಿಗೆ ಸಮಸ್ಯೆ ಇದೆ ಅವರು ಬಂದು ಸಮಸ್ಯೆ ಹೇಳಿಕೊಂಡಿದ್ದಾರೆ. ಯಾರಿಗೆ ಸಮಸ್ಯೆ ಇಲ್ಲ ಅವರು ಸಭೆ ಬಹಿಷ್ಕರಿಸಿದ್ದಾರೆ ಎಂದರು. ಪ್ರತಿ ಜಿಲ್ಲೆಯಲ್ಲಿ ಡಿಸಿಆರ್ ಠಾಣೆ ಆರಂಭಿಸಲಾಗಿದೆ. ಅದೇ ರೀತಿಯಲ್ಲಿ ಜಿಲ್ಲೆಯಲ್ಲಿಯೂ ಡಿಸಿಆರ್ ಠಾಣೆಯನ್ನು ಬೆಸ್ಕಾಂ ಕಚೇರಿಯ ಪಕ್ಕದ ಖಾಸಗಿ ಕಟ್ಟಡದಲ್ಲಿ ಆರಂಭಿಸಲಾಗಿದೆ. ಡಿಸಿಆರ್ ಠಾಣೆಯಲ್ಲಿ ದಲಿತರ ಮೇಲಿನ ದೌರ್ಜನ್ಯದ ಪ್ರಕರಣಗಳು ತನಿಖೆ ನಡೆಯುತ್ತಿವೆ ಎಂದು ಹೇಳಿದರು.

ಯಾವ ಪ್ರಕರಣಗಳು ನ್ಯಾಯಾಲಯದಲ್ಲಿವೆ ಅವುಗಳ ಪರಿಹಾರ ನಮ್ಮಿಂದ ಸಾಧ್ಯವಿಲ್ಲ. ನಮ್ಮಿಂದ ಆಗುವ ಎಲ್ಲಾ ವಿಚಾರಗಳಿಗೆ ಸಹಕಾರ ನೀಡುತ್ತೇವೆ ಎಂದು ಹೇಳಿದರು. ಕುಂದುಕೊರತೆ ಸಭೆಯಲ್ಲಿ ಜಮೀನು ವಿವಾದ, ಹಳೆಯ ಪ್ರಕರಣಗಳಲ್ಲಿ ಅಟ್ರಾಸಿಟಿ ಆಗಿಲ್ಲ ಅಂತ ದೂರಿದ್ದಾರೆ, ಜನರ ವೈಯಕ್ತಿಕ ಸಮಸ್ಯೆಗಳನ್ನು ಹೇಳಿಕೊಂಡಿದ್ದಾರೆ. ನಮ್ಮಿಂದ ಪರಿಹಾರ ಸಾಧ್ಯವಾದರೆ ನಾವು ಪರಿಹರಿಸುತ್ತೇವೆ, ಬೇರೆ ಇಲಾಖೆಗಳ ಸಮಸ್ಯೆ ಇದ್ದರೆ ಆ ಇಲಾಖೆಗಳಿಗೆ ದೂರು ವರ್ಗಾಯಿಸುತ್ತೇವೆ ಎಂದು ಹೇಳಿದರು.

> **ಚಿಂತಾಮಣಿ ಸಭೆ**
> 200 ಮಂದಿ ಭಾಗಿ ಕಳೆದ ವಾರ ಚಿಂತಾಮಣಿಯಲ್ಲಿ ಸಭೆ ನಡೆಸಲಾಗಿದೆ. ಆ ಸಭೆಯಲ್ಲಿ 200ಕ್ಕೂ ಹೆಚ್ಚು ಜನರು ಭಾಗವಹಿಸಿದ್ದರು. ಈ ಹಿಂದೆಯೇ ಕುಂದುಕೊರತೆ ಸಭೆ ಕರೆಯಲಾಗಿತ್ತು. ಆದರೆ ಅಂದು ಮತ್ತೊಂದು ಸಭೆ ಇದ್ದ ಕಾರಣ ಮತ್ತೊಂದು ದಿನ ಸಭೆ ನಡೆಸುವಂತೆ ಕೋರಿದ್ದರು. ಆದ ಕಾರಣ ಸಭೆ ಆಯೋಜಿಸಲಾಗಿದೆ ಎಂದು ಎಸ್‌ಪಿ ತಿಳಿಸಿದರು.

### ಹಾಳಾಗಿರುವ ವೇದಿಕೆಯ ಮರದ ನೆಲಹಾಸು: ಆಧುನೀಕರಣಗೊಳ್ಳದ ಸೌಂಡ್–ಲೈಟಿಂಗ್ ವ್ಯವಸ್ಥೆ

## ಕಾಯಕಲ್ಪಕ್ಕೆ ಕಾದಿರುವ ಕಲಾಮಂದಿರ

• ಉದಯವಾಹಿನಿ, ಮಂಡ್ಯ

ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಪ್ರಮುಖ ವೇದಿಕೆಯಾದ ನಗರದ ನಾಲ್ವಡಿ ಕೃಷ್ಣರಾಜ ಒಡೆಯರ್ ಕಲಾಮಂದಿರವು ಮೂಲಸೌಕರ್ಯಗಳಿಂದ ವಂಚಿತವಾಗಿದ್ದು, ಕಾಯಕಲ್ಪಕ್ಕೆ ಕಾಯುತ್ತಿದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವ್ಯಾಪ್ತಿಗೆ ಸೇರಿದ ಈ ಕಲಾಮಂದಿರವನ್ನು 2003ರಲ್ಲಿ ಅಂದಿನ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರು ಉದ್ಘಾಟಿಸಿದ್ದರು. ಇಲ್ಲಿ ಪ್ರಸ್ತುತ 606 ಸಭಿಕರ ಆಸನಗಳಿವೆ. ಈ ಕಲಾಮಂದಿರದ ನಿರ್ವಹಣಾ ಸಮಿತಿಗೆ ಜಿಲ್ಲಾಧಿಕಾರಿ ಅಧ್ಯಕ್ಷರಾಗಿದ್ದಾರೆ.

ಸೌಂಡ್, ಲೈಟಿಂಗ್ ವ್ಯವಸ್ಥೆ ತೀರಾ ಹಳೆಯದಾಗಿದ್ದು, ಕಾಲಕ್ಕೆ ತಕ್ಕಂತೆ ಆಧುನೀಕರಣಗೊಂಡಿಲ್ಲ. ಕಾರ್ಯಕ್ರಮ ನಡೆಯುವ ಸಂದರ್ಭದಲ್ಲಿ ಪ್ರತಿಧ್ವನಿ (ಎಕೋ) ಬರುತ್ತಿರುವ ಕಾರಣ ಕಲಾರಸಿಕರಿಗೆ ಗಾಯನ, ಸಂಗೀತ ಆಸ್ವಾದಿಸುವುದಕ್ಕೆ ತೊಡಕಾಗಿದೆ. ಹೀಗಾಗಿ ಸೌಂಡ್ ಪ್ರೂಫ್ ಅಳವಡಿಸುವುದು ಅತ್ಯಗತ್ಯವಾಗಿದೆ. ವೇದಿಕೆಯ ಮರದ ನೆಲಹಾಸು ಕಿತ್ತು ಹೋಗಿದ್ದು, ಅತಿಥಿ ಮತ್ತು ಪಾತ್ರಧಾರಿಗಳಿಗೆ ಕಿರಿಕಿರಿ ಉಂಟು ಮಾಡುತ್ತಿದೆ. ವೇದಿಕೆಯ 'ವಾಲ್ ಪ್ಯಾನಲಿಂಗ್' ಹಾಳಾಗಿದೆ. ಹಿಂಭಾಗದಲ್ಲಿ



ಉದಯವಾಹಿನಿ ಚಿತ್ರ

ರೋಲಿಂಗ್ ಶೆಟರ್ ಇಲ್ಲದ ಕಾರಣ ನಾಟಕ ಪ್ರದರ್ಶನಕ್ಕೆ ಪರಿಕರಗಳನ್ನು ತರುವುದು ಸಮಸ್ಯೆಯಾಗಿದೆ.

ಜನರೇಟರ್ ಹಳೆಯದಾಗಿದ್ದು, ಪದೇ ಪದೇ ಕೈಕೊಡುತ್ತಿದೆ. ಹೊಸ ಜನರೇಟರ್ ವ್ಯವಸ್ಥೆ ಆಗಬೇಕು. ಕಲಾಮಂದಿರದ ಆವರಣದಲ್ಲಿ ಕ್ಯಾಂಟೀನ್ ಆರಂಭಿಸಬೇಕು. ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಿ, ಉದ್ಯಾನ ಅಭಿವೃದ್ಧಿಪಡಿಸಬೇಕು ಎಂದು ರಂಗಭೂಮಿ ಕಲಾವಿದರು ಒತ್ತಾಯಿಸಿದ್ದಾರೆ.

**ಆಸನಗಳ ಬದಲಾವಣೆ:** 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಸಂದರ್ಭದಲ್ಲಿ (2024ರ ಡಿ.20ರಿಂದ 22ರವರೆಗೆ) ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಕಲಾಮಂದಿರದಲ್ಲಿ ನಡೆಸಬೇಕು ಎಂಬ ಉದ್ದೇಶದಿಂದ ಹಾಗೂ ಕಲಾವಿದರ ಒತ್ತಾಯದ ಮೇರೆಗೆ 1.08 ಕೋಟಿ ವೆಚ್ಚದಲ್ಲಿ ನವೀಕರಣ ಕಾರ್ಯ ನಡೆಯಿತು. ಹಾಳಾಗಿದ್ದ 755 ಕಬ್ಬಿಣದ ಚೇರುಗಳನ್ನು ತೆರವುಗೊಳಿಸಿ. 53 ಲಕ್ಷ ವೆಚ್ಚದಲ್ಲಿ 606 'ಕುಶನ್ ಚೇರ್'ಗಳನ್ನು ಅಳವಡಿಸಲಾಯಿತು.

ಮಳೆ ಬಂದಾಗ ಸೋರುತ್ತಿದ್ದ ಕಾರಣ, ಶಿಥಿಲವಾಗಿದ್ದ ಸಿಮೆಂಟ್ ಶೀಟುಗಳನ್ನು ತೆಗೆದು, ಹೊಸ ತಗಡಿನ ಶೀಟುಗಳನ್ನು ಅಳವಡಿಸಲಾಗಿದೆ. ಚಾವಣಿಯ ಒಳಭಾಗದಲ್ಲಿ ಪಿಒಪಿ ವರ್ಕ್ ಮಾಡಲಾಗಿದೆ. ಪಾಳುಬಿದ್ದಿದ್ದ ಶೌಚಾಲಯ, ಗ್ರೀನ್ ರೂಂಗಳನ್ನು ನವೀಕರಣ ಮಾಡಲಾಗಿದೆ. ಸೌಂಡ್ ಮತ್ತು ಲೈಟಿಂಗ್ ರಿಪೇರಿ ಕಾರ್ಯವನ್ನೂ ನಡೆಸಲಾಗಿದೆ ಎನ್ನುತ್ತಾರೆ ಇಲಾಖೆ ಅಧಿಕಾರಿಗಳು.

**ಸಂಪೂರ್ಣ ನವೀಕರಣದ ಅಗತ್ಯವಿದೆ:** ಪ್ರಸಾಧನ ಕೊಠಡಿ ಅತಿಥಿಗಳ ಕೊಠಡಿ ನವೀಕರಣಗೊಳ್ಳಬೇಕು. ಕ್ಯಾಂಟಿನ್ ಸೌಲಭ್ಯ ಕಲ್ಪಿಸಬೇಕು. ಕಲೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಗೆ ಉತ್ತಮ ವೇದಿಕೆ ಒದಗಿಸಲು ಕಲಾಮಂದಿರವನ್ನು ಸಂಪೂರ್ಣ ನವೀಕರಣಗೊಳಿಸುವ ಅಗತ್ಯವಿದೆ ಎಂದು ಕರ್ನಾಟಕ ಸಂಘದ ಅಧ್ಯಕ್ಷ ಪ್ರೊ.ಬಿ. ಜಯಪ್ರಕಾಶಗೌಡ ಅಭಿಪ್ರಾಯಪಟ್ಟಿದ್ದಾರೆ. ಪೌರಾಣಿಕ ನಾಟಕಗಳ ಪ್ರದರ್ಶನಕ್ಕೆ ಸೀಮಿತವಾಗಿರುವ ಕಲಾಮಂದಿರವನ್ನು ವಿಚಾರ ಸಂಕಿರಣ ಕೃತಿ ಬಿಡುಗಡೆ ಸಂಗೀತ ಕಾರ್ಯಕ್ರಮ ಸಾಮಾಜಿಕ ನಾಟಕ ಕಾರ್ಯಾಗಾರಗಳಿಗೂ ಸ್ಥಳಾವಕಾಶ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

> **ಮರದ ನೆಲಹಾಸು**
> ವಾಲ್ ಪ್ಯಾನಲಿಂಗ್ ರೋಲಿಂಗ್ ಶೆಟರ್ ಕಾಮಗಾರಿಗೆ 18.50 ಲಕ್ಷದ ಪ್ರಸ್ತಾವವನ್ನು ಜಿಲ್ಲಾಧಿಕಾರಿಯವರ ಮೂಲಕ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕರಿಗೆ ಸಲ್ಲಿಸಲಾಗಿದೆ.
> – ಬಿ.ವಿ. ನಂದೀಶ್ ಸಹಾಯಕ ನಿರ್ದೇಶಕ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಂಡ್ಯ

> ನಾಟಕ ಪ್ರದರ್ಶನಕ್ಕೆ ಹೊರಗಡೆಯಿಂದ ಧ್ವನಿ ಮತ್ತು ಬೆಳಕಿನ ಪರಿಕರಗಳನ್ನು ಬಾಡಿಗೆಗೆ ತರಬೇಕಿದೆ. ಫ್ಯಾನ್‌ಗಳು ಹಾಳಾಗಿದ್ದು ಕರ್ಕಶ ಶಬ್ದ ಮಾಡುತ್ತಿವೆ. ಹವಾನಿಯಂತ್ರಿತ ವ್ಯವಸ್ಥೆ ಕಲ್ಪಿಸಬೇಕು
> – ಎಂ.ಸಿ. ಲಂಕೇಶ್ ಅಧ್ಯಕ್ಷ ನೆಲದನಿ ಬಳಗ ಮಂಡ್ಯ

## ಮಿನಿ ನ್ಯೂಸ್

### ಬಿಜೆಪಿಯಿಂದ ಗುಂಡಿ ಮುಚ್ಚಿ ಅಭಿಯಾನ ರಸ್ತೆ ಗುಂಡಿಯಲ್ಲಿ ನಾಟಿ ಮಾಡಿ ಆಕ್ರೋಶ

• ಉದಯವಾಹಿನಿ, ಚಾಮರಾಜನಗರ

ಬಿಜೆಪಿಯಿಂದ ವಿಧಾನಸಭಾ ಕ್ಷೇತ್ರದಲ್ಲಿ ರಸ್ತೆ ಗುಂಡಿ ಅಭಿಯಾನ ಹಿನ್ನೆಲೆ ಗಡಿ ಜಿಲ್ಲೆ ಚಾಮರಾಜನಗರದಲ್ಲೂ ಕೂಡ ಕ್ಷೇತ್ರವಾರು ಬಿಜೆಪಿಯಿಂದ ಗುಂಡಿ ಮುಚ್ಚಿ ಅಭಿಯಾನ ನಡೆಯಿತು. ಹನೂರು ಕ್ಷೇತ್ರದ ಬಿಜೆಪಿ ಕಾರ್ಯಕರ್ತರು ಕೊಳ್ಳೇಗಾಲದ ಮಧುವನಹಳ್ಳಿಯಿಂದ ಒಡೆಯರ್ ಪಾಳ್ಯ ಮೂಲಕ ತಮಿಳುನಾಡಿಗೆ ಸಂಪರ್ಕ ಕಲ್ಪಿಸುವ ರಾಜ್ಯ ಹೆದ್ದಾರಿಯು ಗುಂಡಿಮಯವಾಗಿದೆ ಎಂದು ರಸ್ತೆಯಲ್ಲಿ ಭತ್ತದ ಪೈರು ನಾಟಿ ಮಾಡಿ ಸರ್ಕಾರ, ಸ್ಥಳೀಯ ಶಾಸಕರ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ಗುಂಡ್ಲುಪೇಟೆ ಕ್ಷೇತ್ರದಲ್ಲೂ ಕೂಡ ಬಿಜೆಪಿ ಜಿಲ್ಲಾಧ್ಯಕ್ಷ ನಿರಂಜನ್ ಕುಮಾರ್ ನೇತೃತ್ವದಲ್ಲಿ ಗುಂಡ್ಲುಪೇಟೆ ಪಟ್ಟಣದ ಕೊಡಿಹಳ್ಳಿ ಸರ್ಕಲ್ ಬಳಿ ಹೆದ್ದಾರಿ ತಡೆದು ಪ್ರತಿಭಟಿಸಿ ಮಣ್ಣಿನ ಮೂಲಕ ಗುಂಡಿ ಮುಚ್ಚಿ ರಾಜ್ಯ ಸರ್ಕಾರ ಹಾಗೂ ಸ್ಥಳೀಯ ಕಾಂಗ್ರೆಸ್ ಶಾಸಕ ಗಣೇಶ್ ಪ್ರಸಾದ್ ವಿರುದ್ಧ ಧಿಕ್ಕಾರ ಕೂಗಿ ಗುಂಡಿ ಮುಚ್ಚಿ ಕ್ಷೇತ್ರದ ಎಲ್ಲಾ ಕಡೆಯೂ ಗುಂಡಿ ಮುಚ್ಚುವಂತೆ ಆಗ್ರಹಿಸಿದರು. ಸ್ಥಳೀಯ ಶಾಸಕ ಗಣೇಶ್ ಪ್ರಸಾದ್ ಅವರ ಊರು ಹಾಲಹಳ್ಳಿಗೆ ಪದೇ ಪದೆ ರಸ್ತೆ ಮಾಡಿಸುತ್ತಿದ್ದಾರೆ. ಆದರೆ, ಪಕ್ಕದ ಗ್ರಾಮಗಳಿಗೆ ರಸ್ತೆ ಭಾಗ್ಯ ಕಲ್ಪಿಸಿಲ್ಲ ಅಂತಾ ಆಕ್ರೋಶ ವ್ಯಕ್ತಪಡಿಸಿದರು.

### ಶ್ರೀರಂಗಪಟ್ಟಣ ದಸರಾಗೆ ವಿದ್ಯುಕ್ತ ಚಾಲನೆ ಅಂಬಾರಿಗೆ ಟಿ.ಎಸ್.ನಾಗಾಭರಣ ಪುಷ್ಪಾರ್ಚನೆ

• ಉದಯವಾಹಿನಿ, ಮಂಡ್ಯ

ಇಂದಿನಿಂದ ನಾಲ್ಕು ದಿನಗಳ ಕಾಲ ನಡೆಯಲಿರುವ ಶ್ರೀರಂಗಪಟ್ಟಣ ದಸರಾಗೆ ವಿದ್ಯುಕ್ತ ಚಾಲನೆ ದೊರಕಿದೆ. 415ನೇ ಶ್ರೀರಂಗಪಟ್ಟಣ ದಸರಾ ಮಹೋತ್ಸವ ಹಿನ್ನೆಲೆ ಮಂಗಳಾರತಿ ಬಳಿಕ ಅಂಬಾರಿಗೆ ಪುಷ್ಪಾರ್ಚನೆ ಮಾಡುವ ಮೂಲಕ ಜಂಬೂ ಸವಾರಿಗೆ ವಿದ್ಯುಕ್ತ ಚಾಲನೆ ನೀಡಲಾಯಿತು. ಶ್ರೀರಂಗಪಟ್ಟಣದ ಕಿರಂಗೂರು ಬಳಿ ಬನ್ನಿಮಂಟಪದಲ್ಲಿ ಪೂಜಾ ಕೈಂಕರ್ಯ ಬಳಿಕ ನಟ, ನಿರ್ದೇಶಕ ಟಿ.ಎಸ್.ನಾಗಾಭರಣ ಚಾಲನೆ ಕೊಟ್ಟರು. ದಸರಾ ಆನೆ ಮಹೇಂದ್ರನ ಮೇಲೆ ಮರದ ಅಂಬಾರಿಯಲ್ಲಿ ವಿರಾಜಮಾನಳಾದ ನಾಡದೇವಿಗೆ ಪುಷ್ಪಾರ್ಚನೆ ಮಾಡಲಾಯಿತು. ಮರದ ಅಂಬಾರಿ ಹೊತ್ತ ಮಹೇಂದ್ರ ಆನೆ ಜೊತೆಗೆ ಕುಮ್ಕಿ ಆನೆಗಳಾದ ಕಾವೇರಿ, ಲಕ್ಷ್ಮೀ ಹೆಜ್ಜೆ ಹಾಕಿದವು. ವಿವಿಧ ಕಲಾತಂಡಗಳಾದ ಬ್ಯಾಂಡ್, ಪೂಜಾ ಕುಣಿತ, ವೀರಗಾಸೆ, ನಗಾರಿ, ಜಡೆ ಕೋಲಾಟ, ಗಾರುಡಿ ಗೊಂಬೆ, ತಮಟೆ, ದೊಣ್ಣೆವರಸೆ, ಡೊಳ್ಳು ಕುಣಿತ, ಕಂಸಾಳೆ, ಕೊಂಬು–ಕಹಳೆ ಹಾಗೂ ಸ್ತಬ್ಧ ಚಿತ್ರಗಳ ಮೆರವಣಿಗೆ ಗಮನ ಸೆಳೆಯಿತು. ಸಚಿವ ಚಲುವರಾಯಸ್ವಾಮಿ, ಶಾಸಕ ರಮೇಶ್ ಬಂಡಿಸಿದ್ದೇಗೌಡ ಸೇರಿ ಹಲವರು ಭಾಗಿಯಾಗಿದ್ದರು. ಶ್ರೀರಂಗನಾಥಸ್ವಾಮಿ ದೇವಾಲಯ ಬಳಿಯ ವೇದಿಕೆಯಲ್ಲಿ ಸಂಜೆ 6 ಗಂಟೆಗೆ ಸಾಂಸ್ಕೃತಿಕ ಕಾರ್ಯಕ್ರಮ ಚಾಲನೆ ಸಿಗಲಿದೆ.

### ರೈತರು ಸಾಲ ಮರುಪಾವತಿಸಿದ್ದಲ್ಲಿ ಸಹಕಾರ ಸಂಘಗಳ ಅಭಿವೃದ್ಧಿ

• ಉದಯವಾಹಿನಿ, ತಿ.ನರಸೀಪುರ

ರೈತರು ಸಕಾಲಕ್ಕೆ ಸಾಲವನ್ನು ಮರುಪಾವತಿ ಮಾಡಿ ಕೃಷಿ ಪತ್ತಿನ ಸಹಕಾರ ಸಂಘದ ಅಭಿವೃದ್ಧಿಗೆ ಸಹಕರಿಸಬೇಕೆಂದು ತಾಲ್ಲೂಕಿನ ಮೂಗೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಜಗದೀಶ್ ಮೂರ್ತಿ ಮನವಿ ಮಾಡಿದರು. ಗ್ರಾಮದಲ್ಲಿರುವ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆವರಣದಲ್ಲಿ ನಡೆದಂತಹ 2025–25ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಸಾಲ ವಸೂಲಾತಿ ಮೇಲೆ ಸಹಕಾರಿ ಸಂಘಗಳ ಅಭಿವೃದ್ಧಿ ಅವಲಂಬನೆ ಆಗಿರುವುದರಿಂದ ಬೆಳೆ ಸಾಲ ಪಡೆದ ರೈತರು ಸಕಾಲದಲ್ಲಿ ಮರುಪಾವತಿಸಿ ಸಂಘದ ಅಭಿವೃದ್ಧಿಗೆ ಕೈ ಜೋಡಿಸಬೇಕೆಂದು ಕೋರಿದರು.

ಮುಖ್ಯ ಕಾರ್ಯನಿರ್ವಾಹಕ ಎಂ.ನಂದೀಶ್ ಪ್ರಸ್ತುತ ಸಾಲಿನ ಖರ್ಚು ವೆಚ್ಚ ಲಾಭ ನಷ್ಟ ಮತ್ತು ಆಸ್ತಿ ವಿವರಗಳನ್ನು ಸಭೆಯಲ್ಲಿ ವರದಿ ಮಂಡಿಸಿ ಮಾತನಾಡಿ, ಸಂಘವು ಈ ಸಾಲಿನಲ್ಲಿ 1.80 ಲಕ್ಷ ರೂಗಳ ನಷ್ಟದಲ್ಲಿದೆ. ಇದರಲ್ಲಿ 40 ರಷ್ಟು ಸುಸ್ತಿಯಾಗಿದೆ. ಇಲ್ಲಿಯವರೆಗೆ 8 ಕೋಟಿ 88 ಲಕ್ಷ ರೂಗಳು ಸಾಲವನ್ನು ನೀಡಲಾಗಿದೆ ಎಂದರು.

### ಕೃಷಿ ಹೊಂಡದಲ್ಲಿ ಮುಳುಗಿ ಇಬ್ಬರು ಮಕ್ಕಳ ದುರ್ಮರಣ

• ಉದಯವಾಹಿನಿ, ಹನೂರು

ತೋಟದ ಜಮೀನಿನಲ್ಲಿ ಇದ್ದ ಕೃಷಿ ಹೊಂಡದಲ್ಲಿ ಮುಳುಗಿ ಇಬ್ಬರು ಪುಟ್ಟ ಬಾಲಕರು ಸಾವನ್ನಪ್ಪಿರುವ ದಾರುಣ ಘಟನೆ ರಾಮಪುರ ಪೊಲೀಸ್ ಠಾಣೆ ವ್ಯಾಪ್ತಿಯ ಕುರುಬರ ದೊಡ್ಡಿ ಗ್ರಾಮದಲ್ಲಿ ಮಧ್ಯಾಹ್ನದ ವೇಳೆಗೆ ನಡೆದಿದೆ. ಹನೂರು ಪಟ್ಟಣದ ಆರ್.ಎಸ್. ದೊಡ್ಡಿಯಲ್ಲಿ ವಾಸವಾಗಿದ್ದ ಕುಮಾರಸ್ವಾಮಿ ಅವರ ಮಕ್ಕಳಾದ ಸಂಜಯ್, ಯೋಗೇಶ್ ಪುಟ್ಟ ಬಾಲಕರು ಮೃತಪಟ್ಟ ದುರ್ದೈವಿಗಳು. ಆರ್.ಎಸ್. ದೊಡ್ಡಿಯ ಕುಮಾರಸ್ವಾಮಿ ಅವರು ಶಾಲೆಗೆ ದಸರಾ ರಜೆಯ ಹಿನ್ನಲೆಯಲ್ಲಿ ತಮ್ಮ ಇಬ್ಬರು ಮಕ್ಕಳನ್ನು ಕುರುಬರ ದೊಡ್ಡಿ ಗ್ರಾಮದ ತೋಟದ ಮನೆಯಲ್ಲಿ ಬಿಟ್ಟು ಹೋಗಿದ್ದಾರೆ. ಸಂಜಯ್ ಮತ್ತು ಯೋಗೇಶ್ ಇಬ್ಬರು ಮಕ್ಕಳು ಆಟವಾಡುವ ವೇಳೆ ಪಕ್ಕದ ಜಮೀನಿನ ಲಿಂಗಪ್ಪ ಎಂಬುವರ ಜಮೀನಿನಲ್ಲಿ ಕೃಷಿ ಹೊಂಡದ ಹತ್ತಿರ ಹೋಗಿ ಆಕಸ್ಮಿಕವಾಗಿ ಕಾಲು ಜಾರಿ ಬಿದ್ದು ಮುಳುಗಿ ಮೃತಪಟ್ಟಿದ್ದಾರೆ ಎನ್ನಲಾಗಿದೆ. ಇಬ್ಬರು ಮಕ್ಕಳು ಮನೆಯ ಹತ್ತಿರ ಇಲ್ಲದಿರುವುದನ್ನು ಗಮನಿಸಿ ಅಜ್ಜಿ ಮಕ್ಕಳನ್ನು ಹುಡುಕುತ್ತಿದ್ದಾಗ ಮಕ್ಕಳು ಕೃಷಿ ಹೊಂಡದಲ್ಲಿ ಮುಳುಗಿ ಸಾವನ್ನಪ್ಪಿರುವುದು ಕಂಡು ಬಂದಿದೆ. ವಿಷಯ ತಿಳಿದ ರಾಮಪುರ ಪೊಲೀಸ್ ಠಾಣೆ ಸಿ.ಪಿ.ಐ ಚಿಕ್ಕರಾಜು ಶೆಟ್ಟಿ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿ ಮಾಹಿತಿ ಪಡೆದು ಪ್ರಕರಣ ದಾಖಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗಿದೆ. ಈ ದುರ್ಘಟನೆ ಮನೆಯನ್ನು ಶೋಕದ ಮಡುಗಟ್ಟಿಸಿದೆ. ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟುವಂತಿತ್ತು.

### ಆರೋಪಿಗಳ ಗಡಿಪಾರಿಗೆ ಆಗ್ರಹ

• ಉದಯವಾಹಿನಿ, ಕನಕಪುರ

ನಗರದ ಇಂದಿರಾನಗರದಲ್ಲಿ ಹಿಂದೂ ಮತ್ತು ಮುಸ್ಲಿಂ ಧರ್ಮಕ್ಕೆ ಸೇರಿದ ಪ್ರೇಮಿಗಳಿಬ್ಬರ ಮೇಲೆ ಹಲ್ಲೆ ನಡೆಸಿ, ತಲೆಯನ್ನು ಅರ್ಧ ಬೋಳಿಸಿ ಅಮಾನುಷವಾಗಿ ವರ್ತಿಸಿರುವವರ ವಿರುದ್ಧ ಗೂಂಡಾಗಿರಿ ಕಾಯ್ದೆ ದಾಖಲಿಸಿ ಗಡಿಪಾರು ಮಾಡುವಂತೆ ಒತ್ತಾಯಿಸಿ ಶ್ರೀರಾಮ ಸೇನೆ ಪದಾಧಿಕಾರಿಗಳು ಪುರ ಪೊಲೀಸರಿಗೆ ದೂರು ಸಲ್ಲಿಸಿದರು.

ಈ ವೇಳೆ ಶ್ರೀರಾಮ ಸೇನಾ ರಾಜ್ಯ ಪ್ರಧಾನ ಕಾರ್ಯದರ್ಶಿ ನಾಗಾರ್ಜುನಗೌಡ ಮಾತನಾಡಿ, ಇಬ್ಬರು ಪ್ರೇಮಿಗಳ ನಡುವೆ ಗುಂಪೊಂದು ನೈತಿಕ ಪೊಲೀಸ್ ಗಿರಿ ಪ್ರದರ್ಶಿಸಿ ಅಮಾನುಷವಾಗಿ ವರ್ತಿಸಿದ್ದಾರೆ ಎಂದು ಆರೋಪಿಸಿದರು. ಹಲ್ಲೆಗೊಳಗಾಗಿರುವ ಮಹೇಶ್ ತಾಯಿ ಮೇಲೆಯೂ ಮುಸ್ಲಿಂ ಮಹಿಳೆಯರು ಮಾರಣಾಂತಿಕ ಹಲ್ಲೆ ನಡೆಸಿದ್ದಾರೆ. ಆದರೆ, ಈವರೆಗೂ ಆರೋಪಿಗಳ ವಿರುದ್ಧ ಪ್ರಕರಣ ದಾಖಲಾಗಿಲ್ಲ ಎಂದು ದೂರಿದರು.

ಅಂತರಾಳದಿಂದ... EDITORIAL

# ಸರ್ಕಾರದ ಮಹತ್ವಾಕಾಂಕ್ಷೆಯ ಸಮೀಕ್ಷೆ; ತರಾತುರಿ ಬೇಡ, ಗೊಂದಲ ಬಗೆಹರಿಸಿ

ಹಿಂದುಳಿದ ವರ್ಗಗಳ ಶಾಶ್ವತ ಆಯೋಗದಿಂದ ರಾಜ್ಯದಲ್ಲಿ ನಡೆಯುತ್ತಿರುವ ಬಹು ನಿರೀಕ್ಷಿತ 'ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಆರಂಭದಲ್ಲೇ ಹಲವು ತೊಡಕುಗಳನ್ನು ಎದುರಿಸಿದೆ. ಆಡಳಿತಾತ್ಮಕ ತೊಡಕುಗಳು ಹಾಗೂ ತರಬೇತಿಯ ಕೊರತೆ ಸೇರಿದಂತೆ, ರಾಜ್ಯದ ಬಹುತೇಕ ಕಡೆಗಳಲ್ಲಿ ಸಮೀಕ್ಷೆಯಲ್ಲಿ ತೊಡಗಿರುವ ಸಮೀಕ್ಷಕರು ಬೇರೆ ಬೇರೆ ರೂಪದ ಸಮಸ್ಯೆಗಳನ್ನು ಎದುರಿಸಿದ್ದಾರೆ. ಸಮೀಕ್ಷೆ ನಡೆಸಲು ಅಗತ್ಯವಾದ ಆ್ಯಪ್ ಡೌನ್‌ಲೋಡ್ ಆಗದಿರುವುದು, ಸರ್ವರ್ ಸ್ಥಗಿತಗೊಳ್ಳುವಿಕೆ, ಒಟಿಪಿ ಬಾರದಿರುವುದು ಸೇರಿದಂತೆ ಹಲವು ತೊಡರುಗಳು ಸಮೀಕ್ಷೆ ಸಮಯದಲ್ಲಿ ಕಾಣಿಸಿಕೊಂಡಿವೆ. ಕೆಲವೆಡೆ ಸಮೀಕ್ಷೆ ಇನ್ನೂ ಆರಂಭಗೊಂಡಿಲ್ಲ. ಇವೆಲ್ಲ ಸಮಸ್ಯೆಗಳು ಮಹತ್ವದ ಸಮೀಕ್ಷೆ ನಡೆಸಲು ಅಗತ್ಯವಾದ ಕಾರ್ಯಯೋಜನೆಯ ದೌರ್ಬಲ್ಯ ಹಾಗೂ ಪೂರ್ವಸಿದ್ಧತೆಯಲ್ಲಿನ ಕೊರತೆಯತ್ತ ಬೆರಳುಮಾಡುವಂತಿವೆ. ಸುಮಾರು ಎರಡು ಲಕ್ಷ ಸಮೀಕ್ಷಕರನ್ನು ಬಳಸಿಕೊಂಡು,2 ಕೋಟಿ ಕುಟುಂಬಗಳ ಸಮೀಕ್ಷೆ ನಡೆಸುವ ಬೃಹತ್ ಯೋಜನೆಯನ್ನು ಸರ್ಕಾರ ತರಾತುರಿಯಲ್ಲಿ ಆರಂಭಿಸಿದಂತಿದೆ.



> ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ತರಾತುರಿಯಲ್ಲಿ ನಡೆಸುವುದರಿಂದ ಸಮಸ್ಯೆಗಳೇ ಹೆಚ್ಚು, ಸರ್ಕಾರ ಗೊಂದಲಗಳನ್ನು ಬಗೆಹರಿಸಿ, ವೈಜ್ಞಾನಿಕವಾಗಿ ಸಮೀಕ್ಷೆ ನಡೆಸಲಿ.

ಇಂಥದೊಂದು ಸಮೀಕ್ಷೆ ಆರಂಭಿಸುವ ಮುನ್ನ ಆ್ಯಪ್ ಹಾಗೂ ಪೂರಕ ವ್ಯವಸ್ಥೆಯನ್ನು ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ವ್ಯಾಪಕ ಪರಿಶೀಲನೆಗೆ ಒಳಪಡಿಸಬೇಕಾಗಿತ್ತು. ಸಮೀಕ್ಷೆಯ ಆರಂಭದಲ್ಲಿ ಸಮೀಕ್ಷಕರು ಎದುರಿಸಿರುವ ಗೊಂದಲಗಳನ್ನು ಗಮನಿಸಿದರೆ, ಅವರಿಗೆ ತರಬೇತಿಯ ಕೊರತೆ ಇರುವುದು ಸ್ಪಷ್ಟವಾಗಿ ಕಾಣಿಸುತ್ತಿದೆ. ನೂರಾರು ಕೋಟಿ ರೂ. ವೆಚ್ಚದಲ್ಲಿ ನಡೆಯುವ ಸಮೀಕ್ಷೆಯನ್ನು ಸುರಳೀತವಾಗಿ ಆರಂಭಗೊಳ್ಳುವಂತೆ ಸರ್ಕಾರ ಎಲ್ಲಾ ರೀತಿಯ ಎಚ್ಚರಿಕೆ ವಹಿಸಬೇಕಾಗಿತ್ತು.

ತಾಂತ್ರಿಕ ಅಡಚಣೆಯ ಜೊತೆಗೆ, ಸಮೀಕ್ಷೆಯ ಬಗ್ಗೆ ಸಾರ್ವಜನಿಕರಿಗೆ ಇರುವ ತಿಳಿವಳಿಕೆಯ ಕೊರತೆಯೂ ಗಂಭೀರ ಸಮಸ್ಯೆಯಾಗಿದೆ. ಪುನರಾವರ್ತಿತ ಸ್ಪಷ್ಟೀಕರಣಗಳ ನಡುವೆಯೂ. ಈ ಸಮೀಕ್ಷೆಯನ್ನು ಜಾತಿಗಣತಿ ಎಂದೇ ಹಲವರು ನಂಬಿದ್ದಾರೆ.

ಸಮೀಕ್ಷೆಯು ಒಳಗೊಂಡಿರುವ ಬಹುಮುಖಿ ಉದ್ದೇಶಗಳಲ್ಲಿ ಜಾತಿ ಒಂದು ಉಪ ಉತ್ಪನ್ನವಷ್ಟೇ ಆಗಿದ್ದು, ಸಮುದಾಯಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಯನ್ನು ಗುರ್ತಿಸಿ, ಅರ್ಹರಿಗೆ ಸವಲತ್ತುಗಳನ್ನು ತಲುಪಿಸುವುದು ಸಮೀಕ್ಷೆಯ ಮುಖ್ಯ ಉದ್ದೇಶ ವಾಗಿದೆ. ಆದರೆ, ಈ ಉದ್ದೇಶವನ್ನು ಸಾರ್ವಜನಿಕರಿಗೆ ಮನವರಿಕೆ ಮಾಡುವ ವ್ಯಾಪಕ ಪ್ರಯತ್ನಗಳು ನಡೆದಿಲ್ಲ. ಧರ್ಮದ ಜಾಗದಲ್ಲಿ ಏನನ್ನು ಬರೆಸಬೇಕು ಎನ್ನುವುದರ ಬಗ್ಗೆಯೇ ಲಿಂಗಾಯತ, ಒಕ್ಕಲಿಗ, ಕೊಡವರು ಸೇರಿದಂತೆ ಕೆಲವು ಸಮುದಾಯಗಳಲ್ಲಿ ಗೊಂದಲಗಳಿವೆ. ಇಂಥ ಗೊಂದಲಗಳು ಹಿಂದುಳಿದ ವರ್ಗಗಳಿಗೆ ಸಂಬಂಧಿಸಿದಂತೆಯೂ ಇವೆ. ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಮಧುಸೂದನ್ ಆರ್. ನಾಯಕ್ ಅವರು, ಧರ್ಮವನ್ನು ಒಂದು ಅಂಶವನ್ನಾಗಿ ಪರಿಗಣಿಸುವುದಿಲ್ಲ ಎಂದು ಸ್ಪಷ್ಟೀಕರಣ ನೀಡಿದ ನಂತರವೂ ಗೊಂದಲಗಳು ಮುಂದುವರಿದಿವೆ.

ಸಮೀಕ್ಷೆಯ ಉದ್ದೇಶವನ್ನು ಮನವರಿಕೆ ಮಾಡಿಕೊಡುವ ನಿಟ್ಟಿನಲ್ಲಿ ಆಗಿರುವ ವೈಫಲ್ಯವನ್ನು ಸರ್ಕಾರ ಒಪ್ಪಿಕೊಳ್ಳಬೇಕು. ಶಾಸಕರು ಹಾಗೂ ಸ್ಥಳೀಯ ಮುಖಂಡರಲ್ಲಿ ಸಮೀಕ್ಷೆಯ ಉದ್ದೇಶಗಳ ಬಗ್ಗೆ ಅರಿವು ಮೂಡಿಸುವುದು ಆಗಬೇಕಾಗಿದ್ದ ಮೊದಲ ಕೆಲಸ. ಅದಕ್ಕೆ ಬದಲಾಗಿ, ರಾಜಕೀಯ ಹಿತಾಸಕ್ತಿಗಳು ಜಾತಿಗಳ ನಡುವಿನ ಪೈಪೋಟಿಯ ಸಂಕಥನಗಳು ತಪ್ಪುಗ್ರಹಿಕೆಗಳಿಗೆ ಅಗತ್ಯವಾದ ಭೂಮಿಕೆಯನ್ನು ಸೃಷ್ಟಿಸಿವೆ. ಈ ತಪ್ಪುಗ್ರಹಿಕೆಗಳನ್ನು ನಿವಾರಿಸಲು ಪತ್ರಿಕೆಗಳೂ ಒಳಗೊಂಡಂತೆ ಎಲ್ಲಾ ಮಾಧ್ಯಮಗಳನ್ನು ಆಂದೋಲನದ ರೂಪದಲ್ಲಿ ಸರ್ಕಾರ ಬಳಸಿಕೊಳ್ಳಬೇಕಾಗಿದೆ, ಸಮುದಾಯಗಳನ್ನು ನೇರವಾಗಿ ಸಂಪರ್ಕಿಸಬೇಕಾಗಿದೆ. ಜಯಪ್ರಕಾಶ್ ಹೆಗ್ಡೆ ವರದಿಯನ್ನು ವಿರೋಧಿಸಿದ್ದ ಪ್ರಬಲ ಜಾತಿಗಳು ಈಗಿನ ಸಮೀಕ್ಷೆಯನ್ನೂ ಹಳಿತಪ್ಪಿಸಲು ಪ್ರಯತ್ನಿಸುತ್ತಿವೆ. ಅವರ ಪ್ರತಿಭಟನೆಗಳು ಸಾಂದರ್ಭಿಕವಾಗಿರದೆ. ಸಾಮಾಜಿಕ, ರಾಜಕೀಯ ಪ್ರಾಬಲ್ಯವನ್ನು ಉಳಿಸಿಕೊಳ್ಳುವ ಪ್ರಯತ್ನಗಳಾಗಿವೆ. ಈ ಒತ್ತಡಗಳಿಗೆ ಮಣಿದು, ಅಂಚಿನ ಸಮುದಾಯಗಳ ಹಿತಾಸಕ್ತಿಯನ್ನು ಸರ್ಕಾರ ಬಲಿಕೊಡಬಾರದು.

ಸಮೀಕ್ಷೆಗಾಗಿ ಈಗಾಗಲೇ ದೊಡ್ಡ ಮೊತ್ತದ ಹಣವನ್ನು ಖರ್ಚು ಮಾಡಿರುವ ಸರ್ಕಾರ, ಸಮೀಕ್ಷೆಯ ಕಾಲಮಿತಿಯನ್ನು ವಿಸ್ತರಿಸಬೇಕು. ತಿದ್ದುಪಡಿಗಳಿಗೆ ಅವಕಾಶ ಕಲ್ಪಿಸಬೇಕು ಹಾಗೂ ಇಡೀ ಪ್ರಕ್ರಿಯೆ ವೈಜ್ಞಾನಿಕವಾಗಿ ನಡೆಯುವಂತೆ ನೋಡಿಕೊಳ್ಳಬೇಕು. ಈ ಸಮೀಕ್ಷೆ ಸಾಮಾಜಿಕ ನ್ಯಾಯದ ಉದ್ದೇಶವನ್ನು ಒಳಗೊಂಡಿದೆಯೇ ಹೊರತು ಪ್ರತಿಷ್ಠೆಯನ್ನಲ್ಲ. ತರಾತುರಿಯಲ್ಲಿ ಸಮೀಕ್ಷೆ ನಡೆಸುವುದರ ಬದಲಾಗಿ, ತಪ್ಪುಗಳನ್ನು ಸರಿಪಡಿಸಿಕೊಂಡು ಸ್ಪಷ್ಟತೆ ಮತ್ತು ದಿಟ್ಟತನದಿಂದ ಸರ್ಕಾರ ಮುಂದುವರಿಯಬೇಕಾಗಿದೆ. ಆಗಷ್ಟೇ ಸಮೀಕ್ಷೆಯ ನೈಜ ಉದ್ದೇಶ ಈಡೇರುವುದು ಸಾಧ್ಯ.

# ರಾಮಾಯಣ



## ದೂಷಣನೇ ಮೊದಲಾದ ಹದಿನಾಲ್ಕು ಸಾವಿರ ರಾಕ್ಷಸರ ವಧೆ

• ಹಿಂದಿನ ಸಂಚಿಕೆಯಿಂದ 119 ನೆಯ ಅಧ್ಯಾಯ

ಈ ರೀತಿಯಲ್ಲಿ ಶ್ರೀರಾಮನು ರಾಕ್ಷಸ ಸೇನೆಯ ಮೇಲೆ ಅಂಬುಗಳನ್ನು ಅಪರಿಮಿತವಾಗಿ ಎಸೆಯುತ್ತಿರಲು ಮುರಿದು ಬಿದ್ದ ರಾಕ್ಷಸರಿಂದಲೂ ಬೀಳುತ್ತಿದ್ದವರಿಂದಲೂ ಗಾಯಪಡೆದವರಿಂದಲೂ ಕತ್ತರಿಸಲ್ಪಟ್ಟ ತ್ರಿಶೂಲಪಟ್ಟಿ ಸಾಧಿಗಳೆಂದಲೂ ಹರಹಲ್ಪಟ್ಟು ವಿಸ್ತೀರ್ಣವಾದ ಆ ಸಮರಭೂಮಿಯು ಅತಿಭಯಂಕರವಾಗಿ ತೋರುತ್ತಿತ್ತು.

**ದೂಷಣನೇ ಮೊದಲಾದ ಹದಿನಾಲ್ಕು ಸಾವಿರ ರಾಕ್ಷಸರ ವಧೆ**

ಆಮೇಲೆ ದೂಷಣನು ಶ್ರೀರಾಮನಿಂದ ಕೊಲ್ಲಲ್ಪಟ್ಟ ತನ್ನ ಸೇನೆಯನ್ನು ಕಂಡು ಮನಸ್ಸಿನಲ್ಲಿ ಅತ್ಯಂತ ಖತಿಗೊಂಡು ಮಹಾಬಲಪರಾಕ್ರಮಿಗಳಾಗಿ ಅತ್ಯಂತ ಭಯಂಕರಸ್ವರೂಪರಾದ ರಣರಂಗದಲ್ಲಿ ಹಿಮ್ಮೆಟ್ಟದ 5 ಸಾವಿರ ಮಂದಿ ರಾಕ್ಷಸರನ್ನು ಶ್ರೀರಾಮನ ಮೇಲೆ ಯುದ್ಧಕ್ಕೆ ಕಳುಹಿಸಿದನು. ಆ ರಾಕ್ಷಸರು ತ್ರಿಶೂಲ ಪಟ್ಟನ ಖಡ್ಗ ಕಲ್ಲರೆ ಮರಗಳು ಮೊದಲಾದವನ್ನು ಶ್ರೀರಾಮನ ಮೇಲೆ ಎಸೆಯುತ್ತ ಯುದ್ಧಕ್ಕೆ ಅಟ್ಟಿಬರುತ್ತಿದ್ದರು. ಶ್ರೀರಾಮನು ಆ ರಾಕ್ಷಸರು ಪ್ರಯೋಗಿಸಿದ ಕಲ್ಲು ಮರ ಮೊದಲಾದವನ್ನು ನಿಹಿತವಾದ ಅಂಬುಗಳಿಂದ ತಡದು ಅವರನ್ನು ಕೊಲ್ಲಬೇಕೆಂದು ಅತ್ಯಂತ ಕೋಪಯುಕ್ತನಾಗಿ ಅಗ್ನಿಯಂತೆ ಪ್ರಜ್ವಲಿಸುತ್ತಿರುವ ಕೆಲವು ಬಾಣಗಳನ್ನು ದೂಷಣನ ಸೇನೆಯ ಮೇಲೆ ಪ್ರಯೋಗಿಸಿ ಮುರಿದೋಡಿಸಿದನು. ಅವನ್ನು ಕಂಡು ದೂಷಣನು ಸಿಡಿಲಿಗೆ ಸಮಾನವಾದ ಬಾಣಗಳನ್ನು ಶ್ರೀರಾಮನ ಮೇಲೆ ಪ್ರಯೋಗಿಸಲು ಶ್ರೀರಾಮನು ಒಂದು ಬಾಣದಿಂದ ದೂಷಣನ ಬಿಲ್ಲನ್ನು ಕತ್ತರಿಸಿ ನಾಲ್ಕು ಬಾಣಗಳಿಂದ ಆತನ ರಥಕ್ಕೆ ಕಟ್ಟಿದ್ದ ನಾಲ್ಕು ಕುದುರೆಗಳನ್ನು ಕೆಡಹಿ ಒಂದು ಕವಲಂಬಿನಿಂದ ಸಾರಥಿಯ ಶಿರಸ್ಸನ್ನು ಕತ್ತರಿಸಿ ಮೂರು ಬಾಣಗಳನ್ನು ದೂಷಣನ ಎದೆಗೆ ಹೊಡೆದನು. ದೂಷಣನು ಸಾರಧಿ ಕುದುರೆ ಬಿಲ್ಲು ರಥ ಮೊದಲಾದವೆಲ್ಲವೂ ಲಯವಾಗಲು ಅತ್ಯಂತ ಕೋಪಾಟೋವದಿಂದ ಅತಿಭಯಂಕರವಾದ ಪರಿಘವೆಂಬ ಆಯುಧವನ್ನು ತೆಗೆದುಕೊಂಡು ಶ್ರೀರಾಮನಿಗೆದುರಾಗಿ ನಡೆದನು. ಶ್ರೀರಾಮನು ಎರಡಂಬುಗಳಿಂದ ಆತನ ಭುಜಗಳನ್ನು ಕತ್ತರಿಸಲು, ದೂಷಣನು ಕೋರೆ ಮುರಿದು ಬಿದ್ದ ಮಹಾಗಜದಂತೆ ಇಕ್ಕೆಲದಲ್ಲಿ ಬಿದ್ದಿದ್ದ ತೋಳುಗಳ ಮಧ್ಯದಲ್ಲಿ, ಸ್ವರ್ಗಲೋಕದಿಂದ ಭೂಮಿಯಲ್ಲಿ ಬೀಳುವ ಇಂದ್ರಧ್ವಜದಂತೆ ರಣಭೂಮಿಯಲ್ಲಿ ತತ್ತರಿಸಿ ಬಿದ್ದನು. ಆ ಸಮಯದಲ್ಲಿ ಅಂತರಿಕ್ಷಮಾರ್ಗದಲ್ಲಿ ಆ ಯುದ್ಧವನ್ನು ನೋಡುತ್ತಿದ್ದ ದೇವತೆಗಳು ಶ್ರೀರಾಮನ ಬಾಣಗಳಿಂದ ಗಾಯವಡೆದು ಬಿದ್ದ ದೂಷಣನನ್ನು ಕಂಡು ಶ್ರೀರಾಮನು ಮಹಾ ಶೂರನೆಂದು ಕೊಂಡಾಡುತ್ತಿದ್ದರು. ಆ ಬಳಿಕ ಖರನ ಸೇನಾನಾಯಕರಲ್ಲಿ ಆಯುಸ್ಸಿನ ಮಿತಿ ತುಂಬಿದ ಮಹಾಕಪಾಲನು ತ್ರಿಶೂಲಧಾರಿಯಾಗಿಯೂ ಸ್ಥೂಲಾಕ್ಷನು ವಟ್ಟಸವನ್ನು ಕೈಕೊಂಡೂ ಪ್ರಮಾಥಿಯು ಕೊಡಲಿಯನ್ನು ಕೈಯಲ್ಲಿ ಹಿಡಿದೂ ಶ್ರೀರಾಮನನ್ನು ಎಮರಿಸಿದರು.

**ಮುಂದುವರಿಯುವುದು...**



# ತುಪ್ಪ ಮಾಡಲೆಂದು ತೆಗೆದಿಟ್ಟಿರುವ ಹಾಲಿನ ಕೆನೆ ವಾಸನೆ ಬರ್ತಾ ಇದ್ಯಾ?

ಸಾಮಾನ್ಯವಾಗಿ ತುಪ್ಪ ತಯಾರಿಸಲು 2 ವಾರಗಳವರೆಗಿನ ಹಾಲಿನ ಕೆನೆಯನ್ನಾದರೂ ಶೇಖರಿಸಿಡಬೇಕಾಗುತ್ತದೆ. ಆದರೆ ಹಾಲಿನ ಕೆನೆ ದಿನೇ ದಿನೇ ಹೋದಂತೆ ವಾಸನೆ ಬರಲಾರಂಭಿಸುತ್ತದೆ. ಮನೆಯಲ್ಲಿ ಬೆಣ್ಣೆ, ತುಪ್ಪ ತಯಾರಿಸೋದು ಹೇಗೆ ಎಂದು ಬಹುತೇಕರಿಗೆ ತಿಳಿದಿದೆ. ಇದನ್ನು ತಯಾರಿಸಬೇಕಾದರೆ ಪ್ರತಿದಿನ ಹಾಲಿನ ಕೆನೆಯನ್ನು ಶೇಖರಿಸಿಡಬೇಕು. ಹಾಲಿನ ಕೆನೆ ಒಂದಿಷ್ಟು ಆದ ನಂತರ ಅದರಿಂದ ತುಪ್ಪ ತಯಾರಿಸಲಾಗುತ್ತದೆ. ಆದರೆ ಈ ಹಾಲಿನ ಕೆನೆಯನ್ನು ಶೇಖರಿಸುವ ಪ್ರಕ್ರಿಯೆಯೇ ಬಹುತೇಕರಿಗೆ ಇಷ್ಟವಾಗೋದಿಲ್ಲ. ಯಾಕೆಂದರೆ ಆ ಹಾಲಿನ ಕೆನೆಯನ್ನು ನೀವು ಪ್ರತಿದಿನ ಫ್ರಿಡ್ಜ್‌ನಲ್ಲಿ ಶೇಖರಿಸಿದರೂ ಅದರಿಂದ ಒಂಥರಾ ವಾಸನೆ ಬರಲಾರಂಭಿಸುತ್ತದೆ.

**ಕೆನೆಯ ವಾಸನೆಯನ್ನು ಹೇಗೆ ತೆಗೆದುಹಾಕುವುದು:**

**ಫ್ರೀಜರ್‌ನಲ್ಲಿಡಿ:** ರೆಫ್ರಿಜರೇಟರ್ ಬದಲಿಗೆ ಫ್ರೀಜರ್‌ನಲ್ಲಿ ಕ್ರೀಮ್ ಇಡುವುದರಿಂದ ಅದು ತಾಜಾವಾಗಿರುವುದಲ್ಲದೆ, ಕೆಟ್ಟ ವಾಸನೆ ಬರದಂತೆ ತಡೆಯುತ್ತದೆ.

**ಉಪ್ಪನ್ನು ಸೇರಿಸಬಹುದು:** ಉಪ್ಪು ಸೇರಿಸುವುದರಿಂದ ಕ್ರೀಮ್‌ನಲ್ಲಿರುವ ವಾಸನೆಯನ್ನು ಉಂಟುಮಾಡುವ ಬ್ಯಾಕ್ಟೀರಿಯಾಗಳು ಸಾಯುತ್ತವೆ, ವಾಸನೆಯನ್ನು ಗಮನಾರ್ಹವಾಗಿ ಕಡಿಮೆ ಮಾಡುತ್ತದೆ. ಕ್ರೀಮ್‌ನ ಬಟ್ಟಲಿಗೆ ಅರ್ಧ ಟೀಚಮಚ ಅಥವಾ ಕಡಿಮೆ ಉಪ್ಪನ್ನು ಸೇರಿಸಿ. ಇದು ಪ್ರಯೋಜನಕಾರಿಯಾಗಿದೆ.

**ನಿಂಬೆ ರಸ:** ನೀವು ಕ್ರೀಮ್‌ಗೆ ನಿಂಬೆ ರಸವನ್ನು ಸಹ ಸೇರಿಸಬಹುದು. ನಿಂಬೆ ರಸವನ್ನು ಬಳಸುವುದರಿಂದ ಕ್ರೀಮ್ ತಾಜಾವಾಗಿರುವುದು ಮಾತ್ರವಲ್ಲದೆ ಅದರ ವಾಸನೆಯನ್ನು ಕಡಿಮೆ ಮಾಡುತ್ತದೆ.

**ಹಾಲಿನ ಕೆನೆ ತಾಜಾವಾಗಿಡುವುದು ಹೇಗೆ?** ಹಾಲಿನ ಕೆನೆ ಹಳೆಯದಾಗುತ್ತಾ ಹೋದಂತೆ ವಾಸನೆ ಹೆಚ್ಚು ಬರಲಾರಂಭಿಸುತ್ತದೆ. ಅದರ ಬಲವಾದ ವಾಸನೆಯು ನಾವು ಆ ಕೆನೆಯನ್ನು ಬಳಸದಂತೆ ತಡೆಯುತ್ತದೆ. ಅಂತಹ ಪರಿಸ್ಥಿತಿಯಲ್ಲಿ, ಹಾಲಿನ ಕೆನೆಯನ್ನು ತಾಜಾವಾಗಿಡಲು ಮತ್ತು ಅದರ ವಾಸನೆಯನ್ನು ತೆಗೆದುಹಾಕಲು




ನೀವು ಬಳಸಬಹುದಾದ ಕೆಲವು ವಿಧಾನಗಳಿವೆ.

**ಇವನ್ನೂ ಟ್ರೈ ಮಾಡಿ ನೋಡಿ:** ನೀವು ಕ್ರೀಮ್ ಅನ್ನು ಕುದಿಸುವ ಮೂಲಕ ವಾಸನೆಯನ್ನು ತೆಗೆದುಹಾಕಬಹುದು.

ಈ ಸಂದರ್ಭದಲ್ಲಿ ಮೊದಲು ಕೆನೆಯನ್ನು ಕುದಿಸಿ ನಂತರ ತಣ್ಣಗಾಗಿಸಿ. ತಣ್ಣಗಾದ ನಂತರ, ವಾಸನೆ ಗಮನಾರ್ಹವಾಗಿ ಕಡಿಮೆಯಾಗಿದೆ ಎಂದು ನೀವು ಗಮನಿಸಬಹುದು. ಕ್ರೀಮ್‌ನಿಂದ ವಾಸನೆ ಬರದಂತೆ ಮೊಸರು ತುಂಬಾ ಉಪಯುಕ್ತವಾಗಿದೆ. ಮೊಸರು ಬಳಸುವುದರಿಂದ ಅದು ತಾಜಾವಾಗಿರುತ್ತದೆ. ಇದು ಕ್ರೀಮ್ ಹಾಳಾಗುವುದನ್ನು ತಡೆಯುತ್ತದೆ. ಈ ಸಂದರ್ಭದಲ್ಲಿ, ಕ್ರೀಮ್‌ನೊಂದಿಗೆ ಒಂದು ಚಮಚ ಮೊಸರನ್ನು ಬೆರೆಸಿ ಬಳಸಿ. ಹಾಲು ಕೂಡ ಕ್ರೀಮ್ ಅನ್ನು ತಾಜಾವಾಗಿರಿಸುತ್ತದೆ. ಪ್ರತ್ಯೇಕ ಬಟ್ಟಲಿನಲ್ಲಿ ಸಂಗ್ರಹಿಸುವ ಬದಲು, ಅದರಲ್ಲಿ ಅರ್ಧವನ್ನು ಹಾಲಿನೊಂದಿಗೆ ಇರಿಸಿ. ಇದು ಕ್ರೀಮ್ ಕೆಟ್ಟ ವಾಸನೆ ಬರದಂತೆ ತಡೆಯುತ್ತದೆ.

**ಇವುಗಳನ್ನು ಗಮನದಲ್ಲಿಡಿ:** ತುಂಬಾ ಹಳೆಯದಾದ ಕೆನೆಯನ್ನು ಬಳಸದಿರುವುದು ಒಳ್ಳೆಯದು. ಏಕೆಂದರೆ ಅದು ಆರೋಗ್ಯದ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತದೆ, ಅಹಿತಕರ ರುಚಿಯನ್ನು ಸಹ ಹೊಂದಿರಬಹುದು. ಹೆಚ್ಚುವರಿಯಾಗಿ ಕೆನೆಯನ್ನು ರೆಫ್ರಿಜರೇಟರ್‌ನಲ್ಲಿ ಎಂದಿಗೂ ಮುಚ್ಚದೆ ಸಂಗ್ರಹಿಸಬಾರದು, ಏಕೆಂದರೆ ಒಂದು ದಿನ ಮೊದಲು ತೆಗೆದ ಕೆನೆ ಕೂಡ ವಾಸನೆ ಬರಬಹುದು.

# ಜನಜಾಗೃತಿ ಮೂಡಿಸಲು ಸಾರ್ವಜನಿಕರಿಂದ ಸಹಿ ಸಂಗ್ರಹ




ಉದಯವಾಹಿನಿ ಚಿತ್ರ

• ಉದಯವಾಹಿನಿ, ಜಯನಗರ

ಇಂದಿರಾಗಾಂಧಿ ಸರ್ಕಲ್‌ನಲ್ಲಿ ಚುನಾವಣೆಯಲ್ಲಿ ಮತಕಳ್ಳತನ ಮಾಡಿ ಅಧಿಕಾರ ಬಂದಿರುವ ಬಿಜೆಪಿ ಕೇಂದ್ರ ಸರ್ಕಾರದ ಓಟ್ ಚೋರಿ (ಮತಕಳ್ಳತನ) ವಿರುದ್ದ ಸಹಿ ಸಂಗ್ರಹ ಮತ್ತು ಸಾರ್ವಜನಿಕರಿಗೆ ಜಾಗೃತಿ ಅಭಿಯಾನ ಕಾರ್ಯಕ್ರಮ.

ಕೆಪಿಸಿಸಿ ಮಹಿಳಾ ಕಾಂಗ್ರೆಸ್ ಅಧ್ಯಕ್ಷರಾದ ಸೌಮ್ಯ ರೆಡ್ಡಿರವರು , ಎಐಸಿಸಿ ಕಾರ್ಯದರ್ಶಿಗಳಾದ ಅಭಿಷೇಕ್ ದತ್ತರವರು ಸಹಿ ಹಾಕುವ ಮೂಲಕ, ಜನಜಾಗೃತಿ ಮೂಡಿಸಲು ಸಾರ್ವಜನಿಕರಿಂದ ಸಹಿ ಸಂಗ್ರಹಿಸಲಾಯಿತು. ಸೌಮ್ಯ ರೆಡ್ಡಿರವರು ಮಾತನಾಡಿ ಪ್ರಜಾಪ್ರಭುತ್ವದಲ್ಲಿ ಸಂವಿಧಾನ ಮತದಾನದ ಮಾಡುವ ಹಕ್ಕು ನೀಡಿದೆ, ಮತದಾನ ಹಕ್ಕನ್ನು ವಂಚಿಸುವ ಕೆಲಸವಾಗುತ್ತಿದೆ.

ಚಿಕ್ಕ ಮನೆಯಲ್ಲಿ 80ಕ್ಕೂ ಹೆಚ್ಚು ಮತದಾರರು ಇದ್ದಾರೆ, ಒಬ್ಬ ವ್ಯಕ್ತಿಯ ಹೆಸರು ಹಲವಾರು ಕಡೆಗಳಲ್ಲಿ ಮತಗಟ್ಟೆ ಹೆಸರು ಇರುವುದು. 2023ರಲ್ಲಿ ಜಯನಗರ ವಿಧಾನಸಭಾ ಚುನಾವಣೆಯಲ್ಲಿ ನಡೆದ ಘಟನೆ ಇಡಿ ರಾಜ್ಯಕ್ಕೆಗೊತ್ತಿದ್ದೇ. ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ರವರ ನೇತೃತ್ವದಲ್ಲಿ ದೇಶಾದ್ಯಂತ ಮತಕಳ್ಳತನ ವಿರುದ್ದ ದೊಡ್ಡ ಹೋರಾಟ ಮಾಡಲಾಗುತ್ತಿದೆ. ಪ್ರತಿಯೊಬ್ಬ ಪ್ರಜೆಗೂ ಮತದಾನ ಮಾಡುವ ಹಕ್ಕು ಇದೆ ಇದರ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ.

ಅಭಿಷೇಕ್ ದತ್ತರವರು ಮಾತನಾಡಿ ಬಿಜೆಪಿ ಪಕ್ಷವು ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ ಷಡ್ಯಂತ್ರದಿಂದ ಮತಕಳ್ಳತನ ಮಾಡಿದೆ. ಜನರ ಅಧಿಕಾರವನ್ನು ಕಿತ್ತೂಕೊಳ್ಳುತ್ತಿದ್ದಾರೆ.

ಸಂವಿಧಾನ ಉಳಿಸಲು ಪ್ರಜಾಪ್ರಭುತ್ವ ಉಳಿಸಲು ರಾಹುಲ್ ಗಾಂಧಿ ರವರು ಮತಕಳ್ಳತನ ವಿರುದ್ದ ದೇಶದ್ಯಾಂತ ಹೋರಾಟ ಮಾಡುತ್ತಿದ್ದಾರೆ. ಡಿಲೀಟ್ ಮತ್ತು ಸೇರ್ಪಡೆ ಮತದಾರರ ಪಟ್ಟಿಯನ್ನ ಚುನಾವಣೆ ಆಯೋಗ ನೀಡುತ್ತಿಲ್ಲ ಎಂದು ಹೇಳಿದರು. ಜಯನಗರ ವಿಧಾನಸಭಾ ಕ್ಷೇತ್ರದ ಮುಖಂಡರು, ಕಾರ್ಯಕರ್ತರು ಮತ್ತು ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಭಾಗವಹಿಸಿದ್ದರು.

# ಕೊತ್ತಂಬರಿ ಸೊಪ್ಪಿನಿಂದ ಈ ಅದ್ಭುತ ರುಚಿಯ ಸ್ನ್ಯಾಕ್ ಮಾಡಿ!

ಕೊತ್ತಂಬರಿ ಸೊಪ್ಪನ್ನು ಹಲವಾರು ರೀತಿಯಲ್ಲಿ ಬಳಸಲಾಗುತ್ತದೆ. ಆದರೆ, ಈ ಸೊಪ್ಪಿನಿಂದ ಮಾಡುವ ಒಂದು ವಿಶಿಷ್ಟ, ರುಚಿಕರ ತಿಂಡಿ ಕೊತ್ತಂಬರಿ ವಡಿ. ಮಹಾರಾಷ್ಟ್ರದ ಸಾಂಪ್ರದಾಯಿಕ ಖಾದ್ಯವಾದರೂ, ಇದರ ಅದ್ಭುತ ರುಚಿಯಿಂದಾಗಿ ದೇಶಾದ್ಯಂತ ಜನಪ್ರಿಯತೆ ಗಳಿಸಿದೆ. ಸಂಜೆಯ ಚಹಾದೊಂದಿಗೆ ಅಥವಾ ಊಟಕ್ಕೆ ಸೈಡ್ ಡಿಶ್ ಆಗಿ ಇದು ಉತ್ತಮ ಆಯ್ಕೆಯಾಗಿದೆ. ಈ ಲೇಖನದಲ್ಲಿ ಮನೆಯಲ್ಲಿ ಸುಲಭವಾಗಿ ಕೊತ್ತಂಬರಿ ವಡಿಯ ತಯಾರಿಸುವ ವಿಧಾನವನ್ನು ತಿಳಿಸಲಾಗಿದೆ. ಕೊತ್ತಂಬರಿ ವಡಿಯು ರುಚಿ ಮತ್ತು ವಿನ್ಯಾಸಗಳ ಸಮ್ಮಿಲನವಾಗಿದೆ. ಒಳಗಿನಿಂದ ಮೃದುವಾಗಿದ್ದು, ಹೊರಗಿನಿಂದ ಗರಿಗರಿಯಾಗಿರುತ್ತದೆ. ಕಡಲೆ ಹಿಟ್ಟಿನ ಸಮೃದ್ಧ ರುಚಿಯ ಜೊತೆಗೆ, ತಾಜಾ ಕೊತ್ತಂಬರಿ ಸೊಪ್ಪು, ಶುಂಠಿ-ಬೆಳ್ಳುಳ್ಳಿ, ಹಸಿ ಮೆಣಸಿನಕಾಯಿ ಮತ್ತು ಜೀರಿಗೆಯ ಪರಿಮಳ ಇದರ ರುಚಿಯನ್ನು ಇನ್ನಷ್ಟು ಹೆಚ್ಚಿಸುತ್ತದೆ.

ಇದು ಕೇವಲ ರುಚಿಕರವಾಗಿರುವುದಲ್ಲದೆ, ಕೊತ್ತಂಬರಿ ಸೊಪ್ಪಿನಲ್ಲಿರುವ ವಿಟಮಿನ್‌ಗಳು ಹಾಗೂ ಖನಿಜಗಳು ಮತ್ತು ಕಡಲೆ ಹಿಟ್ಟಿನಲ್ಲಿರುವ ಪ್ರೋಟೀನ್ ಹಾಗೂ ನಾರಿನಂಶದಿಂದಾಗಿ ಆರೋಗ್ಯಕರವೂ ಆಗಿದೆ.

**ರುಚಿಕರ ಕೊತ್ತಂಬರಿ ವಡಿಗೆ ಬೇಕಾದ ಸಾಮಗ್ರಿಗಳು**

- ತಾಜಾ ಕೊತ್ತಂಬರಿ ಸೊಪ್ಪು
- ಕಡಲೆ ಹಿಟ್ಟು (ಬೆಸನ್)
- ಶುಂಠಿ-ಬೆಳ್ಳುಳ್ಳಿ ಪೇಸ್ಟ್
- ಹಸಿ ಮೆಣಸಿನಕಾಯಿ
- ಅರಿಶಿನ ಪುಡಿ
- ಕೆಂಪು ಮೆಣಸಿನ ಪುಡಿ
- ಕೊತ್ತಂಬರಿ ಪುಡಿ
- ಜೀರಿಗೆ ಪುಡಿ
- ಎಳ್ಳು
- ಇಂಗು
- ರುಚಿಗೆ ತಕ್ಕಷ್ಟು ಉಪ್ಪು
- ನಿಂಬೆ ರಸ ,
- ಎಣ್ಣೆ

**ಕೊತ್ತಂಬರಿ ವಡಿ ತಯಾರಿಸುವ ವಿಧಾನ :** ಒಂದು ದೊಡ್ಡ ಬಟ್ಟಲಿನಲ್ಲಿ ಕಡಲೆ ಹಿಟ್ಟು, ಅರಿಶಿನ ಪುಡಿ, ಕೆಂಪು ಮೆಣಸಿನ ಪುಡಿ, ಕೊತ್ತಂಬರಿ ಪುಡಿ, ಜೀರಿಗೆ ಪುಡಿ, ಉಪ್ಪನ್ನು ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿ. ಇದರಿಂದ ಎಲ್ಲಾ ಮಸಾಲೆಗಳು ಸಮನಾಗಿ ಬೆರೆಯುತ್ತವೆ. ಈ ಮಿಶ್ರಣಕ್ಕೆ ಹೆಚ್ಚಿದ ಕೊತ್ತಂಬರಿ ಸೊಪ್ಪು, ಶುಂಠಿ-ಬೆಳ್ಳುಳ್ಳಿ ಪೇಸ್ಟ್, ಹೆಚ್ಚಿದ ಹಸಿ ಮೆಣಸಿನಕಾಯಿ, ಎಳ್ಳು ಮತ್ತು ಇಂಗು ಹಾಕಿ. ಈ ಪದಾರ್ಥಗಳು ವಡಿಗೆ ಉತ್ತಮ ಪರಿಮಳ ನೀಡುತ್ತವೆ. ಮಿಶ್ರಣಕ್ಕೆ ನಿಂಬೆ ರಸ ಮತ್ತು ನೀರನ್ನು ಸ್ವಲ್ಪ ಸ್ವಲ್ಪವಾಗಿ ಸೇರಿಸುತ್ತಾ, ಹಿಟ್ಟನ್ನು ಗಟ್ಟಿಯಾಗಿ ಕಲಸಿ. ಹಿಟ್ಟು ತುಂಬಾ ತೆಳುವಾಗಬಾರದು. ವಡಿಗಳನ್ನು ಮಾಡಲು ಸುಲಭವಾಗುವ ಹದಕ್ಕೆ ಬರಬೇಕು. ಇದು ಕೊತ್ತಂಬರಿ ವಡಿ ತಯಾರಿಸಲು ಸಾಂಪ್ರದಾಯಿಕ ವಿಧಾನ. ಕಲಸಿದ ಹಿಟ್ಟನ್ನು ಉದ್ದನೆಯ ರೋಲ್ ಆಕಾರದಲ್ಲಿ ಮಾಡಿ, ಇಡ್ಲಿ ಪಾತ್ರೆಯಲ್ಲಿ ಸುಮಾರು 15 ರಿಂದ 20 ನಿಮಿಷಗಳ ಕಾಲ ಆವಿಯಲ್ಲಿ ಬೇಯಿಸಿ. ಹೀಗೆ ಮಾಡುವುದರಿಂದ ವಡಿಗಳು ಗಟ್ಟಿಯಾಗಿ ನಂತರ ಕತ್ತರಿಸಲು ಸುಲಭವಾಗುತ್ತವೆ.

ಆವಿಯಲ್ಲಿ ಬೇಯಿಸಿದ ರೋಲ್‌ಗಳನ್ನು ತಣ್ಣಗಾಗಲು ಬಿಟ್ಟು, ನಂತರ ಸಣ್ಣ, ದಪ್ಪ ಚೂರುಗಳಾಗಿ ಕತ್ತರಿಸಿ. 1 ಬಾಣಲೆಯಲ್ಲಿ ಎಣ್ಣೆ ಹಾಕಿ. ಈ ಚೂರುಗಳನ್ನು ಹೊಂಬಣ್ಣಕ್ಕೆ ತಿರುಗುವವರೆಗೆ ಶಾಲೋ ಅಥವಾ ಡೀಪ್ ಫ್ರೈ ಮಾಡಿ.

ವಡಿಗಳು ಗರಿಗರಿಯಾದ ನಂತರ, ಅವುಗಳನ್ನು ಹೆಚ್ಚುವರಿ ಎಣ್ಣೆಯಿಂದ ತೆಗೆದು ಇಮಲಿ ಚಟ್ನಿ ಅಥವಾ ಪುದೀನ ಚಟ್ನಿಯೊಂದಿಗೆ ಬಿಸಿಯಾಗಿ ಸವಿಯಲು ನೀಡಿ. ಕೊತ್ತಂಬರಿ ವಡಿ ಇನ್ನೂ ಗರಿಗರಿಯಾಗಿ ಬರಬೇಕೆಂದರೆ, ಕಡಲೆ ಹಿಟ್ಟಿನ ಜೊತೆ ಒಂದು ಚಮಚ ಅಕ್ಕಿ ಹಿಟ್ಟನ್ನು ಸೇರಿಸಬಹುದು. ತಾಜಾ ಕೊತ್ತಂಬರಿ ಸೊಪ್ಪು ಬಳಸಿದರೆ ರುಚಿ ಮತ್ತು ಪರಿಮಳ ಉತ್ತಮವಾಗಿರುತ್ತದೆ. ಆವಿಯಲ್ಲಿ



ಉದಯವಾಹಿನಿ ಚಿತ್ರ

ಬೇಯಿಸಿದ ರೋಲ್‌ಗಳನ್ನು ಫ್ರಿಜ್‌ನಲ್ಲಿ 3 ರಿಂದ 4 ದಿನಗಳವರೆಗೆ ಇಟ್ಟು, ಬೇಕಾದಾಗ ಫ್ರೈ ಮಾಡಬಹುದು. ಈ ಸುಲಭ ಮತ್ತು ರುಚಿಕರವಾದ ಕೊತ್ತಂಬರಿ ವಡಿ ರೆಸಿಪಿಯನ್ನು ಒಮ್ಮೆ ಮನೆಯಲ್ಲಿ ಟ್ರೈ ಮಾಡಿ. ನಿಮ್ಮ ಕುಟುಂಬದಬರ ಮೆಚ್ಚುಗೆ ಪಡೆಯಿರಿ.

# ಬಾದಾಮಿ ತಿನ್ನುವಾಗ ಸಿಪ್ಪೆ ತೆಗೆಯಬೇಕಾ ಅಥವಾ ಹಾಗೆಯೇ ತಿನ್ನಬೇಕಾ? ಇಲ್ಲಿದೆ ನೋಡಿ ಮಾಹಿತಿ



ನಮ್ಮಲ್ಲಿ ಹೆಚ್ಚಿನವರು ಬಾದಾಮಿ ಬೀಜಗಳನ್ನು ನೀರಿನಲ್ಲಿ ನೆನೆಹಾಕಿ, ಆಬಳಿಕ ಸಿಪ್ಪೆ ತೆಗೆದು ತಿನ್ನುವ ಅಭ್ಯಾಸ ಇಟ್ಟುಕೊಂಡಿರುತ್ತಾರೆ. ಆದರೆ ಈ ಬೀಜಗಳನ್ನು ಸಿಪ್ಪೆ ಸಹಿತ ತಿನ್ನುವ ಅಭ್ಯಾಸ ಮಾಡಿಕೊಂಡರೆ ಆರೋಗ್ಯಕ್ಕೆ ಒಳ್ಳೆಯದು ಎನ್ನುತ್ತಾರೆ ತಜ್ಞರು ನಮಗೆಲ್ಲಾ ಗೊತ್ತೇ ಇರುವ ಹಾಗೆ ಬೆಲೆಯಲ್ಲಿ ಒಣಫಲಗಳು, ತುಂಬಾನೇ ದುಬಾರಿ. ಇದಕ್ಕೆ ಬಾದಾಮಿ ಬೀಜಗಳು ಕೂಡ ಹೊರತಲ್ಲ ಆದರೆ ಬೆಲೆಯಲ್ಲಿ ದುಬಾರಿ ಆದರೂ ಕೂಡ ಆರೋಗ್ಯದ ವಿಚಾರದಲ್ಲಿ ನೋಡುವುದಾದರೆ ಇದರಷ್ಟು ಆರೋಗ್ಯಕಾರಿ ಒಣಫಲ ಮತ್ತೊಂದಿಲ್ಲ ಎಂದು ಹೇಳಬಹುದು. ಹೃದಯದ ವೃದ್ಧಿಗೂ ಈ ಬಾದಾಮಿ ಬೀಜಗಳಿಗೂ ಕೂಡ ನಿಕಟ ಸಂಬಂಧ ಇರುವುದನ್ನು ಸಂಶೋಧನೆಗಳು ಈಗಾಗಲೇ ಸಾಬೀತುಗೊಳಿಸಿವೆ.

ಪ್ರಮುಖ ಈ ಬೀಜಗಳಲ್ಲಿ ಕಂಡುಬರುವ ಅಧಿಕ ಪ್ರಮಾಣದ ಪ್ರೋಟೀನ್, ವಿಟಮಿನ್ ಇ, ಮೆಗ್ನೀಸಿಯಂ ಇತ್ಯಾದಿ ಅಂಶಗಳು ಆರೋಗ್ಯವನ್ನು ವೃದ್ಧಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತದೆ. ಆದರೆ ಇಷ್ಟೆಲ್ಲಾ ಪ್ರಯೋಜನಗಳನ್ನು ಒಳಗೊಂಡಿರುವ ಈ ಬಾದಾಮಿ ಬೀಜಗಳನ್ನು ಸಿಪ್ಪೆ ತೆಗೆದು ಸೇವಿಸಬೇಕಾದ ಅಥವಾ ಸಿಪ್ಪೆ ಸಹಿತ ತಿನ್ನಬೇಕಾ ಎನ್ನುವ ಗೊಂದಲ ಸಾಕಷ್ಟು ಜನರಲ್ಲಿ ಇದೆ.



**ಬಾದಾಮಿ ಬೀಜಗಳನ್ನು ಸಿಪ್ಪೆ ಸಹಿತ ತಿಂದರೆ ಒಳ್ಳೆಯದು:** ಬಾದಾಮಿ ಬೀಜಗಳನ್ನು ಸಿಪ್ಪೆಯೊಂದಿಗೆ ಸವಿಯುವುದು ಯೋಗ್ಯವಲ್ಲ ಎನ್ನುವುದು ಹೆಚ್ಚಿನವರ ವಾದ. ಹೀಗಾಗಿ ನಮ್ಮಲ್ಲಿ ಹೆಚ್ಚಿನವರು ನೆನೆ ಹಾಕಿದ ಬಾದಾಮಿಯನ್ನು ಸಿಪ್ಪೆ ತೆಗೆದುಹಾಕಿ ಸೇವನೆ ಮಾಡುತ್ತಾರೆ ಆದರೆ ಈ ಬಗ್ಗೆ ತಜ್ಞರು ಹೇಳುವ ಪ್ರಕಾರ ಸಿಪ್ಪೆ ತೆಗೆದ ಬಾದಾಮಿಗಿಂತ ಸಿಪ್ಪೆ ಇರುವ ಬಾದಾಮಿ ಆರೋಗ್ಯಕ್ಕೆ ಆರೋಗ್ಯಕ್ಕೆ ಒಳ್ಳೆಯದು ಎಂದು ಸಲಹೆ ನೀಡುತ್ತಾರೆ ಅದರಲ್ಲೂ ಈಗಾಗಲೇ ಹೊಟ್ಟೆಗೆ ಸಂಬಂಧಪಟ್ಟ ಸಮಸ್ಯೆಯಿಂದ ಬಳಲುತ್ತಿರುವವರು ಸಿಪ್ಪೆ ಸಹಿತ ಇರುವ ಬಾದಾಮಿ ಬೀಜಗಳನ್ನು ಸೇವನೆ ಮಾಡುವ ಅಭ್ಯಾಸ ಮಾಡಿಕೊಂಡರೆ, ಆರೋಗ್ಯಕ್ಕೆ ಬಹಳ ಒಳ್ಳೆಯದು ಎಂದು ಸಲಹೆ ನೀಡುತ್ತಾರೆ.

**ಜೀರ್ಣಾಂಗ ವ್ಯವಸ್ಥೆಗೆ**

ಬಾದಾಮಿ ಸಿಪ್ಪೆಗಳು ನಾರಿನ ಅತ್ಯುತ್ತಮ ಮೂಲವಾಗಿದೆ. ನಮ್ಮ ಜೀರ್ಣಾಂಗ ವ್ಯವಸ್ಥೆಗೆ ನಾರು ಅತ್ಯಗತ್ಯ. ಪ್ರಮುಖವಾಗಿ ಈ ನಾರಿನಾಂಶ ಮಲಬದ್ಧತೆ ಯಂತಹ ಆರೋಗ್ಯ ಸಮಸ್ಯೆಗಳನ್ನು ತಡೆಗಟ್ಟಲು ಸಹಾಯ ಮಾಡುತ್ತದೆ, ಹೊಟ್ಟೆಯನ್ನು ಸ್ವಚ್ಛವಾಗಿರಿಸುತ್ತದೆ.

ಆರೋಗ್ಯಕರ ಹೊಟ್ಟೆಯು ನಿಮ್ಮನ್ನು ಅನೇಕ ರೋಗಗಳಿಂದ ರಕ್ಷಿಸುತ್ತದೆ.

**ಆಂಟಿ ಆಕ್ಸಿಡೆಂಟ್ ಗಳಿಂದ ಸಮೃದ್ಧವಾಗಿದೆ**

:ಬಾದಾಮಿ ಬೀಜಗಳ ಸಿಪ್ಪೆಗಳು ಆಂಟಿ ಆಕ್ಸಿಡೆಂಟ್ ಗಳಿಂದ ಸಮೃದ್ಧವಾಗಿವೆ. ಈ ಉತ್ಕರ್ಷಣ ನಿರೋಧಕಗಳು ನಮ್ಮ ದೇಹವನ್ನು ಫ್ರೀ ರ್ಯಾಡಿಕಲ್ಸ್ ನಿಂದ ಎದುರಾಗುವ ಹಾನಿಯಿಂದ ರಕ್ಷಿಸುತ್ತವೆ. ದೇಹದಲ್ಲಿ ಫ್ರೀ ರ್ಯಾಡಿಕಲ್ಸ್ ಗಳು ಹೆಚ್ಚಾದರೆ ಕ್ಯಾನ್ಸರ್ ಮತ್ತು ಹೃದಯ ಕಾಯಿಲೆಯಂತಹ ಅನೇಕ ಗಂಭೀರ ಕಾಯಿಲೆಗಳಿಗೆ ಕಾರಣವಾಗಬಹುದು ಎಂಬುದು ಗಮನಿಸಬೇಕಾದ ಸಂಗತಿ. ಆದ್ದರಿಂದ, ಬಾದಾಮಿ ಸಿಪ್ಪೆಗಳು ಈ ರೋಗಗಳ ವಿರುದ್ಧ ಹೋರಾಡಲು ನಮಗೆ ಶಕ್ತಿಯನ್ನು ನೀಡುತ್ತವೆ.

**ಚರ್ಮ ಮತ್ತು ಕೂದಲಿಗೆ ಪ್ರಯೋಜನಕಾರಿ:** ಬಾದಾಮಿ ಸಿಪ್ಪೆಗಳು ಚರ್ಮ ಮತ್ತು ಕೂದಲಿಗೆ ತುಂಬಾ ಒಳ್ಳೆಯದು ಎಂದು ತಿಳಿದರೆ ನಿಮಗೂ ಆಶ್ಚರ್ಯವಾಗಬಹುದು ಹೌದು ಬಾದಾಮಿ ಬೀಜಗಳಲ್ಲಿ ಕಂಡು ಬರುವ ಪೋಷಕಾಂಶಗಳು, ಚರ್ಮದ ಕಾಂತಿಯನ್ನು ಹೆಚ್ಚಿಸುವುದು ಮಾತ್ರವಲ್ಲದೆ ಕೂದಲನ್ನು ಬಲಪಡಿಸಲು ಸಹಾಯ ಮಾಡುತ್ತದೆ. ಕೆಲವರು ಸ್ಕಬ್‌ಗಳು ಅಥವಾ ಫೇಸ್ ಪ್ಯಾಕ್ ಗಳನ್ನು ತಯಾರಿಸಲು ಸಹ ಬಾದಾಮಿ ಸಿಪ್ಪೆಗಳನ್ನು ಬಳಸುತ್ತಾರೆ.

**ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ:** ಬಾದಾಮಿ ಸಿಪ್ಪೆಗಳು ನಿಮ್ಮ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸಲು ಸಹಾಯ ಮಾಡುತ್ತವೆ. ಅವುಗಳಲ್ಲಿರುವ ಜೀವಸತ್ವಗಳು ಮತ್ತು ಖನಿಜಗಳು ನಿಮ್ಮ ದೇಹವನ್ನು ಅನಾರೋಗ್ಯದ ವಿರುದ್ಧ ಹೋರಾಡಲು ಸಿದ್ಧಪಡಿಸುತ್ತವೆ. ಬಲವಾದ ರೋಗನಿರೋಧಕ ಶಕ್ತಿ ಎಂದರೆ ಕಡಿಮೆ ಕಾಯಿಲೆಗಳು ಮತ್ತು ಆರೋಗ್ಯಕರ ಜೀವನ.

**ಹೇರ್ ಮಾಸ್ಕ್ ಮಾಡಿಕೊಳ್ಳಬಹುದು!**

ಬಾದಾಮಿಯಲ್ಲಿ ಕಂಡುಬರುವ ಪೋಷಕಾಂಶಗಳು ಬಾದಾಮಿ ಸಿಪ್ಪೆಗಳಲ್ಲಿಯೂ ಕಂಡುಬರುತ್ತವೆ. ಅವು ವಿಟಮಿನ್ ಇ ಅನ್ನು ಹೊಂದಿರುತ್ತವೆ, ಇದು ಕೂದಲಿಗೆ ಪ್ರಯೋಜನಕಾರಿಯಾಗಿದೆ. ನೀವು ಅವುಗಳಿಂದ ಹೇರ್ ಮಾಸ್ಕ್ ತಯಾರಿಸ ಬಹುದು. ಬಾದಾಮಿ ಸಿಪ್ಪೆಗಳನ್ನು 1 ಮೊಟ್ಟೆ, 1 ಟೀ ಚಮಚ ತೆಂಗಿನ ಎಣ್ಣೆ ಮತ್ತು 2 ಟೀ ಚಮಚ ಅಲೋವೆರಾ ಜೆಲ್ ನೊಂದಿಗೆ ಬೆರೆಸಿ ಪೇಸ್ಟ್ ಮಾಡಿ. ಈ ಪೇಸ್ಟ್ ಅನ್ನು ನಿಮ್ಮ ಕೂದಲಿಗೆ 30 ನಿಮಿಷಗಳ ಕಾಲ ಹಚ್ಚಿ.



**ತೂಕ ಇಳಿಸಿಕೊಳ್ಳಲು ಸಹಕಾರಿ**

ನಾರಿನಲ್ಲಿ ಸಮೃದ್ಧವಾಗಿರುವ ಬಾದಾಮಿ ಸಿಪ್ಪೆಗಳು ನಿಮ್ಮನ್ನು ಹೆಚ್ಚು ಸಮಯದವರೆಗೆ ಹೊಟ್ಟೆ ತುಂಬಿರುವಂತೆ ಮಾಡುತ್ತದೆ. ಇದು ನಿಮಗೆ ಹೊಟ್ಟೆ ತುಂಬಿದ ಅನುಭವವನ್ನು ನೀಡುತ್ತದೆ ಮತ್ತು ಕಡಿಮೆ ತಿನ್ನಲು ಸಹಾಯ ಮಾಡುತ್ತದೆ, ಇದು ತೂಕ ಇಳಿಸಿಕೊಳ್ಳಲು ಸಹಾಯಕವಾಗಬಹುದು. ಆದ್ದರಿಂದ, ನೀವು ತೂಕ ಇಳಿಸಿಕೊಳ್ಳಲು ಬಯಸಿದರೆ, ಬಾದಾಮಿ ಸಿಪ್ಪೆಗಳನ್ನು ನಿಮ್ಮ ಆಹಾರದಲ್ಲಿ ಸೇರಿಸಿಕೊಳ್ಳಬಹುದು.

# H-1B ವೀಸಾ ಶುಲ್ಕ ಹೆಚ್ಚಳ ಅಮೆರಿಕಕ್ಕೆ ತಿರುಗುಬಾಣ


## ವಿದೇಶಿ ಕಾರ್ಮಿಕರನ್ನು ಕಳೆದುಕೊಳ್ಳುವ ಭೀತಿಯಲ್ಲಿ ದಿನದೂಡುತ್ತಿವೆ ಯುಎಸ್ ಸಿಲಿಕಾನ್ ವ್ಯಾಲಿ

**H-1B ವೀಸಾ ನಿಯಮ ಬದಲಾವಣೆ ಅಮೆರಿಕಕ್ಕೆ ತಿರುಗುಬಾಣ**

**ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಮೊಂಡು ನಿರ್ಧಾರಗಳು ಹೇಗೆ ಅಮೆರಿಕನ್ನರನ್ನು ಆತಂಕಕ್ಕೆ ದೂಡುತ್ತವೆ ಎಂಬುದಕ್ಕೆ, ಅವರ H-1B ವೀಸಾ ನಿಯಮ ಬದಲಾವಣೆ ನಿರ್ಧಾರ ಸಾಕ್ಷಿಯಾಗಿದೆ. H-1Bವೀಸಾ ಅರ್ಜಿ ಶುಲ್ಕ ಹೆಚ್ಚಿಸಿರುವ ಟ್ರಂಪ್, ಇದರಿಂದ ಸಿಲಿಕಾನ್ ವ್ಯಾಲಿಯನ್ನು ತೀವ್ರ ಆತಂಕಕ್ಕೆ ದೂಡಿದ್ದಾರೆ. ಸಿಲಿಕಾನ್ ವ್ಯಾಲಿಯ ಆತಂಕಗಳಿಗೆ ಧ್ವನಿಯಾಗಿರುವ ಅಮೆರಿಕದ ಬಿಲಿಯನೇರ್ ಮತ್ತು ಹೂಡಿಕೆದಾರ ಮೈಕೆಲ್ ಮೊರಿಟ್ಜ್, H-1B ವೀಸಾ ನಿಯಮ ಬದಲಾವಣೆ ಅಮೆರಿಕಕ್ಕೆ ತಿರುಗುಬಾಣವಾಗಲಿದೆ ಎಂದು ಎಚ್ಚರಿಸಿದ್ದಾರೆ.**




**ವಾಷಿಂಗ್ಟನ್:** H-1B ವೀಸಾ ಅರ್ಜಿ ಶುಲ್ಕ ಹೆಚ್ಚಳ ಮಾಡುವ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ನಿರ್ಧಾರದ ವಿರುದ್ಧ, ಅಮೆರಿಕದಲ್ಲೇ ತೀವ್ರ ಆಕ್ಷೇಪ ವ್ಯಕ್ತವಾಗುತ್ತಿದೆ. ಈ ಕುರಿತು ಅನೇಕ ಹೂಡಿಕೆದಾರರು ಮತ್ತು ಬಿಲಿಯನೇರ್‌ಗಳು ಟ್ರಂಪ್ ಆಡಳಿತಕ್ಕೆ ಎಚ್ಚರಿಕೆ ನೀಡಲಾರಂಭಿಸಿದ್ದಾರೆ. ಈ ಕುರಿತು ಮಾತನಾಡಿರುವ ಅಮೆರಿಕದ ಖ್ಯಾತ ಬಿಲಿಯನೇರ್ ಮತ್ತು ಸಿಲಿಕಾನ್ ವ್ಯಾಲಿ ಹೂಡಿಕೆದಾರ ಮೈಕೆಲ್ ಮೊರಿಟ್ಜ್, H-1B ವೀಸಾ ಅರ್ಜಿಗಳ ಶುಲ್ಕವನ್ನು 1 ಲಕ್ಷ ಅಮೆರಿಕನ್ ಡಾಲರ್‌ಗೆ ಏರಿಕೆ ಮಾಡಿರುವುದು ತಪ್ಪು ನಿರ್ಧಾರ ಎಂದು ಅಭಿಪ್ರಾಯಪಟ್ಟಿದ್ದಾರೆ. H-1B ವೀಸಾ ವಿವಾದವನ್ನು ಅನಗತ್ಯ ಎಂದು ಕರೆದಿರುವ ಮೈಕೆಲ್ ಮೊರಿಟ್ಜ್, ಇದು ಖಂಡಿತವಾಗಿಯೂ ಅಮೆರಿಕಕ್ಕೆ ತಿರುಗುಬಾಣವಾಗಿ ಪರಿಣಮಿಸಲಿದೆ ಎಂದು ಹೇಳಿದ್ದಾರೆ. ಈ ನೀತಿ ಅಮೆರಿಕದ ಆರ್ಥಿಕತೆಗೆ ಭಾರೀ ಪೆಟ್ಟು ನೀಡಲಿದೆ ಎಂದೂ ಮೊರಿಟ್ಜ್ ಅವರು ಟ್ರಂಪ್ ಆಡಳಿತವನ್ನು ಎಚ್ಚರಿಸಿದ್ದಾರೆ.



**ಮೊರಿಟ್ಜ್ ಆತಂಕಕ್ಕೆ ಕಾರಣಗಳೇನು?:** H-1Bವೀಸಾ ಅರ್ಜಿಗಳ ಶುಲ್ಕವನ್ನು ಏರಿಸಿರುವುದು, ಅಮೆರಿಕದ ತಂತ್ರಜ್ಞಾನದ ಯಶಸ್ಸಿಗೆ ಕಾರಣವಾಗುವ ಅಂಶಗಳ ಬಗ್ಗೆ ಟ್ರಂಪ್ ಆಡಳಿತದ ಮೂಲಭೂತ ತಪ್ಪುಗ್ರಹಿಕೆಗೆ ಸಾಕ್ಷಿಯಾಗಿದೆ.

ದೇಶದ ಐಟಿ ಕ್ಷೇತ್ರದ ಬೆಳವಣಿಗೆಗೆ ವಿದೇಶಿ ಕಾರ್ಮಿಕರ ಅವಶ್ಯಕತೆ ಇದೆ. ಸಿಲಿಕಾನ್ ವ್ಯಾಲಿಯ ಭವಿಷ್ಯ ಇದೇ ಕೌಶಲ್ಯಪೂರ್ಣ ವಿದೇಶಿ ಕಾರ್ಮಿಕರ ಮೇಲೆ ನಿಂತಿದೆ ಎಂದು ಮೈಕೆಲ್ ಮೊರಿಟ್ಜ್ ಹೇಳಿದ್ದಾರೆ. ಮುಂದುವರೆದು, ವಿದೇಶಿ ಕಾರ್ಮಿಕರನ್ನು ದೂರ ತಳ್ಳಿ ದೇಶೀಯ ಕಾರ್ಮಿಕರ ಭರವಸೆಯ ಮೇಲೆ ಸಿಲಿಕಾನ್ ವ್ಯಾಲಿಯನ್ನು ನಡೆಸುವುದು ಸಾಧ್ಯವಿಲ್ಲ. ದೇಶದ ಐಟಿ ಕ್ಷೇತ್ರವನ್ನು ಕಾಪಾಡುವ ಕೌಶಲ್ಯಪೂರ್ಣ ಮಾನವ ಸಂಪನ್ಮೂಲ ನಮ್ಮಲ್ಲಿ ಇದೆಯೇ ಎಂಬ ಪ್ರಶ್ನೆಯನ್ನು ನಾವು ಮೊದಲು ಕೇಳಿಕೊಳ್ಳಬೇಕು ಎಂದು ಮೈಕೆಲ್ ಮೊರಿಟ್ಜ್ ಅವರು ಟ್ರಂಪ್ ಆಡಳಿತವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

**ಅನ್ಯ ದೇಶಗಳಿಗೆ ಅವಕಾಶ**

**ಇಷ್ಟೇ ಅಲ್ಲದೇ H-1Bವೀಸಾ ಅರ್ಜಿ ಶುಲ್ಕ ಹೆಚ್ಚಳ ಮಾಡಿರುವುದರಿಂದ, ವಿದೇಶಿ ಕೌಶಲ್ಯವು ಅನ್ಯ ದೇಶಗಳಿಗೆ ವಲಸೆ ಹೋಗಬಹುದು ಎಂದು ಹೂಡಿಕೆದಾರ ಮೈಕೆಲ್ ಮೊರಿಟ್ಜ್ ಆತಂಕ ವ್ಯಕ್ತಪಡಿಸಿದ್ದಾರೆ. ಭಾರತದದಿಂದ ಅಮೆರಿಕಕ್ಕೆ ಬರುತ್ತಿದ್ದ ಕೌಶಲ್ಯಪೂರ್ಣ ವಿದೇಶಿ ಕಾರ್ಮಿಕರನ್ನು ಬೇರೆ ದೇಶಗಳು ಸೆಳೆಯಲಿವೆ ಎಂದು ಮೊರಿಟ್ಜ್ ಹೇಳಿದ್ದು, ಇದು ಅಮೆರಿಕದ ಐಟಿ ಕ್ಷೇತ್ರವನ್ನು ಬರಡಾಗಿಸಲಿದೆ ಎಂದು ಎಚ್ಚರಿಸಿದ್ದಾರೆ.**

ಅಮೆರಿಕದ ತಂತ್ರಜ್ಞಾನ ವಲಯ ಹೇಗೆ ಕಾರ್ಯನಿರ್ವಹಿಸುತ್ತಿದೆ ಎಂಬುದರ ಸ್ಪಷ್ಟ ಅರಿವು ಟ್ರಂಪ್ ಆಡಳಿತಕ್ಕೆ ಇದ್ದಂತಿಲ್ಲ ಎಂದಿರುವ ಮೈಕೆಲ್ ಮೊರಿಟ್ಜ್, ವಿದೇಶಿ ಕಾರ್ಮಿಕರನ್ನು ಹೊರಹಾಕಿದರೆ, ಸಿಲಿಕಾನ್ ವ್ಯಾಲಿಯ ಬೆಳವಣಿಗೆ ಕುಂಠಿತಗೊಳ್ಳುತ್ತದೆ. ಇದು ಅಂತಿಮವಾಗಿ ಅಮೆರಿಕದ ಆರ್ಥಿಕತೆಗೆ ಭಾರೀ ಪೆಟ್ಟು ನೀಡುತ್ತದೆ ಎಂದು ಅಮೆರಿಕದ ಖ್ಯಾತ ಬಿಲಿಯನೇರ್ ಎಚ್ಚರಿಕೆ ನೀಡಿದ್ದಾರೆ.

**ಆತಂಕದಲ್ಲಿದೆ ಸಿಲಿಕಾನ್ ವ್ಯಾಲಿ:** H-1B ವೀಸಾ ನಿಯಮ ಬದಲಾವಣೆಯಿಂದಾಗಿ ಅಮೆರಿಕದ ಸಿಲಿಕಾನ್ ವ್ಯಾಲಿ ಆತಂಕ ಮತ್ತಷ್ಟು ಹೆಚ್ಚಾಗಿದೆ. ತನ್ನ ಕೌಶಲ್ಯಪೂರ್ಣ ವಿದೇಶಿ ಕಾರ್ಮಿಕರನ್ನು ಕಳೆದುಕೊಳ್ಳುವ ಭೀತಿಯಲ್ಲಿರುವ ಯುಎಸ್ ಕಂಪನಿಗಳು, ತಮ್ಮ ಕಾರ್ಯಾಚರಣೆ ಪ್ರಕ್ರಿಯೆ ಮೇಲೆ ಇದರಿಂದ ಬೀರಬಹುದಾದ ಪರಿಣಾಮಗಳ ಬಗ್ಗೆ ಚಿಂತಿಸುತ್ತಿದೆ. ಗೂಗಲ್, ಪೇಪಾಲ್, ಲಿಂಕ್ಡ್ ಇನ್ ಮತ್ತು ಯೂಟ್ಯೂಬ್‌ನಂತಹ ಕಂಪನಿಗಳಲ್ಲಿ ಆರಂಭಿಕ ಹಂತದಲ್ಲಿ ಹೂಡಿಕೆ ಮಾಡುವ ಮೂಲಕ ಖ್ಯಾತಿ ಗಳಿಸಿದ್ದ ಮೈಕೆಲ್ ಮೊರಿಟ್ಜ್, ಯುಎಸ್ ಕಂಪನಿಗಳು ಅಮೆರಿಕನ್ ಕಾರ್ಮಿಕರನ್ನು ಅಗ್ಗದ ವಿದೇಶಿ ಕಾರ್ಮಿಕರೊಂದಿಗೆ ಬದಲಾಯಿಸಲು H-1B ಕಾರ್ಯಕ್ರಮವನ್ನು ದುರುಪಯೋಗಪಡಿಸಿಕೊಳ್ಳುತ್ತವೆ ಎಂಬ ಟ್ರಂಪ್ ಆಡಳಿತದ ವಾದವನ್ನು ತಳ್ಳಿ ಹಾಕಿದ್ದಾರೆ. ಯುಎಸ್ ಕಂಪನಿಗಳು ವೆಚ್ಚ ಉಳಿತಾಯಕ್ಕಾಗಿ ವಿದೇಶಿ ಕಾರ್ಮಿಕರನ್ನು ನೇಮಿಸಿಕೊಳ್ಳುವುದಿಲ್ಲ. ಬದಲಿಗೆ ಅವರ ಕೌಶಲ್ಯವನ್ನು ನೋಡಿ ಅವರಿಗೆ ಉದ್ಯೋಗ ನೀಡುತ್ತವೆ. ಈ ಮೂಲಭುತ ಅಂಶವನ್ನು ಟ್ರಂಪ್ ಆಡಳಿತ ಉದ್ದೇಶಪೂರ್ವಕವಾಗಿ ಮರೆಯುತ್ತಿದೆ ಎಂದು ಮೈಕೆಲ್ ಮೊರಿಟ್ಜ್ ತೀವ್ರ ಅಸಮಾಧಾನ ವ್ಯಕ್ತಪಡಸಿದ್ದಾರೆ.

# ಪೆಹಲ್ಗಾಮ್ ದಾಳಿಯ ಉಗ್ರರಿಗೆ ಸಹಾಯ ಮಾಡಿದ್ದ ವ್ಯಕ್ತಿ ಅರೆಸ್ಟ್

**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದಲ್ಲಿ ಕಳೆದ ಏಪ್ರಿಲ್ 22 ರಂದು ಪೆಹಲ್ಗಾಮ್ ಭಯೋತ್ಪಾದಕ ದಾಳಿಯ ಉಗ್ರರಿಗೆ ಸಹಾಯ ಮಾಡಿದ್ದ ಜಮ್ಮು ಮತ್ತು ಕಾಶ್ಮೀರದ ವ್ಯಕ್ತಿಯನ್ನು ಪೊಲೀಸರು ಬಂಧಿಸಿದ್ದಾರೆ. ಬಂಧಿತನನ್ನು 26 ವರ್ಷದ ಮೊಹಮದ್ ಯೂಸುಫ್ ಕಟಾರಿ ಎಂದು ಗುರುತಿಸಲಾಗಿದೆ. ಗುಪ್ತಚರ ಮಾಹಿತಿ ಮೇರೆಗೆ ದಕ್ಷಿಣ ಕಾಶೀರದ ಕುಲ್ಗಾಮ್ ಜಿಲ್ಲೆಯಲ್ಲಿ ಕಟಾರಿಯನ್ನು ಬಂಧಿಸಲಾಗಿದ್ದು, ವಿಚಾರಣೆ ವೇಳೆ ಜಮು-ಕಾಶೀರದ ಪೊಲೀಸರು ಕಟಾರಿ ಬಗ್ಗೆ ಹಲವು ರಹಸ್ಯಗಳನ್ನು ಬಯಲಿಗೆಳೆದಿದ್ದಾರೆ.




**ಯೂಸೂಫ್ ಕಟಾರಿ ಯಾರು?:** ಕುಲ್ಗಾಮ್ ಜಿಲ್ಲೆಯಲ್ಲಿ ಕಾರ್ಮಿಕನಾಗಿ ಕೆಲಸ ಮಾಡುತ್ತಿದ್ದ ಕಟಾರಿ, ಶಿಕ್ಷಕನಾಗಿಯೂ ಕೆಲಸ ಮಾಡ್ತಿದ್ದ. ಈತ ಪಾಕಿಸ್ತಾನದ ಲಷ್ಕರ್ ಎ ತೊಯ್ಬಾ ಭಯೋತ್ಪಾದಕ ಗುಂಪಿನೊಂದಿಗೆ ಸಂಪರ್ಕದಲ್ಲಿದ್ದ. ಏಪ್ರಿಲ್ 22ರಂದು ನಡೆದ ಪೆಹಲ್ಗಾಮ್ ದಾಳಿಯಲ್ಲಿ ಭಾಗಿಯಾಗಿದ್ದ ಉಗ್ರರಿಗೆ ಎಲ್ಲಾ ರೀತಿಯ ಸಹಾಯ ಮಾಡಿದ್ದ ಎನ್ನುವುದು ಗೊತ್ತಾಗಿದೆ. ಪೆಹಲ್ಗಾಮ್ ಉಗ್ರರನ್ನು ಕೆಲ ದಿನಗಳ ಹಿಂದೆ ನಡೆದ ಆಪರೇಷನ್ ಮಹಾದೇವ್ ಕಾರ್ಯಾಚರಣೆಯಲ್ಲಿ ಚಿನಾರ್ ಕಾರ್ಪ್ಸ್ ಬೆಟಾಲಿಯನ್ ಹತ್ಯೆಗೈದಿತ್ತು. ಆ ಬಳಿಕ ಉಗ್ರರಿಗೆ ಸೇರಿದ್ದ ಉಪಕರಣಗಳನ್ನು ವಶಪಡಿಸಿಕೊಳ್ಳಲಾಗಿತ್ತು. ಇದೆಲ್ಲದರ ವಿಶ್ಲೇಷಣೆಯ ಬಳಿಕ ಕಟಾರಿಯನ್ನು ಬಂಧಿಸಲಾಗಿದೆ. ಮೇ 22ರಿಂದ 2-3 ವಾರಗಳ ಕಾಲ ಸತತವಾಗಿ ಆಪರೇಷನ್ ಮಹಾದೇವ್ ಕಾರ್ಯಾಚರಣೆ ನಡೆಸಲಾಯಿತು. ಈ ವೇಳೆ ಶ್ರೀನಗರ ಬಳಿಯ ದಚಿಗಮ್ ಅರಣ್ಯ ಪ್ರದೇಶದಲ್ಲಿ ಉಗ್ರರನ್ನು ಹತ್ಯೆಗೈಯಲಾಗಿತ್ತು. ಪೆಹಲ್ಗಾಮ್ ದಾಳಿಯ ಮಾಸ್ಟರ್ ಮೈಂಡ್ ಸೇರಿ ಮೂವರು ಭಯೋತ್ಪಾದಕರು ಕಾರ್ಯಾಚರಣೆಯಲ್ಲಿ ಹತ್ಯೆಯಾಗಿದ್ದರು. ಹತ್ಯೆಗೀಡಾದ ಉಗ್ರರ ಬಳಿಯಿದ್ದ ಎಕೆ-47 ರೈಫಲ್, ಎಂ -9 ಅಸಾಲ್ಟ್ ರೈಫಲ್‌ಗಳನ್ನು ವಶಪಡಿಸಿಕೊಳ್ಳಲಾಗಿತ್ತು.

# ಲೈಂಗಿಕ ಅಪರಾಧಿಯ ಕತ್ತು ಸೀಳಿದ ಭಾರತೀಯ ಯುವಕ

**ಕ್ಯಾಲಿಫೋರ್ನಿಯಾ:** ಇಲ್ಲಿನ ಫ್ರೀಮಾಂಟ್‌ನಲ್ಲಿ ಲೈಂಗಿಕ ಅಪರಾಧಿಯೋರ್ವನನ್ನು ಚಾಕುವಿನಿಂದ ಇರಿದು ಕೊಲೆ ಮಾಡಿದ ಆರೋಪದ ಮೇಲೆ, ಭಾರತೀಯ ಮೂಲದ ವರುಣ್ ಸುರೇಶ್ ಎಂಬ ಯುವಕನನ್ನು ಪೊಲೀಸರು ಬಂಧಿಸಿದ್ದಾರೆ. 29 ವರ್ಷದ ವರುಣ್ ಸುರೇಶ್, 71 ವರ್ಷದ ಲೈಂಗಿಕ ಅಪರಾಧಿ ಡೇವಿಡ್ ಬ್ರಿಮ್ಮರ್‌ನನ್ನು ಅಟ್ಟಿಸಿಕೊಂಡು ಹೋಗಿ ಕೊಲೆ ಮಾಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಬಂಧಿತ ವರುಣ್ ಸುರೇಶ್‌ನಿಂದ ಹತ್ಯೆಗೆ ಬಳಸಿದ ಚಾಕುವನ್ನು ಪೊಲೀಸರು ವಶಪಡಿಸಿಕೊಂಡಿದ್ದು, ಅವರ ವಿರುದ್ಧ ಗುರಿಯಾಗಿಸಿಕೊಂಡ ದಾಳಿಯ ಆರೋಪಗಳನ್ನು ಹೊರಿಸಲಾಗಿದೆ. ಹತ್ಯೆಗೀಡಾದ ಡೇವಿಡ್ ಬ್ರಿಮ್ಮರ್ ಅಪ್ರಾಪ್ತ ವಯಸ್ಕರಿಗೆ ಲೈಂಗಿಕ ಕಿರುಕುಳ ನೀಡಿದ ಗಂಭೀರ ಆರೋಪಗಳಲ್ಲಿ ಅಪರಾಧಿ ಎಂದು ಸಾಬೀತಾಗಿದ್ದ. ದಾಳಿಯಲ್ಲಿ ಗಾಯಗೊಂಡ ಬ್ರಿಮ್ಮರ್‌ನನ್ನು ಆಸ್ಪತ್ರೆಗೆ ಸಾಗಿಸಲಾಯಿತಾದರೂ, ಚಿಕಿತ್ಸೆ ಫಲಕಾರಿಯಾಗದೇ ಆತ ಸಾವನ್ನಪ್ಪಿದ್ದಾನೆ ಎಂದು ಸ್ಥಳೀಯ ಮಾಧ್ಯಮ ಇಂಡಿಪೆಂಡೆಂಟ್ ವರದಿ ಮಾಡಿದೆ.

ನ್ಯಾಯಾಲಯದ ದಾಖಲೆಗಳ ಪ್ರಕಾರ, ವರುಣ್ ಸುರೇಶ್ ಪೊಲೀಸರ ಮುಂದೆ ಕೊಲೆ ಮಾಡಿದ್ದಾಗಿ ಒಪ್ಪಿಕೊಂಡಿದ್ದಾನೆ. ಈ ಲೈಂಗಿಕ ಅಪರಾಧಿಯನ್ನು ಕೊಲ್ಲಲು ತಾನು ಬಹಳ ದಿನಗಳಿಂದ ಬಯಸಿದ್ದೆ. ಆತ ಮಕ್ಕಳನ್ನು ನೋಯಿಸುತ್ತಿದ್ದ. ಆತ ಬದುಕಲು ಯೋಗ್ಯವಲ್ಲದ ವ್ಯಕ್ತಿ ಆಗಿದ್ದ ಎಂದು ವರುಣ್ ಸುರೇಶ್ ಪೊಲೀಸರ ಮುಂದೆ ಹೇಳಿಕೆ ನೀಡಿದ್ದಾನೆ. ಇತ್ತೀಚಿಗೆ ಕ್ಯಾಲಿಫೋರ್ನಿಯಾದ ಸಾಂತಾ ಕ್ಲಾರಾದಲ್ಲಿ ಪೊಲೀಸರು ತೆಲಂಗಾಣ ಮೂಲದ ಯುವಕ ಮೊಹಮ್ಮದ್ ನಿಜಾಮುದ್ದೀನ್ ಎನ್‌ಕೌಂಟರ್ ಮಾಡಿದ್ದನ್ನು ಇಲ್ಲಿ ಸ್ಮರಿಸಬಹುದು.



1995ರಲ್ಲಿ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯಕ್ಕಾಗಿ ಒಂಬತ್ತು ವರ್ಷಗಳ ಜೈಲು ಶಿಕ್ಷೆ ಅನುಭವಿಸಿದ್ದ ಡೇವಿಡ್ ಬ್ರಿಮ್ಮರ್, ಜೈಲಿನಿಂದ ಬಿಡುಗಡೆಯಾದ ಮೇಲೂ ಮಕ್ಕಳ ಮೇಲೆ ದೌರ್ಜನ್ಯ ಎಸಗುತ್ತಿದ್ದ ಎನ್ನಲಾಗಿದೆ. ವರುಣ್ ಸುರೇಶ್ ಕ್ಯಾಲಿಫೋರ್ನಿಯಾದ ಮೇಗನ್ ಕಾನೂನು ಡೇಟಾಬೇಸ್ ಬಳಸಿ ಈತನ ಮಾಹಿತಿ ಪಡೆದಿದ್ದು, ಆತನ ಇರುವಿಕೆಯನ್ನು ಪತ್ತೆಮಾಡಿ ಅಟ್ಟಿಸಿಕೊಂಡು ಹೋಗಿ ಕೊಲೆ ಮಾಡಿದ್ದಾನೆ ಎಂದು ತನಿಖಾಧಿಕಾರಿಗಳು ಮಾಹಿತಿ ನೀಡಿದ್ದಾರೆ. ಇದಕ್ಕೂ ಮೊದಲು ಬ್ರಿಮ್ಮರ್ ಮತ್ತು ವರುಣ್ ಸುರೇಶ್ ನಡುವೆ ಯಾವುದೇ ಪರಿಚಯವಿರಲಿಲ್ಲ ಎಂದೂ ಪೊಲೀಸರು ಸ್ಪಷ್ಟಪಡಿಸಿದ್ದಾರೆ.

**ವರುಣ್ ಸುರೇಶ್ ಡೇವಿಡ್ ಬ್ರಿಮ್ಮರ್‌ನ ಗಂಟಲು ಕತ್ತರಿಸುತ್ತಿರುವುದನ್ನು ನೋಡಿದ ಸ್ಥಳೀಯರು, ಕೂಡಲೇ 911 ಕರೆ ಮಾಡಿ ಪೊಲೀಸರಿಗೆ ವಿಷಯ ತಿಳಿಸಿದ್ದಾರೆ. ಕೂಡಲೇ ಸ್ಥಳಕ್ಕೆ ಧಾವಿಸಿದ ಪೊಲೀಸರು ವರುಣ್ ಸುರೇಶ್‌ನನ್ನು ಬಂಧಿಸಿದ್ದಾರೆ. ಈ ವೇಳೆ ಅಮೆರಿಕವು ಮಹಿಳೆಯರಿಗೆ ಮತ್ತು ಮಕ್ಕಳಿಗೆ ಸುರಕ್ಷಿತವಾಗಿರಬೇಕು ಎಂಬ ಕಾರಣಕ್ಕೆ ಡೇವಿಡ್ ಬ್ರಿಮ್ಮರ್‌ನಂತಹ ಕ್ರೂರ ವ್ಯಕ್ತಿಯನ್ನು ಕೊಂದಿದ್ದೇನೆ. ಈ ಕೊಲೆ ಮಾಡಿದ್ದಕ್ಕೆ ನನಗೆ ಯಾವುದೇ ಪಶ್ಚಾತಾಪವಿಲ್ಲ ಎಂದು ವರುಣ್ ಸುರೇಶ್ ಹೇಳಿದ್ದಾನೆ.**

ಬ್ರಿಮ್ಮರ್‌ನನ್ನು ಕೊಲೆ ಮಾಡಲು ನಿರ್ಧರಿಸಿದ ವರುಣ್ ಸುರೇಶ್, ಪ್ರಮಾಣೀಕೃತ ಸಾರ್ವಜನಿಕ ಲೆಕ್ಕಪತ್ರಗಾರ ಸಿಬ್ಬಂದಿಯಂತೆ ನಟಿಸಿ ಆತನ ಮನೆಗೆ ಬಂದಿದ್ದಾನೆ. ಆತ ಬಾಗಿಲು ತೆರೆಯುತ್ತಿದ್ದಂತೇ ಆತನ ಕೈಕುಲುಕುವಂತೆ ನಟಿಸಿ, ಆತನ ಮೇಲೆ ಚಾಕುವಿನಿಂದ ಹಲ್ಲೆ ಮಾಡಿದ್ದಾನೆ. ಕೂಡಲೇ ಜೀವ ಉಳಿಸಿಕೊಳ್ಳಲು ಬ್ರಿಮ್ಮರ್ ಬೀದಿಗೆ ಓಡಿದ್ದಾನೆ. ಆದರೆ ಆತನನ್ನು ಅಟ್ಟಿಸಿಕೊಂಡು ಬಂದ ವರುಣ್ ಸುರೇಶ್, ಚಾಕುವಿನಿಂದ ಹಲವು ಬಾರಿ ಇರಿದು ಆತನ ಕೊಲೆ ಮಾಡಿದ್ದಾನೆ.

# ಪ್ಯಾಲೆಸ್ತಾನ್ ವಿಷಯದಲ್ಲಿ ಭಾರತ ನಾಯಕತ್ವ ಪ್ರದರ್ಶಿಸಬೇಕು

**ನವದೆಹಲಿ:** ಪ್ಯಾಲೆಸ್ತಾನ್ ವಿಷಯದಲ್ಲಿ ಭಾರತ ನಾಯಕತ್ವವನ್ನು ಪ್ರದರ್ಶಿಸುವ ಅಗತ್ಯವಿದೆ ಎಂದು ಪ್ರತಿಪಾದಿಸಿದ ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿ ಅವರು ಮೋದಿ ಸರ್ಕಾರದ ನಿಲುವನ್ನು ಟೀಕಿಸಿದ್ದಾರೆ. ಸರ್ಕಾರದ ಕ್ರಮಗಳು ಪ್ರಧಾನ ಮಂತ್ರಿ ನರೇಂದ್ರ ಮೋದಿ ಮತ್ತು ಅವರ ಇಸ್ರೇಲ್ ಪ್ರತಿರೂಪ ಬೆಂಜಮಿನ್ ನೆತನ್ಯಾಹು ನಡುವಿನ ವೈಯಕ್ತಿಕ ಸ್ನೇಹದಿಂದ ಮತ್ತು ಭಾರತದ ಸಾಂವಿಧಾನಿಕ ಮೌಲ್ಯಗಳು ಅಥವಾ ಅದರ ಕಾರ್ಯತಂತ್ರದ ಹಿತಾಸಕ್ತಿಗಳಿಂದ ನಡೆಸಲ್ಪಡುತ್ತಿರುವಂತೆ ತೋರುತ್ತದೆ ಎಂದು ಅವರು ಹೇಳಿದರು. ಈ ರೀತಿಯ ವೈಯಕ್ತಿಕಗೊಳಿಸಿದ ರಾಜತಾಂತ್ರಿಕತೆಯು ಎಂದಿಗೂ ಸಮರ್ಥನೀಯವಲ್ಲ, ಭಾರತದ ವಿದೇಶಾಂಗ ನೀತಿಯ ಮಾರ್ಗದರ್ಶಿ ದಿಕ್ಸೂಚಿಯಾಗಲು ಸಾಧ್ಯವಿಲ್ಲ. ಪ್ರಪಂಚದ ಇತರ ಭಾಗಗಳಲ್ಲಿ, ವಿಶೇಷವಾಗಿ ಯುನೈಟೆಡ್ ಸ್ಟೇಟ್ಸ್‌ನಲ್ಲಿ ಇದನ್ನು ಮಾಡಲು ಮಾಡಿದ ಪ್ರಯತ್ನಗಳು ಇತ್ತೀಚಿನ ತಿಂಗಳುಗಳಲ್ಲಿ ಅತ್ಯಂತ ನೋವಿನ ಮತ್ತು ಅವಮಾನಕರ ರೀತಿಯಲ್ಲಿ ವಿಫಲವಾಗಿವೆ ಎಂದು ಅವರು ದಿ ಹಿಂದೂ ಪತ್ರಿಕೆಯಲ್ಲಿ ಪ್ರಕಟವಾದ ತಮ್ಮ ಲೇಖನದಲ್ಲಿ ತಿಳಿಸಿದ್ದಾರೆ.


ಇತ್ತೀಚೆಗೆ ರಾಷ್ಟ್ರೀಯ ದಿನಪತ್ರಿಕೆಯಲ್ಲಿ ಪ್ರಕಟವಾದ ಇಸ್ರೇಲ್-ಪ್ಯಾಲೆಸ್ತಾನ್ ಸಂಘರ್ಷದ ಕುರಿತು ಗಾಂಧಿಯವರ ಮೂರನೇ ಲೇಖನ ಇದಾಗಿದ್ದು, ಈ ವಿಷಯದ ಬಗ್ಗೆ ಮೋದಿ ಸರ್ಕಾರದ ನಿಲುವನ್ನು ಅವರು ತೀವ್ರವಾಗಿ ಟೀಕಿಸಿದ್ದಾರೆ. ವಿಶ್ವ ವೇದಿಕೆಯಲ್ಲಿ ಭಾರತದ ಸ್ಥಾನವನ್ನು ಒಬ್ಬ ವ್ಯಕ್ತಿಯ ವೈಯಕ್ತಿಕ ವೈಭವವನ್ನು ಹುಡುಕುವ ಮಾರ್ಗಗಳಲ್ಲಿ ಸುತ್ತುವರಿಯಲಾಗುವುದಿಲ್ಲ, ಅಥವಾ ಅದು ತನ್ನ ಐತಿಹಾಸಿಕ ಪ್ರಶಸ್ತಿಗಳ ಮೇಲೆ ಅವಲಂಬಿತವಾಗಿಲ್ಲ. ಇದು ನಿರಂತರ ಧೈರ್ಯ ಮತ್ತು ಐತಿಹಾಸಿಕ ನಿರಂತರತೆಯ ಪ್ರಜ್ಞೆಯನ್ನು ಬಯಸುತ್ತದೆ ಎಂದು ಅವರು ಭಾರತದ ಮೌನ ಧ್ವನಿ, ಪ್ಯಾಲೆಸ್ತಾನ್‌ನೊಂದಿಗಿನ ಅದರ ಬೇರ್ಪಡುವಿಕೆ ಎಂಬ ಶೀರ್ಷಿಕೆಯ ತಮ್ಮ ಲೇಖನದಲ್ಲಿ ಹೇಳಿದ್ದಾರೆ.



ದೀರ್ಘಕಾಲದ ಪ್ಯಾಲೆಸ್ತಾನಿ ಜನರ ಕಾನೂನುಬದ್ಧ ಆಕಾಂಕ್ಷೆಗಳನ್ನು ಈಡೇರಿಸುವ ಮೊದಲ ಹೆಜ್ಜೆ. ವಿಶ್ವಸಂಸ್ಥೆಯ ಸದಸ್ಯರಾಗಿರುವ 193 ದೇಶಗಳಲ್ಲಿ 150 ಕ್ಕೂ ಹೆಚ್ಚು ದೇಶಗಳು ಈಗ ಹಾಗೆ ಮಾಡಿವೆ ಎಂದು ಅವರು ಹೇಳಿದರು.ಪ್ಯಾಲೆಸ್ಟೈನ್ ವಿಮೋಚನಾ ಸಂಸ್ಥೆಗೆ ವರ್ಷಗಳ ಬೆಂಬಲದ ನಂತರ, ನವೆಂಬರ್ 18, 1988 ರಂದು ಪ್ಯಾಲೆಸ್ತಾನ್‌ಗೆ ರಾಜ್ಯತ್ವವನ್ನು ಔಪಚಾರಿಕವಾಗಿ ಗುರುತಿಸುವ ಮೂಲಕ ಭಾರತವು ಈ ವಿಷಯದಲ್ಲಿ ನಾಯಕನಾಗಿತ್ತು ಎಂದು ಗಾಂಧಿಯವರು ಒತ್ತಿ ಹೇಳಿದರು. 1971 ರಲ್ಲಿ, ಭಾರತವು ಪೂರ್ವ ಪಾಕಿಸ್ತಾನದಲ್ಲಿ ನರಮೇಧವನ್ನು ತಡೆಯಲು ದೃಢವಾಗಿ ಮಧ್ಯಪ್ರವೇಶಿಸಿತು, ಆಧುನಿಕ ಬಾಂಗ್ಲಾದೇಶದ ಜನನದ ಮಧ್ಯದಲ್ಲಿ ಎಂದು ಅವರು ಗಮನಸೆಳೆದರು.ಇಸ್ರೇಲ್-ಪ್ಯಾಲೆಸ್ತಾನ್‌ನ ನಿರ್ಣಾಯಕ ಮತ್ತು ಸೂಕ್ಷ್ಮ ವಿಷಯದ ಬಗ್ಗೆಯೂ ಸಹ, ಭಾರತವು ಬಹಳ ಹಿಂದಿನಿಂದಲೂ ಸೂಕ್ಷ್ಮ ಆದರೆ ತತ್ವಬದ್ಧ ಸ್ಥಾನವನ್ನು ಕಾಯ್ದುಕೊಂಡಿದೆ, ಶಾಂತಿ ಮತ್ತು ಮಾನವ ಹಕ್ಕುಗಳ ರಕ್ಷಣೆಗೆ ತನ್ನ ಬದ್ಧತೆಯನ್ನು ಒತ್ತಿಹೇಳುತ್ತದೆ ಎಂದು ಮಾಜಿ ಕಾಂಗ್ರೆಸ್ ಮುಖ್ಯಸ್ಥರು ಹೇಳಿದರು.

# ಅಗ್ನಿ-ಪ್ರೈಮ್ ಕ್ಷಿಪಣಿಯ ಪರೀಕ್ಷೆ ಯಶಸ್ವಿ

**ಬಾಲಸೋರ್:** ಒಡಿಶಾದ ಬಾಲಸೋರ್ ನಲ್ಲಿರುವ ಇಂಟಿಗ್ರೇಟೆಡ್ ಟೆಸ್ಟ್ ರೇಂಜ್‌ನಲ್ಲಿ ಭಾರತದ ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ ನಡೆಸಿದ ಅಗ್ನಿ-ಪ್ರೈಮ್ ಕ್ಷಿಪಣಿಯ ಯಶಸ್ವಿ ಪರೀಕ್ಷೆಯೊಂದಿಗೆ ಮತ್ತೊಂದು ಮಹತ್ವದ ಮೈಲಿಗಲ್ಲು ಸಾಧಿಸಿದಂತಾಗಿದೆ. ಈ ಪರೀಕ್ಷೆಯನ್ನು ಡಿಆರ್‌ಡಿಒ, ಎಸ್‌ಎಫ್‌ಸಿ ಮತ್ತು ಭಾರತೀಯ ಸಶಸ್ತ್ರ ಪಡೆಗಳು ಜಂಟಿಯಾಗಿ ನಡೆಸಿವೆ. ಈ ಪರೀಕ್ಷೆಯು ಭಾರತದ ಆತನಿರ್ಭರ ಭಾರತ ಯೋಜನೆಯ ಭಾಗವಾಗಿದೆ. ಇದು ಅಗ್ನಿ ಸರಣಿಯ ಆರನೇ ಕ್ಷಿಪಣಿಯಾಗಿದ್ದು, ಇದನ್ನು ಈಗಾಗಲೇ ಭಾರತೀಯ ಸೇನೆಯಲ್ಲಿ ನಿಯೋಜಿಸಲಾಗಿದೆ.



ಈ ಹೊಸ ಪೀಳಿಗೆಯ ಕ್ಷಿಪಣಿಯನ್ನು ರೈಲು ಆಧಾರಿತ ಮೊಬೈಲ್ ಲಾಂಚರ್‌ನಿಂದ ಉಡಾಯಿಸಲಾಯಿತು. ಪರೀಕ್ಷೆಯು ಸಂಪೂರ್ಣ ಯಶಸ್ವಿಯಾಗಿದೆ. 2,000 ಕಿ.ಮೀ.ವರೆಗಿನ ವ್ಯಾಪ್ತಿಗಾಗಿ ವಿನ್ಯಾಸಗೊಳಿಸಲಾದ ಈ ಕ್ಷಿಪಣಿಯು ಚಲನಶೀಲತೆ, ತ್ವರಿತ ನಿಯೋಜನೆಯನ್ನು ಹೆಚ್ಚಿಸಲು ಸುಧಾರಿತ ವೈಶಿಷ್ಟ್ಯಗಳನ್ನು ಒಳಗೊಂಡಿದೆ.

ಈ ಕುರಿತು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಉಡಾವಣೆಯ ಕುರಿತು ತಮ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದು, ಭಾರತವು ರೈಲು ಆಧಾರಿತ ಮೊಬೈಲ್ ಲಾಂಚರ್ ವ್ಯವಸ್ಥೆಯಿಂದ ಮಧ್ಯಂತರ ಶ್ರೇಣಿಯ ಅಗ್ನಿ-ಪ್ರೈಮ್ ಕ್ಷಿಪಣಿಯ ಯಶಸ್ವಿ ಉಡಾವಣೆಯನ್ನು ನಡೆಸಿದೆ.

ಈ ಮುಂದಿನ ಪೀಳಿಗೆಯ ಕ್ಷಿಪಣಿಯನ್ನು 2000 ಕಿ.ಮೀ.ವರೆಗಿನ ವ್ಯಾಪ್ತಿಯನ್ನು ಕ್ರಮಿಸಲು ವಿನ್ಯಾಸಗೊಳಿಸಲಾಗಿದೆ ಮತ್ತು ವಿವಿಧ ಸುಧಾರಿತ ವೈಶಿಷ್ಟ್ಯಗಳೊಂದಿಗೆ ಸಜ್ಜುಗೊಂಡಿದೆ.ಈ ಸಾಧನೆಗಾಗಿ ಅವರು ಡಿಆರ್‌ಡಿಒ ಇಂಡಿಯಾ ಸ್ಟ್ರಾಟೆಜಿಕ್ ಫೋರ್ಸಸ್ ಕಮಾಂಡ್ (ಎಸ್‌ಎಫ್‌ಸಿ), ಸಶಸ್ತ್ರ ಪಡೆಗಳನ್ನು ಅಭಿನಂದಿಸಿದ್ದಾರೆ.

ಈ ಯಶಸ್ವಿ ಹಾರಾಟ ಪರೀಕ್ಷೆಯು ಭಾರತವನ್ನು ಮೂವ್ ರೈಲ್ ನೆಟ್‌ವರ್ಕ್‌ನಿಂದ ಕ್ಯಾನಿಸ್ಟರೈಸ್ಡ್ ಲಾಂಚ್ ಸಿಸ್ಟಮ್ ಅನ್ನು ಅಭಿವೃದ್ಧಿಪಡಿಸಿದ ಸಾಮರ್ಥ್ಯ ಹೊಂದಿರುವ ಆಯ್ದ ರಾಷ್ಟ್ರಗಳ ಗುಂಪಿಗೆ ಸೇರಿಸಿದೆ ಎಂದು ಬರೆಯಲಾಗಿದೆ. ಪರೀಕ್ಷೆಯು ಎಲ್ಲಾ ಉದ್ದೇಶಗಳನ್ನು ಪೂರೈಸಿದೆ. ಈ ಪ್ರಯೋಗವನ್ನು ವಿಶೇಷವಾಗಿ ವಿನ್ಯಾಸಗೊಳಿಸಲಾದ ರೈಲು ಆಧಾರಿತ ಮೊಬೈಲ್ ಲಾಂಚರ್‌ನಿಂದ ನಡೆಸಲಾಗಿರುವುದರಿಂದ ಇದನ್ನು ವಿಶಿಷ್ಟ ಎಂದು ಕರೆಯಲಾಗುತ್ತದೆ.

# ಮದ್ಯ ಹಗರಣ: ಭೂಪೇಶ್ ಬಘೇಲ್ ಪುತ್ರ ಎಸಿಬಿ ವಶಕ್ಕೆ

**ರಾಯ್ಪುರ:** ಮದ್ಯ ಹಗರಣದಲ್ಲಿ ಜಾರಿ ನಿರ್ದೇಶನಾಲಯದಿಂದ ಬಂಧನಕ್ಕೊಳಗಾಗಿ ನ್ಯಾಯಾಂಗ ಬಂಧನದಲ್ಲಿದ್ದ ಮಾಜಿ ಸಿಎಂ ಭೂಪೇಶ್ ಬಘೇಲ್ ಪುತ್ರ ಚೈತನ್ಯ ಬಘೇಲ್‌ರನ್ನು ಭ್ರಷ್ಟಾಚಾರ ನಿಗ್ರಹ ದಳ ವಿಚಾರಣೆಗಾಗಿ ತನ್ನ ವಶಕ್ಕೆ ಪಡೆದುಕೊಂಡಿದೆ. ಜುಲೈ 18 ರಂದು ಜಾರಿ ನಿರ್ದೇಶನಾಲಯ ಬಂಧಿಸಿದಾಗಿನಿಂದ ಚೈತನ್ಯ ನ್ಯಾಯಾಂಗ ಬಂಧನದಲ್ಲಿದ್ದರು. ಚೈತನ್ಯ ಸೇರಿದಂತೆ ಮತ್ತೊಬ್ಬ ಆರೋಪಿಯನ್ನು ಎಸಿಬಿ ನಿನ್ನೆ ಮದ್ಯ ಹಗರಣಕ್ಕೆ ಸಂಬಂಧಿಸಿದಂತೆ ಬಂಧಿಸಿ, ವಿಶೇಷ ನ್ಯಾಯಾಲಯಕ್ಕೆ ಹಾಜರುಪಡಿಸಿತ್ತು. ವಿಚಾರಣೆ ನಡೆಸಿದ ನ್ಯಾಯಾಲಯ ಅವರನ್ನು ಅ.6 ರವರೆಗೆ ಎಸಿಬಿ ಕಸ್ಟಡಿಗೆ ಒಪ್ಪಿಸಿದೆ.

ಕಳೆದ ಜನವರಿಯಲ್ಲಿ ದಾಖಲಾಗಿದ್ದ ಪ್ರಕರಣದಲ್ಲಿ ಭ್ರಷ್ಟಾಚಾರ ಮತ್ತು ಕ್ರಿಮಿನಲ್ ಕೋನಗಳ ಕುರಿತು ಎಸಿಬಿ ತನಿಖೆ ನಡೆಸುತ್ತಿದೆ. ಭೂಪೇಶ್ ಬಘೇಲ್ ನೇತೃತ್ವದ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದಾಗ 2019 ಮತ್ತು 2022 ರ ನಡುವೆ 2,500 ಕೋಟಿ ರೂ.ಗಳಿಗೂ ಹೆಚ್ಚಿನ ಮೊತ್ತದ ಮದ್ಯ ಹಗರಣ ನಡೆದಿದೆ ಎಂಬ ಆರೋಪ ಕೇಳಿಬಂದಿತ್ತು. ಸುಮಾರು 1,000 ಕೋಟಿ ರೂ.ಗಳನ್ನು ವೈಯಕ್ತಿಕವಾಗಿ ನಿರ್ವಹಿಸಿದ್ದಾರೆ ಎಂದು ಜಾರಿ ನಿರ್ದೇಶನಾಲಯ ಹೇಳಿಕೊಂಡಿದೆ.

ಚೈತನ್ಯ ಅವರ ವಕೀಲ ಫೈಸಲ್ ರಿಜ್ವಿ, ಈ ಬಗ್ಗೆ ಪ್ರತಿಕ್ರಿಯಿಸಿ, ಯಾವುದೇ ಪುರಾವೆಗಳಿಲ್ಲದೆ ಅವರನ್ನು ಬಂಧಿಸಲಾಗಿದೆ. ಎಸಿಬಿ ಮಾಡಿರುವ ಆರೋಪ ಪಟ್ಟಿಯಲ್ಲಿ ಸುಮಾರು 45 ಜನರನ್ನು ಆರೋಪಿಗಳೆಂದು ಹೆಸರಿಸಲಾಗಿದೆ.

ಅವರಲ್ಲಿ 29 ಜನರನ್ನು ಬಂಧಿಸಲಾಗಿಲ್ಲ. ಇಲ್ಲಿಯವರೆಗೆ ಸಲ್ಲಿಸಲಾದ ಆರೋಪಪಟ್ಟಿಯಲ್ಲಿ ಚೈತನ್ಯ ಅವರ ಹೆಸರಿನ ಉಲ್ಲೇಖವಿಲ್ಲ. ರಾಜಕೀಯ ಒತ್ತಡದಿಂದ ಬಂಧಿಸಲಾಗಿದೆ ಎಂದು ಆರೋಪಿಸಿದ್ದಾರೆ. ಇ.ಡಿ ಚೈತನ್ಯರನ್ನು ಬಂಧಿಸಿದಾಗ ರಾಜ್ಯದ ರಾಯ್ಗಢ ಜಿಲ್ಲೆಯ ತಮ್ನಾರ್ ತಹಶೀಲ್‌ನಲ್ಲಿ ಅದಾನಿ ಗ್ರೂಪ್ ನಿಂದ ಕಲ್ಲಿದ್ದಲು ಗಣಿ ಯೋಜನೆಗಾಗಿ ಮರಗಳನ್ನು ಕಡಿಯುತ್ತಿರುವ ವಿಷಯವನ್ನು ಡೈವರ್ಟ್ ಮಾಡಲು ಹೀಗೆ ಮಾಡಲಾಗಿದೆ ಎಂದು ಭೂಪೇಶ್ ಬಘೇಲ್ ಟೀಕಿಸಿದ್ದರು.

# ಮೋದಿ ಸರ್ಕಾರ ಉರುಳಿಸಲು ಚೀನಾ ತಂತ್ರ

## ರಾಜಕೀಯ ನಾಯಕರು, ಉದ್ಯಮಿಗಳು, ಪತ್ರಕರ್ತರು, ಯೂಟ್ಯೂಬರ್‌ಗಳ ಖರೀದಿ, ಭಾರತವನ್ನು ಹಿಡಿತದಲ್ಲಿಟ್ಟುಕೊಳ್ಳಲು ಯತ್ನ

**ಹೊಸದಿಲ್ಲಿ:** ಭಾರತದಲ್ಲಿನ ಚೀನಾ ರಾಯಭಾರ ಕಚೇರಿಯು ಭಾರತೀಯ ರಾಜಕಾರಣಿಗಳ ಮೇಲೆ ಪ್ರಭಾವ ಬೀರಲು ಮತ್ತು ಕೇಂದ್ರ ಸರಕಾರವನ್ನು ಉರುಳಿಸಲು ಪ್ರಯತ್ನಿಸುತ್ತಿದೆ ಎಂಬ ಸ್ಫೋಟಕ ಮಾಹಿತಿಯನ್ನು ಟಿಬೆಟಿಯನ್-ಅಮೆರಿಕನ್ ರಾಜಕಾರಣಿ ಮತ್ತು ಲೇಖಕ ಡಾ.ಲೋಬ್ಸಾಂಗ್ ಸಂಗಯ್ ಬಹಿರಂಗಪಡಿಸಿದ್ದಾರೆ. ಖಾಸಗಿ ಸುದ್ದಿವಾಹಿನಿಗೆ ನೀಡಿದ ಸಂದರ್ಶನ ನೀಡಿರುವ ಅವರು, ರಾಜಕೀಯ ನಾಯಕರು, ಬುದ್ಧಿಜೀವಿಗಳು, ಉದ್ಯಮಿಗಳು, ಪತ್ರಕರ್ತರು ಮತ್ತು ಇಂದಿನ ಯೂಟ್ಯೂಬರ್‌ಗಳನ್ನು ಸಹ ಖರೀದಿಸಲಾಗುತ್ತಿದೆ. ಟಿಬೆಟ್, ಕ್ಸಿನ್ಜಿಯಾಂಗ್ ಮತ್ತು ಮಂಗೋಲಿಯಾದಲ್ಲಿಹೇಗೆ ನುಸುಳಿದರೋ ಭಾರತದಲ್ಲಿಯೂ ಅದೇ ರೀತಿ ಪ್ರಯತ್ನಿಸುತ್ತಿದ್ದಾರೆ, ಎಂದು ಆತಂಕ ವ್ಯಕ್ತಪಡಿಸಿದ್ದಾರೆ.



**ಆರ್ಥಿಕ ಸಂಪನ್ಮೂಲ ನೀಡ ಬಾರದು**

**ಚೀನಾಗೆ ಈ ದೇಶದಲ್ಲಿ ಬೆಂಬಲವಿದೆ:** ನೇಪಾಳದಲ್ಲಿ ಒಂದು ಪಕ್ಷ ಬಹಿರಂಗವಾಗಿ ಚೀನಾ ಪರವಾಗಿದ್ದರೆ, ಇನ್ನೊಂದು ಪಕ್ಷ ಭಾರತದ ಪರವಾಗಿದೆ. ಶ್ರೀಲಂಕಾ, ಬಾಂಗ್ಲಾದೇಶ ಮತ್ತು ಮಾಲ್ಡೀವ್ಸ್‌ನಲ್ಲಿ, ಚೀನಾ ಆಡಳಿತ ಗಣ್ಯರನ್ನು ಬೆಳೆಸಿದೆ. ಪಾಕಿಸ್ತಾನದಲ್ಲಿ ಎಲ್ಲಾ ಪ್ರಮುಖ ರಾಜಕೀಯ ಪಕ್ಷಗಳು ಚೀನಾವನ್ನು ಬೆಂಬಲಿಸುತ್ತವೆ, ಎಂದು ಅವರು ವಿವರಿಸಿದ್ದಾರೆ.

**ಎಲ್ಲರೂ ಎಚ್ಚರಿಕೆಯಲ್ಲಿರಿ:** ಭಾರತದಲ್ಲಿ ಆಡಳಿತ ಪಕ್ಷ, ಪ್ರತಿಪಕ್ಷ, ಉದ್ಯಮಿಗಳು, ಪತ್ರಕರ್ತರು ಎಲ್ಲರೂ ಎಚ್ಚರದಿಂದಿರಬೇಕು. ಚೀನಾ ಯಾರನ್ನೂ ಖರೀದಿಸಲು ಹಿಂದೇಟು ಹಾಕುವುದಿಲ್ಲ, ಎಂದು ಡಾ.ಸಂಗಯ್ ಹೇಳಿದ್ದಾರೆ. ಭಾರತದ ಮೇಲೆ ದಾಳಿ ಮಾಡುವ ಭಯೋತ್ಪಾದಕರ ವಿರುದ್ಧದ ವಿಶ್ವಸಂಸ್ಥೆಯ ನಿರ್ಣಯಗಳನ್ನು ಅವರು ಏಕೆ ತಡೆಯುತ್ತಿದ್ದಾರೆ? ಏಕೆಂದರೆ ಅವರು ಭಾರತವನ್ನು ತಮ್ಮ ಹಿಡಿತದಲ್ಲಿಟ್ಟುಕೊಂಡು ದಕ್ಷಿಣ ಏಷ್ಯಾದಲ್ಲಿ ಪ್ರಾಬಲ್ಯ ಸಾಧಿಸಲು ಬಯಸುತ್ತಾರೆ, ಎಂದು ಅವರು ಹೇಳಿದರು.

**ಅರುಣಾಚಲ ಮೂಲಕ ಭಾರತ ದೋಚಲು ಯತ್ನ**

**ಚೀನಾ ದೇಶವು ಅರುಣಾಚಲ ಪ್ರದೇಶದಲ್ಲಿರೈಲು ಮಾರ್ಗ, ರಸ್ತೆಗಳು, ಮತ್ತು ಮಿಲಿಟರಿ ವಿಮಾನ ನಿಲ್ದಾಣಗಳನ್ನು ಕಟ್ಟುತ್ತಿದೆ. ಇದು ಆಕ್ರಮಣ ಮಾಡಲು ತಯಾರಿ ನಡೆಸುತ್ತಿರುವಂತೆ ಕಾಣುತ್ತಿದೆ. ಬೀಜಿಂಗ್ಗೆ, ಟಿಬೆಟ್ ಅಂಗೈ ಇದ್ದ ಹಾಗೆ. ಲಡಾಖ್, ನೇಪಾಳ, ಭೂತಾನ್, ಸಿಕ್ಕಿಂ ಮತ್ತು ಅರುಣಾಚಲ ಬೆರಳುಗಳಿದ್ದಂತೆ. ಅವರು ಈಗಾಗಲೇ ಟಿಬೆಟ್ ಅನ್ನು ಆಕ್ರಮಿಸಿಕೊಂಡಿದ್ದಾರೆ. ಈಗ ಅಂಗೈ ದೋಚಲು ಬರುತ್ತಿದ್ದಾರೆ. ಹಿಮಾಲಯವನ್ನು ನಿಯಂತ್ರಿಸಿದರೆ ದಕ್ಷಿಣ ಏಷ್ಯಾ ಮತ್ತು ಭಾರತವನ್ನು ನಿಯಂತ್ರಿಸಬಹುದು ದೇಶಕ್ಕೆ ಅಪಾಯಕಾರಿ ಎಂದು ಸಂಗಯ್ ಹೇಳಿದ್ದಾರೆ.**

**ಉಕ್ರೇನ್ ಸಮರಕ್ಕೆ ಭಾರತ, ಚೀನಾ ಆರ್ಥಿಕ ನೆರವು: ಟ್ರಂಪ್ ಆರೋಪ:** ಉಕ್ರೇನ್ ವಿರುದ್ಧದ ಸಮರದಲ್ಲಿ ರಷ್ಯಾಗೆ ಭಾರತ ಹಾಗೂ ಚೀನಾ ಆರ್ಥಿಕ ಸಹಾಯ ಮಾಡುತ್ತಿವೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತೊಮ್ಮೆ ಆರೋಪಿಸಿದ್ದಾರೆ. ವಿಶ್ವಸಂಸ್ಥೆಯ 80ನೇ ಸಾಮಾನ್ಯ ಸಭೆಯ ಅಧಿವೇಶನ ಉದ್ದೇಶಿಸಿ ಮಾತನಾಡಿದ ಟ್ರಂಪ್, ರಷ್ಯಾದಿಂದ ತೈಲ, ಅನಿಲ ಖರೀದಿಸುವ ಮೂಲಕ ಈ ಎರಡೂ ರಾಷ್ಟ್ರಗಳು ಉಕ್ರೇನ್ ವಿರುದ್ಧದ ಸಮರಕ್ಕೆ ಪ್ರೈಮರಿ ಫಂಡರ್ಸ್‌ಗಳಾಗಿ ಆರ್ಥಿಕ ನೆರವು ನೀಡುತ್ತಿವೆ, ಎಂದು ನೇರವಾಗಿ ದೂರಿದ್ದಾರೆ. ಉಕ್ರೇನ್-ರಷ್ಯಾ ಸಮರವನ್ನು ಸುಲಭದಲ್ಲಿ ಕೊನೆಗೊಳಿಸಬಹುದಾಗಿದೆ, ಎಂದಿರುವ ಟ್ರಂಪ್ ಈ ಯುದ್ಧ ನಿಲ್ಲಿಸಲು ತಾವು ನಡೆಸುತ್ತಿರುವ ಪ್ರಯತ್ನಗಳನ್ನು ಜಾಗತಿಕ ವೇದಿಕೆಯಲ್ಲಿತೆರೆದಿಟ್ಟಿದ್ದಾರೆ. ಇದೇ ವೇಳೆ ಅವರು, ಜಾಗತಿಕ ಶಕ್ತಿಗಳು ಮಾಸ್ಕೊಗೆ ಆಕ್ರಮಣ ಮುಂದುವರಿಸಲು ಆರ್ಥಿಕ ಸಂಪನ್ಮೂಲ ನೀಡಬಾರದು ಎಂದು ಮನವಿ ಮಾಡಿಕೊಂಡಿದ್ದಾರೆ. ಭಾಷಣದಲ್ಲಿಟ್ರಂಪ್ ಅವರು, ಕಳೆದ ಮೇನಲ್ಲಿ ನಡೆದ ಭಾರತ-ಪಾಕ್ ಸಂಘರ್ಷ ಸೇರಿದಂತೆ ಕಳೆದ ಏಳು ತಿಂಗಳಲ್ಲಿನಾನು ಏಳು ಯುದ್ಧಗಳನ್ನು ನಿಲ್ಲಿಸಿದ್ದೇನೆ, ಎಂದು ಮತ್ತೊಮ್ಮೆ ಹೇಳಿಕೊಂಡಿದ್ದಾರೆ.



## ಮಿನಿ ನ್ಯೂಸ್

### ಲಂಕಾದಲ್ಲಿ ಭಾರತೀಯ ಸೇರಿದಂತೆ 7 ಬೌದ್ಧ ಸನ್ಯಾಸಿಗಳ ಸಾವು

**ಕೊಲಂಬೊ:** ವಾಯುವ್ಯ ಶ್ರೀಲಂಕಾದ ಅರಣ್ಯ ಮಠವೊಂದರಲ್ಲಿ ಕೇಬಲ್ ಚಾಲಿತ ರೈಲು ಬಂಡಿ ಉರುಳಿಬಿದ್ದ ಪರಿಣಾಮ ಭಾರತೀಯ ಪ್ರಜೆ ಸೇರಿದಂತೆ ಏಳು ಬೌದ್ಧ ಸನ್ಯಾಸಿಗಳು ಸಾವನ್ನಪ್ಪಿದ್ದಾರೆ ಮತ್ತು ಆರು ಮಂದಿ ಗಾಯಗೊಂಡಿದ್ದಾರೆ. ಕೊಲಂಬೊದಿಂದ ಸುಮಾರು 125 ಕಿ.ಮೀ ದೂರದಲ್ಲಿರುವ ನಿಕಾವೆರಾಟಿಯಾದಲ್ಲಿರುವ ಪ್ರಸಿದ್ಧ ಬೌದ್ಧ ಮಠವಾದ ನಾ ಉಯನ ಅರಣ್ಯ ಸೇನಾಸನಯದಲ್ಲಿ ರಾತ್ರಿ ಈ ಘಟನೆ ಸಂಭವಿಸಿದೆ. ಈ ಮಠವು ಧ್ಯಾನ ಕೇಂದ್ರಗಳಿಗೆ ಹೆಸರುವಾಸಿಯಾಗಿದೆ ಮತ್ತು ಪ್ರಪಂಚದಾದ್ಯಂತದ ಸಾಧಕರನ್ನು ಆಕರ್ಷಿಸುತ್ತದೆ. ಮೃತ ಏಳು ಸನ್ಯಾಸಿಗಳಲ್ಲಿ ಒಬ್ಬ ಭಾರತೀಯ, ಒಬ್ಬ ರಷ್ಯನ್ ಮತ್ತು ಒಬ್ಬ ರೊಮೇನಿಯನ್ ಪ್ರಜೆ ಸೇರಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಗಾಯಗೊಂಡ ಆರು ಜನರಲ್ಲಿ ನಾಲ್ವರ ಸ್ಥಿತಿ ಗಂಭೀರವಾಗಿದೆ ಎಂದು ಅವರು ಹೇಳಿದರು.

### ಗಲ್ಫ್ ಬ್ಯಾಂಕ್ ಸಾಲ ಮರುಪಾವತಿಸದ ಕೇರಳದ ನರ್ಸ್‌ಗಳು: ಪ್ರಕರಣ ದಾಖಲು

**ಕೊಚ್ಚಿ:** ಕೊಲ್ಲಿ ರಾಷ್ಟ್ರಗಳಲ್ಲಿ ಕೆಲಸ ಮಾಡುತ್ತಿದ್ದ ಸಂದರ್ಭದಲ್ಲಿ ಕುವೈತ್‌ನ ಅಲ್ ಅಹ್ಲಿ ಬ್ಯಾಂಕ್‌ನಿಂದ ಸಾಲ ಪಡೆದು ಮರುಪಾವತಿ ಮಾಡದ ಕೇರಳದ 13 ಶುಶ್ರೂಷಕಿಯರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಬ್ಯಾಂಕ್ ಅಧಿಕಾರಿಗಳು ಗುರುವಾರ ತಿಳಿಸಿದ್ದಾರೆ.

ಪ್ರಕರಣ ದಾಖಲಿಸುವ ಮೊದಲು ಗಲ್ಫ್ ಬ್ಯಾಂಕ್ ಅಧಿಕಾರಿಗಳು ಕೇರಳ ಪೊಲೀಸರನ್ನು ಸಂಪರ್ಕಿಸಿದ್ದರು. 2024ರಿಂದ ಇಲ್ಲಿಯವರೆಗೆ ಇಂಥ ಒಟ್ಟು 10 ಪ್ರಕರಣಗಳು ದಾಖಲಾಗಿವೆ. 2019ರಿಂದ 2021ರ ಅವಧಿಯಲ್ಲಿ ಆರೋಗ್ಯ ಸಚಿವಾಲಯದ ಅಡಿಯಲ್ಲಿ ಕುವೈತ್‌ನಲ್ಲಿ ಕೆಲಸ ಮಾಡುವಾಗ ಕೇರಳದ ಈ 13 ಶುಶ್ರೂಷಕಿಯರು ಸಾಲ ಪಡೆದಿದ್ದರು. ಸುಸ್ತಿದಾರರ ಬಾಕಿ ಮೊತ್ತ 10.33 ಕೋಟಿಯಾಗಿದ್ದು, ನೌಕರಿ ಒಪ್ಪಂದ ಕೊನೆಗೊಂಡ ನಂತರ ಇವರೆಲ್ಲರೂ ಕೇರಳಕ್ಕೆ ಮರಳಿದ್ದರು. ನಂತರ ಉತ್ತಮ ಅವಕಾಶಗಳನ್ನು ಅರಸಿ ಯುರೋಪ್ ಮತ್ತು ಪಶ್ಚಿಮದ ದೇಶಗಳಿಗೆ ವಲಸೆ ಹೋಗಿದ್ದಾರೆ. ಈವರೆಗೂ ಪಡೆದ ಸಾಲವನ್ನು ತೀರಿಸಿಲ್ಲ ಎಂದು ಅಲ್ ಅಹ್ಲಿ ಬ್ಯಾಂಕ್ ಪ್ರತಿನಿಧಿಸುವ ಜೇಮ್ಸ್, ಥಾಮಸ್ ಅಸೋಸಿಯೇಟ್ಸ್‌ನ ಥಾಮಸ್ ಜೆ. ಅನಕ್ಕಲ್ಲುಂಕುಲ್ ಆರೋಪಿಸಿದ್ದಾರೆ. ಈ ಕುರಿತು ಕೇರಳದ ಪೊಲೀಸ್ ಮುಖ್ಯಸ್ಥರಿಗೆ ಬ್ಯಾಂಕ್ ದೂರು ನೀಡಿತ್ತು. ಇದರನ್ವಯ ಕೊಟ್ಟಾಯಂ ಮತ್ತು ಎರ್ನಾಕುಲಂ ಜಿಲ್ಲೆಗಳಲ್ಲಿ ಪ್ರಕರಣಗಳು ದಾಖಲಾಗಿವೆ. ಕೊಟ್ಟಾಯಂನಲ್ಲಿ ಕುರವಿಲಂಗಾಡ್, ಅಯರ್ಕುನ್ನಮ್, ವೆಲ್ಲೂರು, ಕಾಡುತುರುತಿ, ವೈಕೋಮ್ ಮತ್ತು ಥಲಯೋಲಪರಂಬು ಪೊಲೀಸ್ ಠಾಣೆಗಳಲ್ಲಿ ಒಟ್ಟು ಎಂಟು ಪ್ರಕರಣಗಳು ದಾಖಲಾಗಿವೆ. ಪುಥನ್‌ಕ್ರೂಜ್, ಪೋಥಾನಿಕಾಡ್, ವರಪ್ಪುಳ ಮತ್ತು ಅಂಗಮಾಲಿ ಪೊಲೀಸ್ ಠಾಣೆಗಳು ಸೇರಿದಂತೆ ಎರ್ನಾಕುಲಂನಲ್ಲಿ ಐದು ಪ್ರಕರಣಗಳು ದಾಖಲಾಗಿವೆ. ಪ್ರತಿ ಶುಶ್ರೂಷಕಿಯರಿಂದ ಕನಿಷ್ಠ 61 ಲಕ್ಷದಿಂದ ಗರಿಷ್ಠ 91 ಲಕ್ಷದವರೆಗೂ ಬ್ಯಾಂಕ್‌ಗೆ ಬಾಕಿ ಬರಬೇಕಿದೆ ಎಂದು ಥಾಮಸ್ ಹೇಳಿದ್ದಾರೆ.

### ಯಾವುದೇ ರಾಷ್ಟ್ರದಿಂದ ತೈಲ ಖರೀದಿಸಲು ಭಾರತ ಅರ್ಹ: ಇಂಧನ ಕಾರ್ಯದರ್ಶಿ

**ವಾಷಿಂಗ್ಟನ್:** ರಷ್ಯಾದಿಂದ ಮಾತ್ರವಲ್ಲ ಭಾರತವು ಜಗತ್ತಿನ ಯಾವುದೇ ರಾಷ್ಟ್ರದಿಂದ ತೈಲವನ್ನು ಖರೀದಿಸಬಹುದು, ಎಂದು ಭಾರತದ ತೈಲ ವ್ಯಾಪಾರದ ಬಗ್ಗೆ ಅಮೆರಿಕದ ಇಂಧನ ಕಾರ್ಯದರ್ಶಿ ಕ್ರಿಸ್ ರೈಟ್ ಹೇಳಿದ್ದಾರೆ. ರಷ್ಯಾದಿಂದ ಅಗ್ಗದ ದರದಲ್ಲಿ ತೈಲ ಖರೀದಿಸಲು ಭಾರತ ಕೈಜೋಡಿಸಿದೆ. ಈ ಮೂಲಕ ಪ್ರತಿ ವಾರ ಸಾವಿರಾರು ಜನರನ್ನು ಕೊಲ್ಲುತ್ತಿರುವ ವ್ಯಕ್ತಿಗೆ ಹಣವನ್ನು ನೀಡುತ್ತಿದೆ ಎಂದು ಕುಟುಕಿದ್ದಾರೆ. ಜಗತ್ತಿನಲ್ಲಿ ತೈಲ ವ್ಯಾಪಾರ ಮಾಡುವ ಅನೇಕ ದೇಶಗಳಿವೆ. ಭಾರತ ರಷ್ಯಾದಿಂದ ಮಾತ್ರ ತೈಲ ಖರೀದಿಸಬೇಕೆಂದಿಲ್ಲ. ರಷ್ಯಾದ ತೈಲ ಖರೀದಿಸಲು ಯಾರೂ ಒಪ್ಪುವುದಿಲ್ಲ. ಆದರೆ ಅಗ್ಗವಾಗಿ ಸಿಗುತ್ತದೆ ಎನ್ನುವ ಕಾರಣಕ್ಕೆ ಭಾರತ ರಷ್ಯಾದೊಂದಿಗೆ ವ್ಯಾಪಾರ ನಡೆಸುತ್ತಿದೆ ಎಂದು ಪತ್ರಿಕಾಗೋಷ್ಠಿಯಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸುವ ವೇಳೆ ರೈಟ್ ಹೇಳಿದ್ದಾರೆ.

ಅಮೆರಿಕವು ಭಾರತವನ್ನು ಶಿಕ್ಷಿಸಲು ಬಯಸುವುದಿಲ್ಲ. ಬದಲಿಗೆ ಉಕ್ರೇನ್‌ನಲ್ಲಿನ ಯುದ್ಧವನ್ನು ಕೊನೆಗೊಳಿಸಲು ಬಯಸುತ್ತದೆ. ಭಾರತವು ಅಮೆರಿಕದಿಂದಲೂ ತೈಲವನ್ನು ಖರೀದಿಸಬಹುದು. ಭಾರತ ನಮ್ಮೊಂದಿಗೂ ತೈಲದ ವ್ಯಾಪಾರ ನಡೆಸಲಿ ಎಂದು ಆಶಿಸುತ್ತೇವೆ. ಮಾರಾಟ ಮಾಡಲು ಅಮೆರಿಕದ ಬಳಿ ತೈಲವಿದೆ. ಭಾರತದೊಂದಿಗೆ ನಮ್ಮ ಸಂಬಂಧವನ್ನು ಬೆಳೆಸಲು ಬಯಸುತ್ತೇವೆ ಎಂದು ರೈಟ್ ಸ್ಪಷ್ಟನೆ ನೀಡಿದ್ದಾರೆ.

### ವಿದೇಶಿ ದೇಣಿಗೆ ಕಾಯ್ದೆ ಉಲ್ಲಂಘನೆ ಶಂಕೆ: ವಾಂಗ್ಚುಕ್ ವಿರುದ್ಧ ಸಿಬಿಐ ತನಿಖೆ

**ಲೇಹ್:** ಪರಿಸರ ಹೋರಾಟಗಾರ ಸೋನಮ್ ವಾಂಗ್ಚುಕ್ ಸ್ಥಾಪಿಸಿರುವ ಎಚ್‌ಐಎಲ್ ಸಂಸ್ಥೆಯು ವಿದೇಶಿ ದೇಣಿಗೆ ನಿಯಂತ್ರಣ ಕಾಯ್ದೆಯನ್ನು ಉಲ್ಲಂಘಿಸಿದೆಯೇ ಎನ್ನುವುದರ ಕುರಿತು ಸಿಬಿಐ ತನಿಖೆ ನಡೆಸುತ್ತಿದೆ. ಎಚ್‌ಐಎಲ್ ಸಂಸ್ಥೆಯ ಹಣಕಾಸು ವಿಚಾರದಲ್ಲಿ ಎರಡು ತಿಂಗಳ ಹಿಂದೆಯೇ ತನಿಖೆ ಆರಂಭವಾಗಿದೆ. ಆದರೆ, ಇದುವರೆಗೆ ಯಾವುದೇ ಎಫ್‌ಐಆರ್ ದಾಖಲಾಗಿಲ್ಲ ಎಂದು ಅಧಿಕಾರಿಗಳು ಹೇಳಿದ್ದಾರೆ.


ಈ ನಡುವೆ ವಾಂಗ್ಚುಕ್ ಪಾಕಿಸ್ತಾನಕ್ಕೆ ಭೇಟಿ ನೀಡಿರುವುದರ ಬಗ್ಗೆಯೂ ಪರಿಶೀಲನೆ ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಪರಿಸರ ಹೋರಾಟಗಾರ ಸೋನಮ್ ವಾಂಗ್ಚುಕ್ ನಡೆಸುತ್ತಿರುವ ಉಪವಾಸ ಸತ್ಯಾಗ್ರಹ ಬೆಂಬಲಿಸಿ ಬುಧವಾರ ಲೇಹ್ ಅಪೆಕ್ಸ್ ಬಾಡಿ ಬಂದ್‌ಗೆ ಕರೆ ನೀಡಿತ್ತು. ಈ ವೇಳೆ ಪೊಲೀಸರು ಮತ್ತು ಪ್ರತಿಭಟನಕಾರರ ಮಧ್ಯೆ ಸಂಘರ್ಷ ಉಲ್ಬಣಗೊಂಡು, ನಾಲ್ವರು ಮೃತಪಟ್ಟು, 80ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದರು. ಪೊಲೀಸರು 50 ಜನರನ್ನು ಬಂಧಿಸಿದ್ದಾರೆ. ಈ ಬೆಳವಣಿಗೆ ನಡುವೆಯೇ, ವಾಂಗ್ಚುಕ್ ಎರಡು ವಾರ ಸತ್ಯಾಗ್ರಹವನ್ನು ಹಿಂತೆಗೆದುಕೊಂಡಿದ್ದಾರೆ.

### ವಾಯುಪಡೆಗಾಗಿ 97 ತೇಜಸ್ ಜೆಟ್‌ಗಳ ನಿರ್ಮಾಣಕ್ಕೆ ಎಚ್‌ಎಎಲ್ ಜೊತೆಗೆ ಒಪ್ಪಂದ

**ನವದೆಹಲಿ:** ಭಾರತೀಯ ವಾಯುಪಡೆಗಾಗಿ 62,370 ಕೋಟಿ ವೆಚ್ಚದಲ್ಲಿ 97 ತೇಜಸ್ ಲಘು ಯುದ್ಧ ವಿಮಾನಗಳನ್ನು ಖರೀದಿಸಲು ರಕ್ಷಣಾ ಸಚಿವಾಲಯವು ಹಿಂದೂಸ್ಥಾನ್ ಏರೋನಾಟಿಕ್ಸ್ ಲಿಮಿಟೆಡ್ ಜೊತೆಗೆ ಗುರುವಾರ ಒಪ್ಪಂದ ಮಾಡಿಕೊಂಡಿದೆ. 2027-28ರ ವೇಳೆಗೆ ಈ ಯುದ್ಧ ವಿಮಾನಗಳನ್ನು ಎಚ್ ಎಎಲ್ ವಿತರಿಸಲಿದೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಭದ್ರತಾ ಸಂಪುಟ ಸಮಿತಿ ಈ ಬೃಹತ್ ಖರೀದಿಗೆ ಒಪ್ಪಿಗೆ ನೀಡಿದ ಸುಮಾರು ಒಂದು ತಿಂಗಳ ನಂತರ ಒಪ್ಪಂದ ಮಾಡಿಕೊಳ್ಳಲಾಗಿದೆ. ಸರ್ಕಾರಿ ಸ್ವಾಮ್ಯದ ಎಚ್ ಎಎಲ್‌ಗೆ ನೀಡಲಾದ ಎರಡನೇ ಗುತ್ತಿಗೆ ಇದಾಗಿದೆ. 2021ರ ಫೆಬ್ರವರಿಯಲ್ಲಿ ವಾಯುಪಡೆಗಾಗಿ 83 ತೇಜಸ್ ಎಮ್‌ಕೆ-1ಎ ಜೆಟ್‌ಗಳನ್ನು ಖರೀದಿಸಲು 48,000 ಕೋಟಿಗಳ ಒಪ್ಪಂದವನ್ನು ಮಾಡಿಕೊಂಡಿತ್ತು.

## ಅಡ್ವಾನ್ಸ್ ಬುಕ್ಕಿಂಗ್‌ಗೆ ಮುಹೂರ್ತ

**ಇನ್ನೊಂದು ವಾರವಷ್ಟೇ ಬಾಕಿ**



ಬಹುನಿರೀಕ್ಷಿತ ಕಾಂತಾರ ಚಾಪ್ಟರ್-1 ಸಿನಿಮಾ ಇದೇ ಅ.2 ರಂದು ವಿಶ್ವದಾದ್ಯಂತ ತೆರೆಕಾಣಲು ಸಜ್ಜಾಗಿ ನಿಂತಿದೆ. ಈ ಚಿತ್ರದ ಮೇಲೆ ವಿಶ್ವದಾದ್ಯಂತ ಕುತೂಹಲ ಹೆಚ್ಚಾಗಿದೆ. ಈ ಸಿನಿಮಾದ ಅಡ್ವಾನ್ಸ್ ಬುಕ್ಕಿಂಗ್ ಓಪನ್ ಬಗ್ಗೆ ಹೊಂಬಾಳೆ ಸಂಸ್ಥೆ ಸಿಹಿಸುದ್ದಿ ನೀಡಿದೆ. ಇದೇ ಸೆ.26ರ ಮಧ್ಯಾಹ್ನ 12:29 ರಿಂದ ಕರ್ನಾಟಕದ ಟಿಕೆಟ್ ಅಡ್ವಾನ್ಸ್ ಬುಕ್ಕಿಂಗ್ ಓಪನ್ ಆಗಲಿದೆ. ರಿಷಬ್ ಶೆಟ್ಟಿ ನಟಿಸಿ, ನಿರ್ದೇಶನ ಮಾಡಿರುವ ಕಾಂತಾರ ಚಾಪ್ಟರ್-1 ಸಿನಿಮಾ ಟ್ರೈಲರ್ ರಿಲೀಸ್ ಮಾಡಿದೆ. ಸಿನಿಮಾದ ಟ್ರೈಲರ್ ನೋಡಿ ಈಗಾಗ್ಲೇ ಭಕ್ತಗಣ ಸಂಭ್ರಮಿಸಿದೆ. ಕಾಂತಾರ ದೃಶ್ಯಕಾವ್ಯದ ವೈಭವ ನೋಡಿ ಕುಣಿದು ಕುಪ್ಪಳಿಸೋಕೆ ಕಾದು ಕುಳಿತಿದೆ ಅಭಿಮಾನಿ ಬಳಗ. ಇನ್ನೊಂದು ವಾರವಷ್ಟೇ ಬಾಕಿ ಇರುವ ಬೆನ್ನಲ್ಲೇ ಹೊಂಬಾಳೆ ಸಂಸ್ಥೆ ನೀಡಿರುವ ಖುಷಿ ಸಮಾಚಾರಕ್ಕೆ ಅಭಿಮಾನಿಗಳು ಅಡ್ವಾನ್ಸ್ ಆಗಿ ಬುಕಿಂಗ್ ಮಾಡೋಕೆ ಸಿದ್ಧರಾಗಿದ್ದಾರೆ. ಕಾಂತಾರ ಸಿನಿಮಾ ದಾಖಲೆಯನ್ನ ಮಾಡಿತ್ತು. ಇದೀಗ ಪ್ರೀಕ್ವೆಲ್ ತೆರೆಗೆ ಬರುತ್ತಿದ್ದು, ಸಿನಿಮಾ ತೆರೆಗೆ ಬರುವ ಮುಂಚೆಯೇ ಕೋಟಿ ಕೋಟಿ ಕಲೆಹಾಕಿದೆ. ಇನ್ನು ಅಡ್ವಾನ್ಸ್ ಬುಕ್ಕಿಂಗ್‌ನಲ್ಲೂ ದಾಖಲೆಯನ್ನ ಸೃಷ್ಟಿಸುವ ನಿರೀಕ್ಷೆಗಳಿವೆ. ಕಾಂತಾರ ಜಗತ್ತನ್ನ ಕಣ್ತುಂಬಿಕೊಳ್ಳಲು ಕ್ಯೂರಿಯಾಸಿಟಿಯಿಂದ ಕಾಯ್ತಿದ್ದ ಅಭಿಮಾನಿಗಳಿಗೆ ಮುಂಗಡ ಬುಕ್ಕಿಂಗ್ ಮಾಡಿಕೊಳ್ಳಲು ಟೈಂ ಫಿಕ್ಸ್ ಮಾಡಲಾಗಿದೆ. ಸದ್ಯ ಕರ್ನಾಟಕದ ಅಡ್ವಾನ್ಸ್ ಬುಕ್ಕಿಂಗ್‌ಗೆ ದಿನ ಮತ್ತು ಟೈಂ ನಿಗದಿಯಾಗಿದೆ. ಇನ್ನು ಮುಂದಿನ ದಿನಗಳಲ್ಲಿ ಒಂದೊಂದೆ ರಾಜ್ಯದ ಅಪ್‌ಡೇಟ್‌ಗಳು ಸಿಗಲಿದೆ.



**ಸಿನಿ ವಾಹಿನಿ**

## ಮ್ಯಾಕ್ಸ್ ಡೈರೆಕ್ಟರ್‌ಗೆ ಕಾರ್ ಗಿಫ್ಟ್



ಬಾದ್ ಷಾ ಕಿಚ್ಚ ಸುದೀಪ್‌ಗೆ ಮ್ಯಾಕ್ಸ್‌ನಂತಹ ಸೂಪರ್ ಹಿಟ್ ಸಿನಿಮಾ ಕೊಟ್ಟ ನಿರ್ದೇಶಕ ವಿಜಯ್ ಕಾರ್ತಿಕೇಯ ಅವರಿಗೆ ಸುದೀಪ್ ಕಾರ್ ಗಿಫ್ಟ್ ನೀಡಿದ್ದಾರೆ. ತಮ್ಮ ಆಪ್ತ ಸ್ನೇಹಿತರಿಗೆ, ನಿರ್ದೇಶಕರಿಗೆ, ನಟರಿಗೆ ಸುದೀಪ್ ಕಾರ್, ಜಾಕೆಟ್, ಕ್ರಿಕೆಟ್ ಬ್ಯಾಟ್, ವಾಚ್ ಮುಂತಾದ ವಸ್ತುಗಳನ್ನ ಗಿಫ್ಟ್ ನೀಡುತ್ತಲೇ ಇರುತ್ತಾರೆ. ಇದೀಗ ಮ್ಯಾಕ್ಸ್ ಸಿನಿಮಾ ನಿರ್ದೇಶಕರಿಗೆ ಕಾರ್ ಗಿಫ್ಟ್ ಕೊಟ್ಟಿದ್ದಾರೆ. ವಿಜಯ್ ಕಾರ್ತಿಕೇಯ ಕಳೆದ ವರ್ಷ ಸುದೀಪ್ ಅವರ ಮ್ಯಾಕ್ಸ್ ಸಿನಿಮಾ ನಿರ್ದೇಶನ ಮಾಡಿದ್ದರು. ಇದೀಗ ಮಾರ್ಕ್ ಸಿನಿಮಾವನ್ನ ನಿರ್ದೇಶನ ಮಾಡುತ್ತಿದ್ದಾರೆ. ನಿರ್ದೇಶಕರ ಕೆಲಸವನ್ನ ಮೆಚ್ಚಿಕೊಂಡಿರುವ ನಟ ಕಿಚ್ಚ ಸುದೀಪ್ ಕಾರ್ ಗಿಫ್ಟ್ ಕೊಟ್ಟಿದ್ದಾರೆ. ಈ ಫೋಟೋಗಳನ್ನ ತಮ್ಮ ಜಾಲತಾಣದಲ್ಲಿ ನಿರ್ದೇಶಕ ವಿಜಯ್ ಕಾರ್ತಿಕೇಯ ಹಂಚಿಕೊಂಡಿದ್ದಾರೆ. ಕಿಚ್ಚ ಸುದೀಪ್, ಅವರ ಕುಟುಂಬಕ್ಕೆ ಧನ್ಯವಾದಗಳನ್ನ ಹೇಳಿದ್ದಾರೆ. ವಿಜಯ್ ಕಾರ್ತಿಕೇಯ ಅವರಿಗೆ ಸ್ಕೋಡಾ ಕಂಪನಿಯ ಕಾರ್‌ನ್ನ ಸುದೀಪ್ ತಮ್ಮ ಜೆಪಿ ನಗರದ ನಿವಾಸದಲ್ಲಿ ಉಡುಗೊರೆ ನೀಡಿದ್ದು, ಗಿಫ್ಟ್ ಪಡೆದ ನಿರ್ದೇಶಕ ಖುಷಿ ಪಟ್ಟಿದ್ದಾರೆ. ಸದ್ಯ ಮಾರ್ಕ್ ಸಿನಿಮಾದ ಕೆಲಸದಲ್ಲಿ ತೊಡಗಿಕೊಂಡಿರುವ ನಿರ್ದೇಶಕ ವಿಜಯ್ ಕಾರ್ತಿಕೇಯ ಹಾಗೂ ಸುದೀಪ್ ಇದೇ ವರ್ಷ ಸಿನಿಮಾವನ್ನ ತೆರೆಗೆ ತರೋಕೆ ಅನೌನ್ಸ್ ಮಾಡಿದ್ದಾರೆ. ಇನ್ನು ಇದೇ ಸೆ.28ರಂದು ಬಿಗ್‌ಬಾಸ್ ಗ್ರ್ಯಾಂಡ್ ಓಪನಿಂಗ್ ನಡೆಯಲಿದ್ದು, ಕಿಚ್ಚ ಸುದೀಪ್ ಅದಕ್ಕಾಗಿ ತಯಾರಿ ನಡೆಸಿದ್ದಾರೆ.

**ಇದೀಗ ಮಾರ್ಕ್ ಸಿನಿಮಾ ನಿರ್ದೇಶನ**

## ಅಶ್ವಿನಿ ಗೌಡ ಲೈಫ್‌ಸ್ಟೈಲ್ ಬಿಂದಾಸ್

ರಾಜಾಹುಲಿ ಸಿನಿಮಾ ಖ್ಯಾತಿಯ ನಟಿ ಅಶ್ವಿನಿ ಗೌಡ ಅವರು ಕೇವಲ ನಟಿಯಷ್ಟೇ ಅಲ್ಲ, ನಿರ್ಮಾಪಕಿ, ಕನ್ನಡಪರ ಹೋರಾಟಗಾರ್ತಿಯಾಗಿ ಗುರುತಿಸಿಕೊಂಡಿದ್ದಾರೆ. 25ಕ್ಕೂ ಹೆಚ್ಚು ಧಾರಾವಾಹಿಗಳು 100ಕ್ಕೂ ಹೆಚ್ಚು ಸಿನಿಮಾಗಳಲ್ಲಿ ನಟಿಸಿ ಜನಪ್ರಿಯತೆಯನ್ನ ಗಳಿಸಿರುವ ಅಶ್ವಿನಿ ಗೌಡ ಅವರ ಲೈಫ್ ಸ್ಟೈಲ್ ಇಂಟರೆಸ್ಟಿಂಗ್ ಆಗಿದೆ. ಇತ್ತೀಚೆಗೆ, ಡಿಜಿಟಲ್ ಮಾಧ್ಯಮ ಯೂಟ್ಯೂಬ್ ಚಾನೆಲ್‌ನಲ್ಲಿ ನಟಿ ಅಶ್ವಿನಿ ಗೌಡ ಅವರ ಹೋಮ್ ಟೂರ್ ವಿಡಿಯೋ ಮಾಡಲಾಗಿದೆ. ಈ ವೇಳೆ ಅವರ ಸೀರೆಗಳ ಕಲೆಕ್ಷನ್ ಬಗ್ಗೆ ಕೇಳಲಾಗಿದೆ. ಈ ವೇಳೆ, ''ಸುಮಾರು ಇದೆ, ನಮ್ಮ ಮನೆಯಲ್ಲಿ ನಾಲ್ಕು ರೂಮ್ ಇದೆ. ಅದರಲ್ಲಿ ಒಂದು ರೂಮ್ ನಮ್ಮ ತಾಯಿಗೆ ಬಿಟ್ಟು ಕೊಟ್ಟಿದ್ದೇನೆ. ಮಿಕ್ಕ ರೂಮ್‌ನಲ್ಲಿ ಎಲ್ಲವೂ ನನ್ನ ವಸ್ತುಗಳೇ ಇರುತ್ತದೆ. ಟೋಟಲ್ ಆಗಿ ನೋಡಿದ್ರೆ 5000 ಸೀರೆಗಳಂತೂ ಇದೆ. ಯಾಕಂದರೆ, ಸೀರೆ ಪರ್ಚೇಸ್‌ಗೆ ಹೋದಾಗ, ನಾವು ಒಂದು ಅಥವಾ ಎರಡು ಸೀರೆಗಳನ್ನ ಪರ್ಚೇಸ್ ಮಾಡಲ್ಲ. ಆಮೇಲೆ ನಾವು ಪರ್ಚೇಸ್ ಮಾಡುವ ಎಲ್ಲಾ ಸೀರೆಗಳು 10 ಸಾವಿರ ರೂಪಾಯಿ ಅಥವಾ ಲಕ್ಷಾಂತರ ತಗೋತೀವಿ ಅಂತೇನಿಲ್ಲ ಎಂದಿದ್ದಾರೆ ಅಶ್ವಿನಿ ಗೌಡ. ಅವರು ತಮ್ಮ ಶೂಟಿಂಗ್‌ಗೆ ಬಳಸುವ ಮತ್ತು ಡೈಲಿ ವೇರ್ ಅಂತ ಎರಡೂ ಸೆಪರೇಟ್ ವಾರ್ಡ್‌ರೋಬ್‌ನಲ್ಲಿ ಅವರ ಸೀರೆಗಳನ್ನ ಸಂಗ್ರಹಿಸಿ ಇಟ್ಟಿದ್ದಾರೆ. ಈಗ ನಾವು ತಾಯಿ ಪಾತ್ರ ಮಾಡುತ್ತಿದ್ದೇವೆ ಅಂದಾಗ, ನಮಗೆ ಕಾಟನ್ ಸೀರೆ ಬೇಕಾಗಿರುತ್ತದೆ. ಅದು 200, 500 ರೂಪಾಯಿ ಅಥವಾ ಪ್ರೀಮಿಯಮ್ ಕ್ವಾಲಿಟಿ ಅಂತಂದರೆ 7ರಿಂದ 8 ಸಾವಿರ ರೂಪಾಯಿ ಆಗಿರಬಹುದು.

**ಸೀರೆ ಕಲೆಕ್ಷನ್ ಎಷ್ಟಿದೆ**

## ಕಿಂಗ್ ಖಾನ್‌ಗೆ ಮತ್ತೆ ಮತ್ತೆ ಸಂಕಷ್ಟ!



ಬಾಲಿವುಡ್ ನಟ ಶಾರುಖ್ ಖಾನ್ ಮತ್ತು ಅವರ ಪತ್ನಿ ಗೌರಿ ಖಾನ್ ಒಡೆತನದ ರೆಡ್ ಚಿಲ್ಲೀಸ್ ಎಂಟರ್‌ಟೈನ್‌ಮೆಂಟ್ ಪ್ರೈವೇಟ್ ಲಿಮಿಟೆಡ್ ವಿರುದ್ಧ ಮಾಜಿ ಎನ್‌ಸಿಬಿ ಅಧಿಕಾರಿ ಸಮೀರ್ ವಾಂಖೆಡೆ ದೆಹಲಿ ಹೈಕೋರ್ಟ್‌ನಲ್ಲಿ ಮಾನನಷ್ಟ ಮೊಕದ್ದಮೆ ಹೂಡಿದ್ದಾರೆ ಆರ್ಯನ್ ಖಾನ್ ನಿರ್ದೇಶನದ ಚೊಚ್ಚಲ ಸರಣಿ ದಿ ಬಾಡ್ಸ್ ಆಫ್ ಬಾಲಿವುಡ್'ನಲ್ಲಿ ನನ್ನ ಪ್ರತಿಷ್ಠೆಗೆ ಧಕ್ಕೆ ಉಂಟು ಮಾಡಲಾಗಿದೆ'' ಎಂದು ಸಮೀರ್ ವಾಂಖೆಡೆ ಹೇಳಿದ್ದಾರೆ. ನೆಟ್‌ಫ್ಲಿಕ್ಸ್‌ನಲ್ಲಿರುವ ಈ ಸರಣಿಯು ಮಾದಕವಸ್ತು ನಿಗ್ರಹ ಸಂಸ್ಥೆಗಳ ಬಗ್ಗೆ ತಪ್ಪು ಮತ್ತು ನಕಾರಾತ್ಮಕ ಚಿತ್ರಣವನ್ನು ನೀಡುತ್ತದೆ. ಇದು ಕಾನೂನು ಸಂಸ್ಥೆಗಳ ಬಗ್ಗೆ ಸಾರ್ವಜನಿಕ ನಂಬಿಕೆಯನ್ನು ಕುಂದಿಸುವಂತಿದೆ'' ಎಂದು ಸಮೀರ್ ವಾಂಖೆಡೆ ಅವರು ಹೇಳಿದ್ದಾರೆ. ಈಚೆಗಷ್ಟೇ ಈ ವೆಬ್ ಸರಣಿಯಲ್ಲಿ ರಣಬೀರ್ ಕಪೂರ್ ಇ-ಸಿಗರೇಟ್ ಬಳಕೆ ಮಾಡಿದ್ದರಿಂದ ದೂರು ದಾಖಲಾಗಿದೆ. ಇದೀಗ ಸಮೀರ್ ವಾಂಖೆಡೆ ರೆಡ್ ಚಿಲ್ಲೀಸ್ ವಿರುದ್ಧ ತಿರುಗಿಬಿದ್ದಿದ್ದಾರೆ. ಡ್ರಗ್ಸ್ ಕೇಸ್‌ನಲ್ಲಿ ಈ ಹಿಂದೆ ಆರ್ಯನ್ ಖಾನ್ ಅವರನ್ನು ಸಮೀರ್ ವಾಂಖೆಡೆ ಬಂಧಿಸಿದ್ದರು. ಆ ಪ್ರಕರಣವು ಬಾಂಬೆ ಹೈಕೋರ್ಟ್ ಮತ್ತು ಮುಂಬೈನ ಎನ್‌ಡಿಪಿಎಸ್ ವಿಶೇಷ ನ್ಯಾಯಾಲಯದಲ್ಲಿ ವಿಚಾರಣೆಯ ಹಂತದಲ್ಲಿರುವ ಸಮಯದಲ್ಲಿ ದಿ ಬಾಡ್ಸ್ ಆಫ್ ಬಾಲಿವುಡ್' ಸರಣಿಯಲ್ಲಿ ತಮ್ಮನ್ನು ತೇಜೋವಧೆ ಮಾಡುವಂತಹ ದೃಶ್ಯಗಳನ್ನು ಸೇರಿಸಿದ್ದಾರೆ. ನ್ಯಾಯಾಂಗ ತನಿಖೆ ನಡೆಯುತ್ತಿರುವಾಗ ಈ ರೀತಿ ಚಿತ್ರಿಸುವುದು ಸರಿಯಲ್ಲ ಎಂದು ಸಮೀರ್ ವಾಂಖೆಡೆ ಅವರು ಹೇಳಿದ್ದಾರೆ. ರೆಡ್ ಚಿಲ್ಲೀಸ್ ಸಂಸ್ಥೆ ವಿರುದ್ಧ ಮಾನನಷ್ಟ ಮೊಕದ್ದಮೆಯನ್ನು ದಾಖಲು ಮಾಡಿರುವ ಸಮೀರ್ ವಾಂಖೆಡೆ ಅವರು 2 ಕೋಟಿ ರೂ. ಪರಿಹಾರವನ್ನು ಕೇಳಿದ್ದಾರೆ ಮತ್ತು ಈ ಮೊತ್ತವನ್ನು ಟಾಟಾ ಮೆಮೋರಿಯಲ್ ಕ್ಯಾನ್ಸರ್ ಆಸ್ಪತ್ರೆಯ ರೋಗಿಗಳ ಚಿಕಿತ್ಸೆಗಾಗಿ ನೀಡಬೇಕೆಂದು ಅವರು ಬಯಸಿದ್ದಾರೆ. ಈ ಸರಣಿಯ ಪ್ರಸಾರ, ವಿತರಣೆಯನ್ನು ತಡೆಯಬೇಕು, ಅದು ಮಾನಹಾನಿಕರ ಎಂದು ನ್ಯಾಯಾಲಯ ಘೋಷಿಸಬೇಕು ಎಂದು ಅರ್ಜಿಯಲ್ಲಿ ಸಮೀರ್ ತಿಳಿಸಿದ್ದಾರೆ.

## ವಾಕಿಂಗ್ ಮಾಡಲು ಸೂರ್ಯನ ಬೆಳಕು ಇಲ್ಲ



ರೇಣುಕಾಸ್ವಾಮಿ ಕೊಲೆ ಪ್ರಕರಣದ ಆರೋಪಿ, ದರ್ಶನ್ ಇನ್ನೂ ಕ್ವಾರೆಂಟೈನ್ ಸೆಲ್‌ನಲ್ಲಿಯೇ ಇದ್ದಾರೆ. ಸಾಮಾನ್ಯ ಸೆಲ್‌ಗೆ ಶಿಫ್ಟ್ ಮಾಡುವಂತೆ ಆರೋಪಿಗಳ ಪರ ವಕೀಲರು ಮನವಿ ಮಾಡಿಕೊಂಡಿದ್ದಾರೆ. ವಾಕಿಂಗ್ ಮಾಡುವ ಜಾಗದಲ್ಲಿ ಸೂರ್ಯನ ಬೆಳಕು ಇಲ್ಲ ಎಂದು ವಿಚಾರಣೆ ವೇಳೆ ದರ್ಶನ್ ಹೇಳಿದ್ದಾರೆ. ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ವಿಚಾರಣೆ ನಡೆಯುತ್ತಿದೆ. ದರ್ಶನ್, ಪವಿತ್ರಾ ಗೌಡ ಮುಂತಾದ ಪ್ರಮುಖ ಆರೋಪಿಗಳು ನ್ಯಾಯಾಂಗ ಬಂಧನದಲ್ಲಿ ಇದ್ದಾರೆ. (ಸೆಪ್ಟೆಂಬರ್ 25) ಸಿಸಿಹೆಚ್ -57ನೇ ಕೋರ್ಟ್‌ಗೆ ಆರೋಪಿಗಳು ಹಾಜರಾಗಿದ್ದಾರೆ. ದರ್ಶನ್ ಹಾಗೂ ಪವಿತ್ರಾ ಗೌಡ ಅವರು ವಿಡಿಯೋ ಕಾನ್ಫರೆನ್ಸ್ ಮೂಲಕ ವಿಚಾರಣೆಗೆ ಹಾಜರಾದರು. ಈ ವೇಳೆ ಜಡ್ಜ್ ಎದುರು ದರ್ಶನ್ ಅಳಲು ತೋಡಿಕೊಂಡಿದ್ದಾರೆ. ಕೋರ್ಟ್ ಆದೇಶವನ್ನು ಜೈಲಿನ ಅಧಿಕಾರಿಗಳು ಪಾಲಿಸುತ್ತಿಲ್ಲ ಎಂದು ದರ್ಶನ್ ಪರ ವಕೀಲರು ವಾದ ಮಾಡಿದ್ದಾರೆ. ವಿಡಿಯೋ ಕಾನ್ಫರೆನ್ಸ್ ವಿಚಾರಣೆ ವೇಳೆ ದರ್ಶನ್ ಅವರು ಬಿಳಿ ಬಣ್ಣದ ಜಾಕೆಟ್ ಧರಿಸಿದ್ದರು. ಉಳಿದ ಆರೋಪಿಗಳಾದ ಪುಟ್ಟಸ್ವಾಮಿ, ರಾಘವೇಂದ್ರ, ಧನರಾಜ್, ವಿನಯ್ ಕಾರ್ತಿಕ್, ಕೇಶವ ಮೂರ್ತಿ, ನಿಖಿಲ್ ನಾಯಕ್ ಕೋರ್ಟ್‌ಗೆ ಖುದ್ದು ಹಾಜರಾಗಿದ್ದಾರೆ. ಆರೋಪಿ ನಂದೀಶ್ ನಂದೀಶ್ ಗೈರಾಗಿದ್ದಾನೆ. ಪ್ರಕರಣದಿಂದ ಕೈಬಿಡುವಂತೆ ಕೆಲವು ಆರೋಪಿಗಳು ಅರ್ಜಿ ಸಲ್ಲಿಸಿದ್ದಾರೆ. ದರ್ಶನ್ ಪರ ವಕೀಲ ಸುನೀಲ್ ವಾದ ಮಾಡಿದ್ದಾರೆ. 'ದರ್ಶನ್ ಅವರನ್ನು ಇನ್ನೂ ಕ್ವಾರಂಟೈನ್‌ನಲ್ಲಿ ಇಟ್ಟಿದ್ದಾರೆ. ಜೈಲಿನ ಅಧಿಕಾರಿಗಳು ಕೋರ್ಟ್ ಆದೇಶ ಪಾಲಿಸುತ್ತಿಲ್ಲ.

## ಕಳಪೆ ಫೀಲ್ಡಿಂಗ್ ವಿಚಾರದಲ್ಲಿ ಪಾಕಿಸ್ತಾನವನ್ನೇ ಹಿಂದಿಕ್ಕಿದ ಟೀಂ ಇಂಡಿಯಾ



ಭಾರತ ತಂಡ ಏಷ್ಯಾಕಪ್ ಫೈನಲ್ ಪ್ರವೇಶಿಸಿದ್ದರೂ, ಅದರ ಕಳಪೆ ಫೀಲ್ಡಿಂಗ್ ಗಂಭೀರ ಕಳವಳವಾಗಿದೆ. ಈ ಬಾರಿಯ ಏಷ್ಯಾಕಪ್‌ನಲ್ಲಿ ಟೀಂ ಇಂಡಿಯಾ ಅತಿ ಹೆಚ್ಚು ಕ್ಯಾಚ್‌ಗಳನ್ನು ಕೈಬಿಟ್ಟ ತಂಡವಾಗಿದೆ. ಅಭಿಷೇಕ್ ಶರ್ಮಾ ಮತ್ತು ಕುಲ್ದೀಪ್ ಯಾದವ್ ಅವರ ಕಳಪೆ ಫೀಲ್ಡಿಂಗ್ ವಿಶೇಷವಾಗಿ ನಿರಾಶಾದಾಯಕ. ದುಬೈ ಮೈದಾನದ ಲೈಟಿಂಗ್ ಕೂಡ ಇದಕ್ಕೆ ಕಾರಣವೆಂದು ಹೇಳಲಾಗಿದೆ. ಫೈನಲ್‌ನಲ್ಲಿ ಈ ಸಮಸ್ಯೆಯನ್ನು ನಿವಾರಿಸಿಕೊಳ್ಳದಿದ್ದರೆ ಭಾರತಕ್ಕೆ ತೊಂದರೆಯಾಗಬಹುದು. ಏಷ್ಯಾಕಪ್ ಫೈನಲ್‌ಗೆ ಭಾರತ ಸ್ಥಾನ ಖಚಿತ ಪಡಿಸಿಕೊಂಡಿದೆ. ಬಾಂಗ್ಲಾದೇಶವನ್ನು 41 ರನ್‌ಗಳಿಂದ ಸೋಲಿಸಿ, ಟೀಂ ಇಂಡಿಯಾ 12ನೇ ಬಾರಿಗೆ ಫೈನಲ್ ತಲುಪಿದೆ. ಆದರೆ ಈ ಗೆಲುವಿನ ಹೊರತಾಗಿಯೂ ಟೀಂ ಇಂಡಿಯಾಕ್ಕೆ ಅದೊಂದು ಸಮಸ್ಯೆ ದೊಡ್ಡ ತಲೆನೋವಾಗಿ ಪರಿಣಮಿಸಿದೆ. ಇಷ್ಟು ದಿನ ಪಾಕಿಸ್ತಾನ ತಂಡ ಯಾವ ವಿಷಯಕ್ಕೆ ಸಬಂಧಿಸಿದಂತೆ ನಗೆಪಾಟಲಿಗೀಡಾಗುತಿತ್ತೋ ಇದೀಗ ಅದೇ ವಿಷಯಕ್ಕೆ ಟೀಂ ಇಂಡಿಯಾವನ್ನು ವ್ಯಂಗ್ಯ ಮಾಡಲಾಗುತ್ತಿದೆ. ವಾಸ್ತವವಾಗಿ ಈ ಬಾರಿಯ ಏಷ್ಯಾಕಪ್‌ನಲ್ಲಿ ಅತಿ ಹೆಚ್ಚು ಕ್ಯಾಚ್‌ಗಳನ್ನು ಕೈಬಿಟ್ಟ ತಂಡವೆಂಬ ಬೇಡದ ದಾಖಲೆಯನ್ನು ಟೀಂ ಇಂಡಿಯಾ ತನ್ನ ಖಾತೆಗೆ ಹಾಕಿಕೊಂಡಿದೆ. ಏಷ್ಯಾಕಪ್‌ನಲ್ಲಿ ಅತಿ ಹೆಚ್ಚು ಕ್ಯಾಚ್‌ಗಳನ್ನು ಕೈಬಿಟ್ಟ ತಂಡಗಳ ಬಗ್ಗೆ ಹೇಳುವುದಾದರೆ ಈ ಪಟ್ಟಿಯಲ್ಲಿ ಟೀಂ ಇಂಡಿಯಾ ಮೊದಲ ಸ್ಥಾನದಲಿದ್ದು, ಇದುವರೆಗೆ ಬರೋಬ್ಬರಿ 12 ಕ್ಯಾಚ್‌ಗಳನ್ನು ಕೈಚೆಲ್ಲಿದೆ. ಭಾರತದ ಕ್ಯಾಚಿಂಗ್ ಸರಾಸರಿ ಕೇವಲ 67.5 ಪ್ರತಿಶತ ಆಗಿದೆ. ಇತ್ತ ಈ ವಿಚಾರದಲ್ಲಿ ಗಮನಾರ್ಹ ಸುಧಾರಣೆ ಕಂಡಿರುವ ಪಾಕಿಸ್ತಾನದ ಕ್ಯಾಚಿಂಗ್ ಸರಾಸರಿ ಶೇ. 86.7 ರಷ್ಟಾಗಿದೆ.

ನಾಚಿಕೆಗೇಡಿನ ಸಂಗತಿಯೆಂದರೆ ಬಾಂಗ್ಲಾದೇಶ, ಶ್ರೀಲಂಕಾ, ಅಫ್ಘಾನಿಸ್ತಾನ, ಒಮಾನ್ ಮತ್ತು ಯುಎಇ ತಂಡಗಳು ಕೂಡ ಟೀಂ ಇಂಡಿಯಾಕ್ಕಿಂತ ಉತ್ತಮ ಕ್ಯಾಚಿಂಗ್ ಸರಾಸರಿ ಹೊಂದಿವೆ. ಭಾರತದ ನಂತರ, ಹಾಂಗ್ ಕಾಂಗ್ ಅತಿ ಹೆಚ್ಚು (11) ಕ್ಯಾಚ್‌ಗಳನ್ನು ಕೈಬಿಟ್ಟಿದ್ದರೆ, ಬಾಂಗ್ಲಾದೇಶ 8, ಶ್ರೀಲಂಕಾ 6, ಅಫ್ಘಾನಿಸ್ತಾನ ಮತ್ತು ಓಮನ್ ತಲಾ 4 ಕ್ಯಾಚ್‌ಗಳನ್ನು ಕೈಬಿಟ್ಟಿವೆ. ಪಾಕಿಸ್ತಾನ 3 ಕ್ಯಾಚ್‌ಗಳನ್ನು ಕೈಬಿಟ್ಟಿದ್ದರೆ, ಯುಎಇ ಕೇವಲ 2 ಕ್ಯಾಚ್‌ಗಳನ್ನು ಕೈಬಿಟ್ಟಿದೆ. ಅತ್ಯುತ್ತಮ ಬ್ಯಾಟಿಂಗ್ ಮತ್ತು ಬೌಲಿಂಗ್‌ನಿಂದಾಗಿ ಟೀಂ ಇಂಡಿಯಾ ಏಷ್ಯಾಕಪ್ ಫೈನಲ್‌ಗೆ ಅರ್ಹತೆ ಪಡೆದಿದೆ. ಆದರೆ ಫೀಲ್ಡಿಂಗ್ ಪ್ರಮುಖ ಸಮಸ್ಯೆಯಾಗಿಯೇ ಉಳಿದಿದೆ. ಅಭಿಷೇಕ್ ಶರ್ಮಾ ಮತ್ತು ಕುಲ್ದೀಪ್ ಯಾದವ್ ಫೀಲ್ಡಿಂಗ್ ವಿಷಯದಲ್ಲಿ ಹೆಚ್ಚು ನಿರಾಶೆಗೊಳಿಸಿದ್ದಾರೆ.

**ತಪ್ಪು ತಿದ್ದಿಕೊಳ್ಳುವುದು ಯಾವಾಗ**

## ಕರುಣ್ ನಾಯರ್‌ಗೆ ಗೇಟ್‌ಪಾಸ್..


ಭಾರತ ತಂಡವು ವೆಸ್ಟ್ ವಿಂಡೀಸ್ ವಿರುದ್ಧ ಎರಡು ಟೆಸ್ಟ್ ಪಂದ್ಯಗಳನ್ನ ಆಡಲಿದೆ. ಈ ಸರಣಿಗೆ ಟೀಂ ಇಂಡಿಯಾ ಪ್ರಕಟವಾಗಿದ್ದು, ಮೂವರು ಕನ್ನಡಿಗರಿಗೆ ಸ್ಥಾನ ನೀಡಲಾಗಿದೆ. ಕರುಣ್ ನಾಯರ್‌ಗೆ ಗೇಟ್‌ಪಾಸ್ ನೀಡಲಾಗಿದೆ. ಭಾರತ ತಂಡವು ವೆಸ್ಟ್ ವಿಂಡೀಸ್ ವಿರುದ್ಧ ಎರಡು ಟೆಸ್ಟ್ ಪಂದ್ಯಗಳನ್ನ ಆಡಲಿದೆ. ಮೊದಲ ಪಂದ್ಯವು ಅ.2 ರಂದು ಗುಜರಾತ್‌ನ ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ನಡೆಯಲಿದೆ. ಎರಡನೇ ಟೆಸ್ಟ್ ಪಂದ್ಯವು ದೆಹಲಿಯ ಅರುಣ್ ಜೇಟ್ಲಿ ಮೈದಾನದಲ್ಲಿ ನಡೆಯಲಿದೆ. ಇದೀಗ ಬಿಸಿಸಿಐ ಬಲಿಷ್ಠ ತಂಡ ಪ್ರಕಟಿಸಿದ್ದು, ಅದರಲ್ಲಿ ಮೂವರು ಕನ್ನಡಿಗರಿಗೆ ಸ್ಥಾನ ನೀಡಲಾಗಿದೆ. ಕೆ.ಎಲ್. ರಾಹುಲ್, ಪ್ರಸಿದ್ಧ್ ಕೃಷ್ಣ ಹಾಗೂ ದೇವದತ್ ಪಡಿಕಲ್‌ಗೆ ಸ್ಥಾನ ನೀಡಲಾಗಿದೆ.

ಇನ್ನು ಇಂಗ್ಲೆಂಡ್ ವಿರುದ್ಧ ಸರಣಿಯಲ್ಲಿ ಆಯ್ಕೆ ಆಗಿದ್ದ, ಕರುಣ್ ನಾಯರ್ ಅವರನ್ನು ಕೈಬಿಡಲಾಗಿದೆ. ಟೀಂ ಇಂಡಿಯಾ ಪರ ಒಟ್ಟು 63 ಟೆಸ್ಟ್ ಪಂದ್ಯಗಳನ್ನು ಆಡಿರುವ ಕೆ.ಎಲ್.ರಾಹುಲ್, 111 ಇನ್ನಿಂಗ್ಸ್‌ಗಳಲ್ಲಿ 3789 ರನ್‌ಗಳಿಸಿದ್ದಾರೆ. ಪ್ರಸಿದ್ಧ್ ಕೃಷ್ಣ ಬೌಲಿಂಗ್ ವಿಭಾಗದ ಪ್ರಮುಖ ಅಸ್ತ್ರವಾಗಿದ್ದಾರೆ. ಪ್ರಸಿದ್ಧ್ ಟೀಂ ಇಂಡಿಯಾ ಪರ 6 ಪಂದ್ಯಗಳನ್ನ ಆಡಿ, ಒಟ್ಟು 22 ವಿಕೆಟ್ ಪಡೆದಿದ್ದಾರೆ. ಇನ್ನು ತಂಡಕ್ಕೆ ಕಂಬ್ಯಾಕ್ ಮಾಡಿರುವ ದೇವದತ್ ಪಡಿಕ್ಕಲ್, ಎರಡು ಟೆಸ್ಟ್ ಪಂದ್ಯಗಳನ್ನ ಆಡಿ ಮೂರು ಇನ್ನಿಂಗ್ಸ್‌ನಲ್ಲಿ 90 ರನ್‌ಗಳಿಸಿದ್ದಾರೆ. ರಿಷಬ್ ಪಂತ್ ತಂಡದಲ್ಲಿ ಸ್ಥಾನ ಪಡೆಯದ ಹಿನ್ನೆಲೆಯಲ್ಲಿ ಕೆ.ಎಲ್.ರಾಹುಲ್ ಮೇಲೆ ವಿಕೆಟ್ ಕೀಪಿಂಗ್ ಜವಾಬ್ದಾರಿ ಬಿದ್ದಿದೆ. ಹಾಗೆಯೇ ಶುಬ್ಮನ್ ಗಿಲ್ ತಂಡದ ನಾಯಕರಾಗಿ ಮುನ್ನಡೆಸಲಿದ್ದು, ಉಪನಾಯಕರಾಗಿ ರವೀಂದ್ರ ಜಡೇಜಾ ಬಡ್ತಿ ಪಡೆದಿದ್ದಾರೆ.

**ಕನ್ನಡಿಗರಿಗೆ ಟೀಂ ಇಂಡಿಯಾದಲ್ಲಿ ಸ್ಥಾನ..!**



## ತಾವೇ ತೋಡಿದ್ದ ಹಳ್ಳಕ್ಕೆ ಮತ್ತೆ ಬಿದ್ದ ಅಯ್ಯರ್



ಟೀಮ್ ಇಂಡಿಯಾದ ಸ್ಟಾರ್ ಪ್ಲೇಯರ್ ಶ್ರೇಯಸ್ ಅಯ್ಯರ್ ಕರಿಯರ್ ಅತಂತ್ರಕ್ಕೆ ಸಿಲುಕಿದೆ. ಕಾರಣ ಆತನೇ ಮಾಡಿಕೊಂಡ ಯಡವಟ್ಟಾ ಇಲ್ಲ ಆತನ ನಿರ್ಲಕ್ಷ್ಯವಾ ಆತನ ಗಾಂಚಲಿಯೇ ಕರಿಯರ್ ಮುಳ್ಳಾಗ್ತಿದೆಯಾ ಎಂಬ ಅನುಮಾನ ಮೂಡಿದೆ. ಶ್ರೇಯಸ್ ಅಯ್ಯರ್, ಟೀಮ್ ಇಂಡಿಯಾದ ಆಲ್ ಫಾರ್ಮೆಟ್ ಪ್ಲೇಯರ್. ಮಿಡಲ್ ಆರ್ಡರ್‌ನ ನಂಬಿಕಸ್ಥ ಬ್ಯಾಟರ್. ಈ ನಂಬಿಕಸ್ಥ ಶ್ರೇಯಸ್ ಅಯ್ಯರ್, ಒಂದಿಲ್ಲೊಂದು ಚರ್ಚೆಯಲ್ಲಿರ್ತಾರೆ.

ಇನ್ನೇನು ಟೀಮ್ ಇಂಡಿಯಾ ಟೆಸ್ಟ್ ತಂಡಕ್ಕೆ ಕಮ್‌ಬ್ಯಾಕ್ ಮಾಡ್ತಾರೆ. ವಿಂಡೀಸ್ ಸರಣಿಯಲ್ಲಿ ಕಾಣಿಸಿಕೊಳ್ತಾರೆ ಎಂಬ ನಿರೀಕ್ಷೆ ಹುಟ್ಟುಹಾಕಿದ್ದ ಶ್ರೇಯಸ್, ಫ್ಯಾನ್ಸ್‌ಗೆ ಶಾಕ್ ನೀಡಿದ್ದಾರೆ. ಶ್ರೇಯಸ್ ಅಯ್ಯರ್ ಕರಿಯರ್ ಮುಂದೇನು ಎಂಬ ಪ್ರಶ್ನೆಗೂ ನಾಂದಿಯಾಡಿದೆ.

2024, ಫೆಬ್ರವರಿ ಇಂಗ್ಲೆಂಡ್ ಎದುರಿನ ವಿಶಾಖಪಟ್ಟಣಂ ಟೆಸ್ಟ್. ಈ ಟೆಸ್ಟ್ ಸರಣಿಯಲ್ಲಿ ವೈಫಲ್ಯ ಅನುಭವಿಸಿದ್ದ ಶ್ರೇಯಸ್, ನಂತರದ 3 ಟೆಸ್ಟ್ ಪಂದ್ಯಗಳಿಂದ ಡ್ರಾಪ್ ಆಗಿದ್ದರು. ಟೆಸ್ಟ್‌ನಿಂದ ಡ್ರಾಪ್ ಮಾಡಿದ್ದ ಸೆಲೆಕ್ಷನ್ ಕಮಿಟಿ ಮತ್ತು ಬಿಗ್‌ಬಾಸ್‌ಗಳು, ರಣಜಿ ಟ್ರೋಫಿಯನ್ನಾಡುವ ಖಡಕ್ ಸೂಚನೆ ನೀಡಿತ್ತು. ಬೆನ್ನು ನೋವಿನ ಕಾರಣ ನೀಡಿದ್ದ ಶ್ರೇಯಸ್, ಕ್ವಾರ್ಟರ್ ಫೈನಲ್‌ನಿಂದ ದೂರ ಉಳಿದಿದ್ದರು. ಅವತ್ತು ಅಯ್ಯರ್ ನಾಟಕ ಬಟಾಬಯಲಾಗಿತ್ತು. ಬೆನ್ನು ನೋವಿನ ಕಾರಣ ನೀಡಿ ರಣಜಿಗೆ ಚಕ್ಕರ್ ಹಾಕಿದ್ದ ಮುಂಬೈಕರ್‌ಗೆ ಎನ್‌ಸಿಎ ಶಾಕ್ ನೀಡಿತ್ತು. ಅಯ್ಯರ್‌ಗೆ ಹೊಸ ಇಂಜುರಿಯಾಗಿಲ್ಲ ಅಂತಾನೇ ಬಿಸಿಸಿಐಗೆ ವರದಿ ನೀಡಿತ್ತು. ಈ ವರದಿ ಬೆನ್ನಲ್ಲೇ ವಾರ್ಷಿಕ ಒಪ್ಪಂದದಿಂದ ಶ್ರೇಯಸ್ ಅಯ್ಯರ್‌ಗೆ ಕೊಕ್ ನೀಡಲಾಯ್ತು. ಇದರಿಂದ ಎಚ್ಚೆತ್ತ ಶ್ರೇಯಸ್ ಅಯ್ಯರ್, ರಣಜಿ ಸೆಮಿಫೈನಲ್‌ನಲ್ಲಿ ಕಣಕ್ಕಿಳಿದ್ದರು. ಇದು ಶ್ರೇಯಸ್ ಅಯ್ಯರ್ ಇಂಜುರಿ ಡ್ರಾಮಾಕ್ಕೆ ಮತ್ತಷ್ಟು ಪುಷ್ಠಿ ನೀಡಿತ್ತು. ಆದ್ರೀಗ ಅದೇ ಹಾದಿಯಲ್ಲೇ ಶ್ರೇಯಸ್, ಮತ್ತೆ ಹೆಜ್ಜೆಹಾಕಿದ್ದಾರೆ.

ಶ್ರೇಯಸ್ ಅಯ್ಯರ್ ಇಂಜುರಿ ಡ್ರಾಮಾ, ವೃತ್ತಿ ಜೀವನಕ್ಕೆ ಪೆಟ್ಟು ನೀಡಿತ್ತು. ರೋಹಿತ್ ಶರ್ಮಾ ಬಳಿಕ ನಾಯಕನಾಗಬೇಕಿದ್ದ ಅಯ್ಯರ್, ಟೀಮ್ ಇಂಡಿಯಾದಿಂದಲೇ ಹೊರ ಬೀಳುವಂತೆ ಮಾಡ್ತು. ಟೆಸ್ಟ್, ಟಿ20, ಏಕದಿನದಿಂದಲೂ ದೂರವಾಗಿದ್ದ ಶ್ರೇಯಸ್, 2025ರ ಚಾಂಪಿಯನ್ಸ್ ಟ್ರೋಫಿ ವೇಳೆ ತಂಡಕ್ಕೆ ಕಮ್‌ಬ್ಯಾಕ್ ಮಾಡಿದ್ದರು. ಟಿ20, ಟೆಸ್ಟ್‌ನಿಂದ ದೂರ ಉಳಿದಿದ್ದ ಶ್ರೇಯಸ್, ವೆಸ್ಟ್ ಇಂಡೀಸ್ ಎದುರಿನ ಟೆಸ್ಟ್ ಸರಣಿಗೆ ಆಯ್ಕೆ ಆಗ್ತಾರೆ ಎನ್ನಲಾಗಿತ್ತು. ಆದ್ರೀಗ ಕಮ್‌ಬ್ಯಾಕ್ ಹೊತ್ತಿನಲ್ಲೇ ಶ್ರೇಯಸ್ ನಡೆ ಭವಿಷ್ಯವನ್ನು ಅತಂತ್ರಕ್ಕೆ ಸಿಲುಕಿಸಿದೆ.

**ಬೆನ್ನು ನೋವಿನ ಪತ್ರ..!**

ಆಸ್ಟ್ರೇಲಿಯಾ ಎ ಎದುರಿನ 2ನೇ ಅನಧಿಕೃತ ಟೆಸ್ಟ್ ನಡೀತಿದೆ. ಇದೇ ಟೆಸ್ಟ್ ಸರಣಿಯಲ್ಲಿ ಭಾರತ ಎ ತಂಡ ನಾಯಕರಾಗಿದ್ದ ಶ್ರೇಯಸ್, 2ನೇ ಟೆಸ್ಟ್ ಪಂದ್ಯದ ಆರಂಭಕ್ಕೂ ಮುನ್ನ ಹಿಂದೆ ಸರಿದಿದ್ದಾರೆ. ವಿಶ್ರಾಂತಿ ಕುರಿತು ಅಜಿತ್ ಅಗರ್ಕರ್ ಜೊತೆ ಮಾತುಕತೆ ನಡೆಸಿರುವ ಶ್ರೇಯಸ್, ವಿಶ್ರಾಂತಿ ಕೋರಿ ಬಿಸಿಸಿಐಗೆ ಪತ್ರ ಬರೆದಿದ್ದಾರೆ. ಬೆನ್ನು ನೋವಿನ ಕಾರಣಕ್ಕೆ ಮೈದಾನದಲ್ಲಿ ಹೆಚ್ಚು ಸಮಯ ಕಳೆಯಲು ಆಗ್ತಿಲ್ಲ. ಹೀಗಾಗಿ ರೆಡ್ ಬಾಲ್ ಕ್ರಿಕೆಟ್‌ನಿಂದ ಕೆಲ ದಿನಗಳು ವಿಶ್ರಾಂತಿ ತೆಗೆದುಕೊಳ್ಳಲು ಬಯಸಿದ್ದಾಗಿ ತಿಳಿಸಿದ್ದಾರೆ.

ಇದೇ ಇ ಮೇಲ್ ಶ್ರೇಯಸ್ ಅಯ್ಯರ್ ಭವಿಷ್ಯ ಮುಂದೇನು ಎಂಬ ಪ್ರಶ್ನೆಗೆ ನಾಂದಿಯಾಡಿದೆ.

**ಗಾಂಚಲಿಯೇ ಕ್ರಿಕೆಟ್ ಕರಿಯರ್‌ಗೆ ಕುತ್ತು**

## ಟೀಂ ಇಂಡಿಯಾದಲ್ಲಿ ಜಡೇಜಾಗೆ ಬಡ್ತಿ..



ಏಷ್ಯಾಕಪ್ 2025 ರಲ್ಲಿ ಬಿ ಗುಂಪಿನ ಕೊನೆಯ ಲೀಗ್ ಪಂದ್ಯ ಶ್ರೀಲಂಕಾ ಹಾಗೂ ಅಫ್ಘಾನಿಸ್ತಾನ ನಡುವೆ ನಡೆಯಿತು. ಈ ಪಂದ್ಯವನ್ನು ಗೆದ್ದುಕೊಳ್ಳುವುದರೊಂದಿಗೆ ಶ್ರೀಲಂಕಾ ತಂಡ ಸೂಪರ್ 4 ಸುತ್ತಿಗೆ ಅರ್ಹತೆ ಪಡೆದರೆ, ಅಫ್ಘನ್ ತಂಡ ಟೂರ್ನಿಯಿಂದ ಹೊರಬಿದ್ದಿತು. ಇನ್ನು ಇದೇ ಪಂದ್ಯದಲ್ಲಿ ಅಫ್ಘನ್ ತಂಡದ ನಾಯಕ ರಶೀದ್ ಖಾನ್ ಕ್ಲೀನ್ ಬೌಲ್ಡ್ ಆಗಿದ್ದರೂ ಸಹ ಅಂಪೈರ್ ಬಳಿ ಡಿಆರ್‌ಎಸ್ ಕೇಳಿದರು. ಕೂಡಲೇ ಅಂಪೈರ್ ಪರಿಸ್ಥಿತಿಯನ್ನು ವಿವರಿಸಿದಾಗ ತನ್ನ ತಪ್ಪನ್ನು ಅರಿತುಕೊಂಡು ರಶೀದ್ ನಿರಾಶೆಯಿಂದ ಪೆವಿಲಿಯನ್‌ಗೆ ಮರಳಿದರು. ಇದೀಗ ಅದರ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ವಾಸ್ತವವಾಗಿ ಅಫ್ಘಾನಿಸ್ತಾನದ ಇನ್ನಿಂಗ್ಸ್ 18 ನೇ ಓವರ್‌ನಲ್ಲಿ ನಾಯಕ ರಶೀದ್ ಖಾನ್ ಮತ್ತು ಮೊಹಮ್ಮದ್ ನಬಿ ಕ್ರೀಸ್‌ನಲ್ಲಿದ್ದರು. ಇತ್ತ ಲಂಕಾ ವೇಗಿ ತುಷಾರ ಮೊದಲ ಎಸೆತದಲ್ಲಿ ನಿಧಾನಗತಿಯ ಯಾರ್ಕರ್ ಎಸೆದರು. ಈ ಎಸೆತವನ್ನು ಆಡುವಲ್ಲಿ ರಶೀದ್ ಖಾನ್ ಸಂಪೂರ್ಣವಾಗಿ ವಿಫಲರಾದರು. ಇದರಿಂದಾಗಿ ಚೆಂಡು ಅವರ ಬ್ಯಾಕ್ ಪ್ಯಾಡ್‌ಗೆ ಬಡಿದು ಸ್ಟಂಪ್‌ಗೆ ಬಡಿಯಿತು.

ಚೆಂಡು ಸ್ಟಂಪ್‌ಗೆ ಬಡಿದ ತಕ್ಷಣ, ತುಷಾರ ಎಲ್‌ಬಿಡಬ್ಲ್ಯೂಗಾಗಿ ಮೇಲ್ಮನವಿ ಸಲ್ಲಿಸಿದರು. ಆದರೆ ಈಗಾಗಲೇ ರಶೀದ್ ಬೌಲ್ಡ್ ಆಗಿದ್ದಾರೆ ಎಂಬುದು ತುಷಾರಗೆ ತಿಳಿದಿರಲಿಲ್ಲ. ಅಷ್ಟೇ ಅರಿವಿಲ್ಲದ ರಶೀದ್, ಅಂಪೈರ್ ಎಲ್‌ಬಿಡಬ್ಲ್ಯೂ ನೀಡಿದ್ದಾರೆಂದು ಭಾವಿಸಿ ರಿವ್ಯೂಗೆ ಸಿಗ್ನಲ್ ನೀಡಿದರು, ಆದರೆ ಅಂಪೈರ್ ತುಷಾರ್ ಕಡೆಗೆ ಬೆರಳು ತೋರಿಸುತ್ತಾ ರಶೀದ್ ಬೌಲ್ಡ್ ಆಗಿದ್ದಾರೆಂದು ಸೂಚಿಸಿದರು, ಏಕೆಂದರೆ ಚೆಂಡು ಅದಾಗಲೇ ಸ್ಟಂಪ್‌ಗೆ ಬಡಿದು ಬೇಲ್ಸ್‌ನ ಕೆಳಗೆ ಬೀಳಿಸಿತ್ತು. ಈ ಪಂದ್ಯದಲ್ಲಿ ರಶೀದ್ ಖಾನ್ 23 ಎಸೆತಗಳಲ್ಲಿ ಎರಡು ಬೌಂಡರಿ ಮತ್ತು ಒಂದು ಸಿಕ್ಸರ್ ನೆರವಿನಿಂದ 24 ರನ್ ಗಳಿಸಿದರು.

**ಕಂಬ್ಯಾಕ್ ಮಾಡಲಿಲ್ಲ ಸ್ಟಾರ್ ಪ್ಲೇಯರ್..!**

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966